ಸಂಪುಟ: 05 ಸಂಚಿಕೆ: 47 ಪುಟಗಳು: 08 ಗುರುವಾರ 01 ಮೇ 2025


www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಒಂದು ಒಳ್ಳೆಯ ಪುಸ್ತಕ ನೂರು ಉತ್ತಮ ಸ್ನೇಹಿತರಿಗೆ ಸಮ. ಆದರೆ, ಒಬ್ಬ ಒಳ್ಳೆಯ ಸ್ನೇಹಿತ ಒಂದು ಗ್ರಂಥಾಲಯಕ್ಕೆ ಸಮಾನ.



# ಜಲ ಸಂಪರ್ಕ ಪೋರ್ಟಲ್‌ಗೆ ಸೈಬರ್ ದಾಳಿ ಯತ್ನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನೀರಾವರಿ ಮತ್ತು ಒಳಚರಂಡಿ ಮಂಡಳಿಯ ಆನ್‌ಲೈನ್ ಅರ್ಜಿ ಸಲ್ಲಿಕೆಯ ಪೋರ್ಟಲ್‌ಗೆ ಸೈಬರ್ ದಾಳಿಯ ಯತ್ನ ನಡೆದಿದೆ. ಪ್ರಾಥಮಿಕ ಹಂತದ ತನಿಖೆಯಲ್ಲಿ ಸೂಕ್ಷ್ಮ ಗ್ರಾಹಕ ಮಾಹಿತಿ ಸೋರಿಕೆಯಾಗಿಲ್ಲ ಎನ್ನುವುದು ತಿಳಿದು ಬಂದಿದೆ. ಈ ಬಗ್ಗೆ ಹೆಚ್ಚಿನ ತನಿಖೆಯ ದೃಷ್ಟಿಯಿಂದ ಸೈಬರ್ ಠಾಣೆಗೆ ದೂರು ದಾಖಲಿಸಲಾಗಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿರುವ ಅವರು, ಏಪ್ರಿಲ್ 11 ರಂದು ಬೆಳಿಗ್ಗೆ ಜಲಮಂಡಳಿಯ ಆನ್‌ಲೈನ್ ವಾಟರ್ ಕನೆಕ್ಷನ್ ಅರ್ಜಿ ಸಲ್ಲಿಸುವ ವೆಬ್‌ಸೈಟ್‌ನಿಂದ ದತ್ತಾಂಶ ಕದಿಯುವ ಪ್ರಯತ್ನಗಳನ್ನು ನಡೆಸಲಾಗಿದೆ. ಈ ಬಗ್ಗೆ ಇಂಡಿಯನ್ ಕಂಪ್ಯೂಟರ್ ಎಮರ್ಜೆನ್ಸಿ ರೆಸ್ಪಾನ್ಸ್ ಟೀಮ್ ನ ಮಾಹಿತಿಯ ನಂತರ ನಮ್ಮ ಇಂಜಿನೀಯರ್‌ಗಳು ದಾಳಿಯನ್ನು ತಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಬೆಂಗಳೂರು ಜಲಮಂಡಳಿಯ ಗ್ರಾಹಕರ ದತ್ತಾಂಶಗಳನ್ನು ಕರ್ನಾಟಕ ಸರ್ಕಾರ ನಿರ್ವಹಿಸುವಂತಹ ರಾಜ್ಯ ದತ್ತಾಂಶ ಕೇಂದ್ರದಲ್ಲಿ ಸಂಗ್ರಹಿಸಲಾಗಿದೆ. ನೀರಿನ ಸಂಪರ್ಕಕ್ಕೆ ಅರ್ಜಿಗಳನ್ನು ಸಲ್ಲಿಸುವ ವೆಬ್‌ಸೈಟ್ ಪೋರ್ಟ್‌ಲ್ ಮೇಲೆ ದಾಳಿ ಮಾಡುವ ಪ್ರಯತ್ನ ನಡೆದಿದೆ. ಈ ಸೈಬರ್ ದಾಳಿಯನ್ನು ಯಶಸ್ವಿಯಾಗಿ ತಡೆಗಟ್ಟಲಾಗಿದೆ. ಸೈಬರ್ ದಾಳಿಕೋರರು ನಮ್ಮ ಒಟ್ಟಾರೆ ಗ್ರಾಹಕರ ದತ್ತಾಂಶದಲ್ಲಿ ಕೆಲವೇ ಭಾಗದ ಮಾಹಿತಿಯನ್ನು ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದ್ದು, ಪ್ರಾಥಮಿಕ ಹಂತದಲ್ಲಿ ಗ್ರಾಹಕರ ಸೂಕ್ಷ್ಮ ಮಾಹಿತಿಗಳು ಸೋರಿಕೆಯಾಗಿಲ್ಲ ಎನ್ನುವುದು ತಿಳಿದು ಬಂದಿದೆ.

**ಬ್ಲಾಕ್‌ಚೈನ್‌ನ ತಂತ್ರಜ್ಞಾನ ಅಳವಡಿಕೆಗೆ ಚಿಂತನೆ**

ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ವೆಬ್‌ಸೈಟ್‌ನಲ್ಲಿದ್ದಂತಹ ದತ್ತಾಂಶಗಳನ್ನು ಹೆಚ್ಚು ಸುರಕ್ಷಿತ ಕೇಂದ್ರೀಕೃತ ಸರ್ವರ್‌ಗಳಿಗೆ ವರ್ಗಾಯಿಸಲಾಗಿದೆ.

ಪಾರದರ್ಶಕ, ಸುರಕ್ಷಿತ ಹಾಗೂ ಟ್ಯಾಂಪರ್ - ರೆಸಿಸ್ಟಾಂಟ್ ಪ್ಲಾಟ್‌ಫಾರಂ ಆಗಿರುವಂತಹ ಬ್ಲಾಕ್‌ಚೈನ್‌ನಂತಹ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಚಿಂತನೆ ನಡೆಸಲಾಗುತ್ತಿದೆ.


## ವಿಜಯಪುರ ಜಿಲ್ಲಾ ವರದಿಗಾರನ್ನಾಗಿ ಇಲ್ಯಾಸ್ ಪಟೇಲ್ ಆಯ್ಕೆ



ಇಲ್ಯಾಸ್ ಪಟೇಲ್ ಬಳಗಾನೂರ

ಇವರನ್ನು ಗುಮ್ಮಟ ನಗರಿ ಎಂದೇ ಖ್ಯಾತಿ ಹೊಂದಿರುವ ವಿಜಯಪುರ ಜಿಲ್ಲಾ ವರದಿಗಾರ ಹಾಗೂ ರಾಜ್ಯ ವಿಶೇಷ ವರದಿಗಾರನ್ನಾಗಿ ಆಯ್ಕೆ ಮಾಡಲಾಗಿದೆ.
ಅಧಿಕಾರಿಗಳು ಹಾಗೂ ಜನ ಪ್ರತಿನಿಧಿಗಳು ಸುದ್ದಿ ಹಾಗೂ ಜಾಹಿರಾತುಗಳಿಗೆ ಇವರನ್ನು ಸಹಕರಿಸಬೇಕು.
ಫೋನ್ ನಂಬರ್ :
8722483897


# ಜಾತಿಗಣತಿಗೆ ಕೇಂದ್ರ ಅಸ್ತು

## ಕೈ ನಾಯಕರು ಸುಸ್ತೋ ಸುಸ್ತು

ಕಾಂಗ್ರೆಸ್‌ಗೆ ಬಿಗ್ ಶಾಕ್!

ಕೇಂದ್ರ ಸರ್ಕಾರವು ಜನ ಗಣತಿ ಜೊತೆ ಜಾತಿ ಗಣತಿ ನಡೆಸಲು ನಿರ್ಧಾರ!



• ಉದಯವಾಹಿನಿ, ಹೊಸದಿಲ್ಲಿ



ಕರ್ನಾಟಕದಲ್ಲಿ ಜಾತಿ ಗಣತಿ ಬಗ್ಗೆ ಜೋರು ಚರ್ಚೆ ನಡೆಯುತ್ತಿರುವಾಗಲೇ ಕೇಂದ್ರ ಸರ್ಕಾರವು ಜನ ಗಣತಿ ಜೊತೆ ಜಾತಿ ಗಣತಿ ನಡೆಸುವುದಾಗಿ ಘೋಷಣೆ ಮಾಡಿದೆ. ಈ ಮೂಲಕ ಮುಂದಿನ ವರ್ಷ ನಡೆಯುವ ರಾಷ್ಟ್ರೀಯ ಜನಗಣತಿಯಲ್ಲಿ ವಿವಿಧ ಜಾತಿಗಳು ಹಾಗೂ ಉಪಜಾತಿಗಳನ್ನು ಗಣತಿ ಕೂಡ ಮಾಡಲಾಗುತ್ತದೆ.



ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ರಾಜಕೀಯ ವ್ಯವಹಾರಗಳ ಸಮಿತಿ ಸಭೆಯಲ್ಲಿ ಮುಂದಿನ ಜನಗಣತಿಯಲ್ಲಿ ಜಾತಿ ಗಣತಿಯನ್ನು ಸೇರಿಸಲು ನಿರ್ಧರಿಸಲಾಗಿದೆ. ಈ ಬಗ್ಗೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ಸಚಿವ ಸಂಪುಟ ಸಭೆಯ ನಂತರ ಈ ಮಾಹಿತಿ ನೀಡಿದರು.

ಕಾಂಗ್ರೆಸ್ ಪಕ್ಷವು ಯಾವಾಗಲೂ ಜಾತಿ ಜನಗಣತಿಯನ್ನು ವಿರೋಧಿಸುತ್ತಿತ್ತು, ಸ್ವಾತಂತ್ರ್ಯದ ನಂತರ ಜನಗಣತಿಯಲ್ಲಿ ಜಾತಿಯನ್ನು ಸೇರಿಸಿಲ್ಲ. ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಜಾತಿ ಜನಗಣತಿಯನ್ನು ರಾಜಕೀಯ ಸಾಧನವಾಗಿ ಮಾತ್ರ ಬಳಸುತ್ತಿದ್ದಾರೆ ಎಂಬುದು ಇದರಿಂದ ಅರ್ಥವಾಗುತ್ತಿದೆ ಎಂದು ಅಶ್ವಿನಿ ವೈಷ್ಣವ್ ಹೇಳಿದರು.

### ಕೇಂದ್ರದ ನಿರ್ಧಾರಕ್ಕೆ ರಾಹುಲ್ ಸ್ವಾಗತ



ಮೋದಿ ಸರ್ಕಾರದ ಈ ನಿರ್ಧಾರವನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸ್ವಾಗತಿಸಿದ್ದಾರೆ. ಕೇಂದ್ರ ಸರ್ಕಾರ ನಮ್ಮ ದೃಷ್ಟಿಕೋನವನ್ನು ಅಳವಡಿಸಿಕೊಂಡಿದೆ, ಜಾತಿಗಣತಿಯನ್ನು ಯಾವಾಗ ಮಾಡುತ್ತೀರ ಎಂದು ಮಾಹಿತಿಯನ್ನು ಕೂಡ ನೀಡಿ ಎಂದು ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ. ಕಾಂಗ್ರೆಸ್ ಜಾತಿಗಣತಿ ನಡೆಸಲು ಕೇಂದ್ರ ಸರ್ಕಾರದ ಮೇಲೆ ಬಹಳ ಒತ್ತಡ ಹೇರಿತ್ತು. ಹಾಗೇ, ಕರ್ನಾಟಕ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಕಾಂಗ್ರೆಸ್ ಸರ್ಕಾರ ಜಾತಿ ಗಣತಿಯನ್ನು ನಡೆಸಿತ್ತು. ಜಾತಿ ಗಣತಿಯನ್ನು ನಡೆಸುವುದನ್ನು ಮತ್ತು ಮೀಸಲಾತಿಯ ಮೇಲಿನ 50% ಮಿತಿಯನ್ನು ತೆಗೆದುಹಾಕುವುದನ್ನು ಖಚಿತಪಡಿಸಿಕೊಳ್ಳುವುದಾಗಿ ಹೇಳಿದರು. ಹಾಗೇ, ಪ್ರಧಾನಿ ಮೋದಿ ಹೇಳಿದಂತೆ ಕೇವಲ 4 ವಿಶಾಲ ಜಾತಿ ವರ್ಗಗಳನ್ನು ಗುರುತಿಸುವ ಕಲ್ಪನೆಯನ್ನು ಕಾಂಗ್ರೆಸ್ ಬೆಂಬಲಿಸುತ್ತದೆ. ತೆಲಂಗಾಣದ ಮಾದರಿಗಳನ್ನು ಬಳಸಿಕೊಂಡು ಜಾತಿ ಜನಗಣತಿಯನ್ನು ವಿನ್ಯಾಸಗೊಳಿಸಲು ಸಹಾಯ ಮಾಡಲು ಸಿದ್ಧರಿದ್ದೇವೆ. ಆದರೆ ಸರ್ಕಾರವು ಒಂದು ಸಮಯವನ್ನು ನೀಡಬೇಕು'' ಎಂದು ರಾಹುಲ್ ಗಾಂಧಿ ಹೇಳಿದರು.



ಕೇಂದ್ರ ಸರ್ಕಾರದ ನಿರ್ಧಾರವನ್ನು ಸ್ವಾಗತ ಮಾಡುತ್ತೇವೆ. ರಾಜ್ಯದ ಜನರ ಪರವಾಗಿ ಪ್ರಧಾನಿಗೆ ಅಭಿನಂದನೆ ಸಲ್ಲಿಸುತ್ತೇನೆ. ಈ ಬಾರಿ ಜಾತಿಗಣತಿ ಆಗುತ್ತಿರುವುದು ಬಹಳ ವಿಶೇಷ. ಕರ್ನಾಟಕದಲ್ಲಿ ಜಾತಿಗಣತಿ ಬಹಳ ಗೊಂದಲ ಆಗಿತ್ತು. ಎಲ್ಲಾ ಜಾತಿಗಳ ಗಣತಿ ಮಾಡಿಲ್ಲ ಎಂದು ದೂರು ಬಂದಿತ್ತು. ಕೇಂದ್ರ ಸರ್ಕಾರ ವೈಜ್ಞಾನಿಕ, ಸ್ಪಷ್ಟವಾಗಿ ಸಮೀಕ್ಷೆ ಮಾಡುತ್ತೆ. ರಾಜ್ಯ ಸರ್ಕಾರ ಕದ್ದುಮುಚ್ಚಿ ಜಾತಿಗಣತಿಯನ್ನ ಮಾಡಿತ್ತು

-ಡಾ.ಅಶ್ವತ್ಥ್ ನಾರಾಯಣ್, ಶಾಸಕ



ಜನಗಣತಿ ಮಾಡಲು ರಾಜ್ಯ ಸರ್ಕಾರಕ್ಕೆ ಅಧಿಕಾರವಿಲ್ಲ. ಈ ಕುರಿತು ಸಂವಿಧಾನದಲ್ಲಿಯೇ ಸ್ಪಷ್ಟ ಉಲ್ಲೇಖ ಇದೆ. ಕೆಲ ರಾಜಕೀಯ ಪಕ್ಷಗಳು ತಮ್ಮ ಬೇಳೆ ಬೇಯಿಸಿಕೊಳ್ಳಲು, ಗಣತಿ ಮಾಡಿರುವುದನ್ನು ನೋಡಿದ್ದೇವೆ. ಕೇಂದ್ರ ಸರ್ಕಾರದ ನಿರ್ಧಾರವನ್ನು ಸ್ವಾಗತಿಸುತ್ತೇವೆ. ರಾಜ್ಯ ಸರ್ಕಾರ ಮಾಡಿಸಿರುವ ಸಮೀಕ್ಷೆ ಸರಿಯಾಗಿ ಆಗಿಲ್ಲ

-ರವಿಕುಮಾರ್, ಪರಿಷತ್ ವಿಪಕ್ಷ ಮುಖ್ಯ ಸಚೇತಕ

### ಯಾವಾಗ ಮಾಡ್ತೀರ ಹೇಳಿ; ರಾಹುಲ್ ಗಾಂಧಿ

**ಕೇಂದ್ರ ಸರ್ಕಾರದಿಂದ ಜಾತಿ ಗಣತಿಗೆ ಕಾರಣವೇನು**

ಜಾತಿ ಗಣತಿಯನ್ನು ರಾಜಕೀಯ ಉದ್ದೇಶಕ್ಕೆ ಬಳಸಿಕೊಳ್ಳಲಾಗುತ್ತಿದೆ. ಕೆಲ ರಾಜ್ಯಗಳು ಜಾತಿ ಗಣತಿಯನ್ನು ನಡೆಸಿವೆ. ಕೆಲ ರಾಜ್ಯಗಳು ಜಾತಿ ಸಮೀಕ್ಷೆ ನಡೆಸಿವೆ. ಇವೆಲ್ಲವೂ ಸಮಾಜದ ಸ್ವಾಸ್ಥ್ಯ ಹಾಳು ಮಾಡುವ ಸಾಧ್ಯತೆ ಇದೆ. ಹೀಗಾಗಿ, ಸತ್ಯವೇನು ಎಂಬುದನ್ನು ಖಾತ್ರಿಪಡಿಸಿಕೊಳ್ಳುವ ಉದ್ದೇಶದಿಂದ ಜನ ಗಣತಿಯಲ್ಲಿ ಜಾತಿ ಗಣತಿಯ ಮಾಹಿತಿಯನ್ನೂ ದಾಖಲಿಸಲಾಗುವುದು ಎಂದು ಕೇಂದ್ರ ಸಚಿವರು ಹೇಳಿದ್ದಾರೆ.



ಸಾಮಾಜಿಕ ಅಥವಾ ಆರ್ಥಿಕ ಜನಗಣತಿ ಮಾಡುತ್ತಾರಾ ಅಥವಾ ಜಾತಿ ಜನಗಣತಿ ಮಾಡುತ್ತಾರಾ ನನಗೆ ಗೊತ್ತಿಲ್ಲ. ಕೇವಲ ಜಾತಿ ಗಣತಿ, ಜನಗಣತಿ ಮಾಡುತ್ತೇವೆ ಅಂದಿದ್ದಾರೆ. ಸಾಮಾಜಿಕ, ಆರ್ಥಿಕ ಸರ್ವೆ ಬಹಳ ಮುಖ್ಯ ನಮ್ಮ ಜಾತಿಗಣತಿಯನ್ನು ಸಂಪುಟದಲ್ಲಿ ನಾವು ಮಂಡಿಸಿದ್ದೇವೆ, ಒಪ್ಪಿಗೆ ಕೇಳಿದ್ದೇವೆ. ಸಚಿವರು ಒಪ್ಪಿಗೆ ಕೊಟ್ಟ ಮೇಲೆ ಮತ್ತೆ ಸಂಪುಟದಲ್ಲಿ ಚರ್ಚೆಯಾಗುತ್ತಿದೆ. ಜಾತಿಗಣತಿ ಮಾಡುತ್ತೇವೆಂದು ನಾವು ಪ್ರಣಾಳಿಕೆಯಲ್ಲಿ ಹೇಳಿದ್ವಿ

-ಸಿದ್ದರಾಮಯ್ಯ, ಮುಖ್ಯಮಂತ್ರಿ



ಸಾಮಾಜಿಕ, ಆರ್ಥಿಕ, ಶೈಕ್ಷಣಿಕವಾಗಿ ಜಾತಿಗಣತಿ ಮಾಡಿ. ಕೇಂದ್ರ ಸರಕಾರ ಜನಸಂಖ್ಯೆ ಹಾಗೂ ಜಾತಿಗಣತಿ ಮಾಡಲಿಕ್ಕೆ ಹೊರಟಿದೆ. ಅದೇ ನಾವು ಜಾತಿಗಣತಿ ಮಾಡುವ ವೇಳೆ ಬಾರಿ ಟೀಕೆ ಮಾಡಿದರು. ಕೇಂದ್ರ ಸರಕಾರ ಈಗ ಜಾತಿಗಣತಿ ಮಾಡುವುದಾಗಿ ಹೇಳಿದೆ. ಇವಾಗ ಒಂದು ಹೇಳುವುದು, ಆಗಾವ ಒಂದು ಹೇಳುವುದು. ನಾವು ಮಾಡಿದಾಗ ಒಂದು ಟೀಕೆ ಅವರು ಮಾಡಿದಾಗ ಒಂದು ಟೀಕೆ. ಈ ತರಹದ ಧ್ವಂಧ್ವತೆಯನ್ನು ಜನ ಒಪ್ಪುವುದಿಲ್ಲ

-ಆರ್ ಬಿ ತಿಮ್ಮಾಪುರ, ಅಬಕಾರಿ ಸಚಿವ



ಬಿಜೆಪಿಯವರಿಗೆ ಈಗ ಎಚ್ಚರ ಆಗಿರಬೇಕು. ಶೈಕ್ಷಣಿಕ, ಸಾಮಾಜಿಕ ಗಣತಿ ಮಾಡಿದರೆ ಒಳ್ಳೆಯದು. ಎಲ್ಲಾ ಸಮುದಾಯದವರು ಕಷ್ಟದ ಪರಿಸ್ಥಿತಿಯಲ್ಲಿದ್ದಾರೆ. ಸಿದ್ದರಾಮಯ್ಯರು ಸಾಮಾಜಿಕ, ಶೈಕ್ಷಣಿಕ ಗಣತಿ ಮಾಡಿಸಿದರು. ಅದೇ ಮಾದರಿಯಲ್ಲಿ ಮಾಡಿದರೆ ಒಳ್ಳೆಯದು. ಕಾಂಗ್ರೆಸ್‌ನವರಿಗೆ ಇದ್ದಂತ ಅಂತ ಒಳ್ಳೇ ಬುದ್ಧಿ ಬಿಜೆಪಿಗಿಲ್ಲ

-ಶಿವರಾಜ ತಂಗಡಗಿ, ಸಚಿವ



ಕೇಂದ್ರ ಸರ್ಕಾರದ ನಿರ್ಧಾರವನ್ನು ಸ್ವಾಗತ ಮಾಡುತ್ತೇವೆ. ಕೇಂದ್ರ ಸರ್ಕಾರದಿಂದ ವೈಜ್ಞಾನಿಕ ಗಣತಿ ನಡೆಯಲಿದೆ. ಕಾಂಗ್ರೆಸ್ ಯಾವತ್ತೂ ಜಾತಿಗಣತಿ ಮಾಡಲು ಯತ್ನಿಸಿಲ್ಲ. ಈಗ ಪ್ರಧಾನಿ ಮೋದಿ ಸಂಪುಟ ತೀರ್ಮಾನ ಮಾಡಿದೆ

-ಸುಧಾಕರ ರೆಡ್ಡಿ, ಬಿಜೆಪಿ ರಾಜ್ಯ ಸಹ ಉಸ್ತುವಾರಿ

## ವರ್ಷವಾದ್ರೂ ಬದಲಾಗದ ಇಂದಿರಾ ಕ್ಯಾಂಟೀನ್ ಮೆನು

• ಉದಯವಾಹಿನಿ, ಬೆಂಗಳೂರು

ಬಡವರು, ಮಧ್ಯಮ ವರ್ಗದ ಜನರ ಅಕ್ಷಯ ಪಾತ್ರೆಯಂತಿರುವ ಇಂದಿರಾ ಕ್ಯಾಂಟೀನ್ ಇದೀಗ ಕಾಟಾಚಾರಕ್ಕೆ ನಡೆಯುತ್ತಿದೆಯಾ ಎಂಬ ಪ್ರಶ್ನೆ ಉದ್ಭವವಾಗಿದೆ. ಸಂಬಳ ಸರಿಯಾಗಿ ಕೊಡುತ್ತಿಲ್ಲ, ನಿರ್ವಹಣೆಯಲ್ಲಿ ಸಮಸ್ಯೆಯಿದೆ ಹೀಗೆ ಸಾಲುಸಾಲು ಕಾರಣ ಹೇಳಿ ಬಾಗಿಲು ಮುಚ್ಚುತ್ತಿರುವ ಇಂದಿರಾ ಕ್ಯಾಂಟೀನ್‌ನಲ್ಲಿ, ಇದೀಗ ವರ್ಷಗಳೇ ಉರುಳಿದರೂ ಮೆನು ಬದಲಾಗದೆ ಹಾಗೆ ಉಳಿದುಬಿಟ್ಟಿದೆ. ಮುದ್ದೆ ಕೊಡುತ್ತೇವೆ, ಚಪಾತಿ ಕೊಡುತ್ತೇವೆ ಅಂತ ಭರವಸೆ ನೀಡಿದ್ದ ಸರ್ಕಾರ, ಈಗ ಹಲವೆಡೆ ಮೆನು ಬದಲಾಯಿಸದೆ ಇರುವುದು ಜನರಿಗೆ ಸಂಕಷ್ಟ ತಂದಿಟ್ಟಿದೆ. ಬಡವರಿಗೆ, ಮಧ್ಯಮವರ್ಗದವರಿಗೆ ಕಡಿಮೆ ಬೆಲೆಯಲ್ಲಿ ಊಟ ನೀಡುತ್ತಿರುವ ಇಂದಿರಾ ಕ್ಯಾಂಟೀನ್ ಇದೀಗ ಸರ್ಕಾರದ ದಿವ್ಯ ನಿರ್ಲಕ್ಷ್ಯಕ್ಕೆ ಮೂಲೆ ಸೇರಿದೆಯಾ ಎಂಬ ಶಂಕೆ ಮೂಡಿದೆ. ಕಳೆದ ವರ್ಷ ಆಗಸ್ಟ್‌ನಲ್ಲಿ ಬೆಂಗಳೂರಿನ ಇಂದಿರಾ ಕ್ಯಾಂಟೀನ್‌ಗಳ ಮೆನು ಬದಲಿಸುತ್ತೇವೆ ಅಂತ ಸರ್ಕಾರ ಹೇಳಿಕೊಂಡಿತ್ತು. ಅಲ್ಲದೆ, ಕೆಲವೇ ಕೆಲವು ಕ್ಯಾಂಟೀನ್‌ಗಳಲ್ಲಿ ಮುದ್ದೆ ಕೊಟ್ಟು ಫೋಸ್ ಕೊಟ್ಟಿತ್ತು. ಆದರೆ ಇದೀಗ ವರ್ಷ ಉರುಳಿದರೂ ಕೂಡ ಇಂದಿರಾ ಕ್ಯಾಂಟೀನ್ ಮೆನು ಬದಲಾಗದೆ ಹಾಗೆ ಉಳಿದುಬಿಟ್ಟಿದೆ. ಈ ಹಿಂದೆ ಇಂದಿರಾ ಕ್ಯಾಂಟೀನ್ ಗುತ್ತಿಗೆ ತೆಗೆದುಕೊಂಡಿದ್ದ ಶೆಫ್ ಟಾಕ್ ಕಂಪನಿಗೆ ಗುಡ್ ಬೈ ಹೇಳಿದ್ದ ಸರ್ಕಾರ, ಅದಾದ ಬಳಿಕ ರಿವಾರ್ಡ್ಸ್ ಅನ್ನೋ ಕಂಪನಿಗೆ ಗುತ್ತಿಗೆ ನೀಡಿತ್ತು. ಹೊಸ ಕಂಪನಿ ಬಂದ ಬಳಿಕವಾದರೂ ಕ್ಯಾಂಟೀನ್‌ಗಳ ಮೆನು ಬದಲಾಗುತ್ತೆ ಅಂದುಕೊಂಡಿದ್ದ ಬೆಂಗಳೂರಿನ ಜನರಿಗೆ ಇದೀಗ ನಿರಾಸೆ ಉಂಟಾಗಿದೆ.

## ಜನಗಣತಿಯೊಂದಿಗೆ ಜಾತಿ ಗಣತಿ ಮೋದಿ ಅವರ ದಿಟ್ಟ ನಿರ್ಧಾರ

• ಉದಯವಾಹಿನಿ, ಬೆಂಗಳೂರು

ಮುಂಬರುವ ಜನಗಣತಿಯೊಂದಿಗೆ ಜಾತಿ ಗಣತಿಯನ್ನು ನಡೆಸಲು ಕೇಂದ್ರ ಸಂಪುಟ ನಿರ್ಧರಿಸಿದ್ದು, ಇದು ಪ್ರಧಾನಿ ನರೇಂದ್ರ ಮೋದಿ ಅವರ ದಿಟ್ಟ ನಿರ್ಧಾರ ಎಂದು ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಬಣ್ಣಿಸಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ ಅವರು, ಮುಂಬರುವ ಜನಗಣತಿ ಜೊತೆಯಲ್ಲಿಯೇ ಜಾತಿ ಗಣತಿಯನ್ನೂ ನಡೆಸುವ ಮಹತ್ವದ ನಿರ್ಧಾರವನ್ನು ಮೋದಿಯವರ ನೇತೃತ್ವದಲ್ಲಿ ಕೈಗೊಳ್ಳಲಾಗಿದೆ. ಅವರ ಕ್ರಿಯಾಶೀಲ ನಾಯಕತ್ವದಲ್ಲಿ ಇದು ಐತಿಹಾಸಿಕ ಮತ್ತು ದೂರದೃಷ್ಟಿಯ ನಿರ್ಧಾರವಾಗಿದೆ. ಜಾತಿ ಗಣತಿಯು 1931ರ ನಂತರ ಇದೇ ಮೊದಲ ಬಾರಿಗೆ ಮುಂಬರುವ ರಾಷ್ಟ್ರೀಯ ಜನಗಣತಿಯ ಭಾಗವಾಗಲಿದೆ ಎಂಬುದು ಗಮನಾರ್ಹ ಎಂದಿದ್ದಾರೆ. ಈ ಮಹತ್ವದ ಹೆಜ್ಜೆ ಭಾರತವು ಅಧಿಕೃತ, ವೈಜ್ಞಾನಿಕ ಮತ್ತು ಪಾರದರ್ಶಕವಾದ ಜಾತಿ ದತ್ತಾಂಶ ಹೊಂದಲಿದೆ. ಕೇವಲ ರಾಜಕೀಯ ಪ್ರೇರಿತ ರಾಜ್ಯ ಮಟ್ಟದ ಸಮೀಕ್ಷೆಗಳು ವಿಶ್ವಾಸಾರ್ಹತೆ, ಏಕರೂಪತೆ ಹೊಂದಿರುವುದಿಲ್ಲ ಎಂಬುದು ನನ್ನ ಸ್ಪಷ್ಟ ಅಭಿಪ್ರಾಯ ಎಂದು ಹೇಳಿದರು.

## ಮಾರ್ಗ ಮಧ್ಯೆಯೇ ಬಸ್ ನಿಲ್ಲಿಸಿ ನಮಾಜ್ ಮಾಡಿದ ಡ್ರೈವರ್


• ಉದಯವಾಹಿನಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ಸಾರಿಗೆ ಬಸ್ ಅನ್ನು ಮಾರ್ಗ ಮಧ್ಯೆ ನಿಲ್ಲಿಸಿ ಸೀಟ್ ಮೇಲೆ ಕುಳಿತು ಚಾಲಕರೊಬ್ಬರು ನಮಾಜ್ ಮಾಡಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲ ತಾಣದಲ್ಲಿ ವಿಡಿಯೋ ವೈರಲ್ ಆಗಿದ್ದು, ಸೂಕ್ತ ತನಿಖೆ ನಡೆಸಿ ಕ್ರಮಕ್ಕೈಗೊಳ್ಳುವಂತೆ ಸಾರಿಗೆ ಸಚಿವರು ಸೂಚನೆ ನೀಡಿದ್ದಾರೆ.

ಹುಬ್ಬಳ್ಳಿ - ವಿಶಾಲಗಡ್ ಮಧ್ಯೆ ಸಂಚರಿಸುತ್ತಿದ್ದ ಹಾನಗಲ್ ಘಟಕದ (ಕೆಎ-27 ಎಫ್ 0914) ಬಸ್ ಇದಾಗಿದ್ದು, ರಸ್ತೆ ಮಾರ್ಗದ ಮಧ್ಯೆಯೇ ಬಸ್ ನಿಲ್ಲಿಸಿ ತನ್ನ ಹಿಂಬದಿ ಸೀಟಿನಲ್ಲಿ ಕುಳಿತು ಚಾಲಕ ನಮಾಜ್ ಮಾಡಿದ್ದಾರೆ. ಅಲ್ಲಿಯೇ ಇದ್ದ ಪ್ರಯಾಣಿಕರೊಬ್ಬರು ಚಾಲಕ ನಮಾಜ್ ಮಾಡುವ ದೃಶ್ಯಗಳನ್ನು ಸೆರೆ ಹಿಡಿದು ಸಾಮಾಜಿಕ ಜಾಲತಾಣಕ್ಕೆ ಹರಿಬಿಟ್ಟಿದ್ದಾರೆ.

**ಸಾಮಾಜಿಕ ಜಾಲತಾಣದಲ್ಲಿ ವಿರೋಧ**

ಇನ್ನು ಬಸ್ ಡ್ರೈವರ್ ರಸ್ತೆ ಮಧ್ಯೆಯೇ ಬಸ್ ನಿಲ್ಲಿಸಿ ನಮಾಜ್ ಮಾಡಿದ್ದಕ್ಕೆ ಸಾಮಾಜಿಕ ಜಾಲತಾಣದಲ್ಲಿ ವ್ಯಾಪಕ ವಿರೋಧ ವ್ಯಕ್ತವಾಗಿದೆ.



ನೀತಿ ನಿಯಮ ಕಡ್ಡಾಯ

ಧರ್ಮ, ಆಚರಣೆಗಳನ್ನು ಮನೆಯಲ್ಲಿ ಪಾಲಿಸಬೇಕು. ಇವರ ನಮಾಜ್‌ನಿಂದ ಬಸ್‌ನಲ್ಲಿರುವ ಪ್ರಯಾಣಿಕರ ಸಮಯ ವ್ಯರ್ಥ ಎಂದು ಕೆಲ ನೆಟ್ಟಿಗರು ಕಿಡಿಕಾರಿದ್ದಾರೆ. ಇನ್ನು ಈ ವಿಚಾರವಾಗಿ ಕೆಲವರು ಕಾಂಗ್ರೆಸ್ ಸರ್ಕಾರದ ಕುಮ್ಮಕ್ಕು ಇದು ಎಂದು ಕೆಲವರು ವಾಗ್ದಾಳಿ ನಡೆಸಿದ್ದಾರೆ.

**ತನಿಖೆಗೆ ಸೂಚನೆ ನೀಡಿದ ಸಾರಿಗೆ ಸಚಿವ**

ಈ ಬಗ್ಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಯವರು ಪ್ರತಿಕ್ರಿಯೆ ನೀಡಿದ್ದು, ವಾಯವ್ಯ ಕರ್ನಾಟಕ ಸಾರಿಗೆ ಸಂಸ್ಥೆ ಅಧಿಕಾರಿಗಳಿಗೆ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ. ದಿನಾಂಕ 29-04-2025 ರ ಸಂಜೆ ಹುಬ್ಬಳ್ಳಿಯಿಂದ ಹಾವೇರಿಗೆ ಕಾರ್ಯಾಚರಣೆಯಾಗುತ್ತಿದ್ದ ವಾಯವ್ಯ ರಸ್ತೆಸಾರಿಗೆ ಸಂಸ್ಥೆ ಬಸ್ ನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ, ಚಾಲಕ-ಕಂ-ನಿರ್ವಾಹಕ ಮಾರ್ಗ ಮಧ್ಯೆ ಬಸ್ ನಿಲ್ಲಿಸಿ ನಮಾಜ್ ಮಾಡಿರುವ ಬಗ್ಗೆ ಪ್ರಯಾಣಿಕರೊಬ್ಬರು ಮಾಡಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರವಾಗುತ್ತಿದೆ.

## ಕಾಂಗ್ರೆಸ್ ಟ್ವೀಟ್‌ಗೆ ಸ್ವತಃ ಮಲ್ಲಿಕಾರ್ಜುನ ಖರ್ಗೆ ಬೇಸರ!


■ ನರೇಂದ್ರ ಮೋದಿ ತಲೆ ಇಲ್ಲದ ಫೋಟೋವನ್ನು ಹಾಕಿ ಗಾಯಬ್ ಎಂದು ಕಾಂಗ್ರೆಸ್ ಟ್ವೀಟ್

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರ ತಲೆ ಇಲ್ಲದ ಫೋಟೋವನ್ನು ಟ್ವೀಟ್ ಮಾಡಿದ ಕಾಂಗ್ರೆಸ್ ಪಕ್ಷದ ನಡೆಗೆ ಸ್ವತಃ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬೇಸರ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಬುಧವಾರ ಈ ಕುರಿತಾಗಿ ಮಾತನಾಡಿದ ಅವರು, ಯಾವುದೇ ವ್ಯಕ್ತಿಗೆ, ಯಾರೇ ಇರಲಿ, ಅದು ಪ್ರಧಾನಮಂತ್ರಿ ಇರಲಿ, ಯಾವುದೇ ಮುಖಂಡರೇ ಆಗಿರಲಿ, ಅವರ ಗೌರವಕ್ಕೆ ಧಕ್ಕೆ ತರುವಂತ ಕೆಲಸ ಮಾಡಬಾರದು ಎಂದು ಕಿವಿಮಾತು ಹೇಳಿದ್ದಾರೆ. ಅವರಾಗಲೀ ನಮ್ಮವರೇ ಆಗಲಿ ಈ ರೀತಿ ಮಾಡೋದು ಸರಿಯಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್ ಅಧಿಕೃತ ಟ್ವಿಟ್ಟರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಫೋಟೋವನ್ನು ಹಾಕಲಾಗಿತ್ತು.

ತಲೆ ಇಲ್ಲದ ಫೋಟೋ ಹಾಗಿ ಗಾಯಬ್ ಎಂಬ ತಲೆಬರಹ ನೀಡಲಾಗಿತ್ತು. ಇದಕ್ಕೆ ಬಿಜೆಪಿ ಟೀಕೆ ಮಾಡಿತ್ತು. ಈ ಹಿನ್ನೆಲೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಪ್ರತಿಕ್ರಿಯೆ ನೀಡಿದರು.




ದೇಶದಲ್ಲಿ ನಿರಂಕುಶ ಅಧಿಕಾರ

ವಿಶೇಷ ಅಧಿವೇಶನ ಕರಿಯಲು ಪ್ರಧಾನಿಗೆ ಪತ್ರ ಬರೆದ ವಿಚಾರವಾಗಿ ಇದೇ ವೇಳೆ ಮಾತನಾಡಿ, ನಾವು ಎಲ್ಲಾ ಪಕ್ಷದವರು ಒಂದಾಗಿ ಅಧಿವೇಶನ ಕರೆಯಬೇಕು ಅಂತ ಹೇಳಿದ್ದೇವೆ. ಪ್ರಧಾನ ಮಂತ್ರಿಗಳು ಅಧಿವೇಶನದಲ್ಲಿ ಇರಬೇಕು.ಪ್ರಧಾನ ಮಂತ್ರಿಗಳು ಯಾವೆಲ್ಲ ಕ್ರಮ ತೆಗೆದುಕೊಂಡಿದ್ದಾರೆ ಅದನ್ನು ಹೇಳಬೇಕು ಎಂದರು.

ಕೆಲವೊಂದು ಗುಪ್ತ ಕಾರ್ಯಸೂಚಿಗಳಿರುತ್ತೆ ಅದನ್ನು ಅವರು ಮಾಡಲಿ. ಇವತ್ತಿನ ಪರಿಸ್ಥಿತಿ ಏನಿದೆ ಅವರು ಏನು ಮಾಡಬೇಕು ಎಂಬುದು ಮನಸ್ಸಿನಲ್ಲಿದೆ ಅದನ್ನ ಫ್ಲೋರ್ ಲೀಡರ್ಸ್‌ನ ಕರೆದು ಮಾತನಾಡಿಸುವುದು ಒಳ್ಳೆಯದು. ಈಗಾಗಲೇ ನಾವು ಅವರಿಗೆ ಸಂಪೂರ್ಣ ಅಧಿಕಾರ ಕೊಟ್ಟಿದ್ದೇವೆ ಎಂದರು. ಯಾವುದೇ ರೀತಿಯಲ್ಲಿ ಭಾರತ ದೇಶದ ಸೈನಿಕರಿಗಾಗಲಿ ಜನರಿಗಾಗಿ ತೊಂದರೆ ಆಗಬಾರದು. ಪಾಕಿಸ್ತಾನವನ್ನ ಹತೋಟಿಯಲ್ಲಿ ಇಡಲು ಯಾವುದೇ ಕ್ರಮಕ್ಕೂ ನಾವು ಪ್ರಧಾನಿಗಳಿಗೆ ಬೆಂಬಲ ಕೊಟ್ಟಿದ್ದೇವೆ. ಜನರ ಅನಿಸಿಕೆ ಹಾಗೂ ದೇಶದಲ್ಲಿ ಇರುವ ಭಾವನೆ, ಜೊತೆಗೆ ಎಲ್ಲಾ ಪಕ್ಷಗಳು ಅವರಿಗೆ ಅಧಿಕಾರ ನೀಡಿದ್ದೇವೆ ಎಂದು ತಿಳಿಸಿದರು.


**ವಿವಾದಾತ್ಮಕ ಹೇಳಿಕೆ ಕೊಡದಂತೆ ಕೈ ನಾಯಕರಿಗೆ ಎಚ್ಚರಿಕೆ**

ಪಾಕಿಸ್ತಾನದ ವಿರುದ್ಧ ಕಾರ್ಯಾಚರಣೆ ಅಧಿಕಾರ ಮಾಡಲು ಕೊಟ್ಟಿದ್ದೇವೆ. ಅದನ್ನ ಅವರು ಉಪಯೋಗ ಮಾಡಿಕೊಳ್ಳಲಿ, ತಮ್ಮ ಕೆಲಸವನ್ನು ಅವರು ಮಾಡಲಿ. ದೇಶದ ರಕ್ಷಣೆ ಮಾಡುವುದಕ್ಕೆ ಆದಷ್ಟು ಬೇಗನೆ ಒಳ್ಳೆಯ ಹೆಜ್ಜೆಯನ್ನು ಇಡಬೇಕು ಎಂದು ಸಲಹೆ ನೀಡಿದರು. ಪಹಲ್ಗಾಮ್ ದಾಳಿಯ ಬಳಿಕ ರಾಜಕೀಯ ಆರೋಪ ಪ್ರತ್ಯಾರೋಪಗಳು ನಡೆಯುತ್ತಿವೆ. ಈ ಹಿನ್ನಲೆಯಲ್ಲಿ ಯಾವುದೇ ವಿವಾದಾತ್ಮಕ ಹೇಳಿಕೆ ಕೊಡದಂತೆ ಕಾಂಗ್ರೆಸ್ ನಾಯಕರಿಗೆ ಈಗಾಗಲೇ ಮಲ್ಲಿಕಾರ್ಜುನ ಖರ್ಗೆ ಎಚ್ಚರಿಕೆಯನ್ನು ನೀಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,791/Gram24ct ₹8,976/Gram22ct ಬೆಳ್ಳಿ: ₹100.40/Gram

# ದಾಸರ ಪದಗಳ ಗಾಯನ

• ಉದಯವಾಹಿನಿ, ಬೆಂಗಳೂರು




ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್.ಕೆ. ವಾದೀಂದ್ರಾ ಚಾರ್ಯರ ನೇತೃತ್ವದಲ್ಲಿ ಮೇ 1, ಗುರುವಾರ ಸಂಜೆ 5-30ಕ್ಕೆ ಶ್ರೀಮತಿ ಮೈತ್ರಿ ಧನುಷ್ ಅವರಿಂದ ದಾಸರ ಪದಗಳ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಕು ಪರಿಣಿತಾ ಪಿಟೀಲು ವಾದನದಲ್ಲಿ, ಶ್ರೀಶ್ರೀ ಮುರಳಿ ನಾರಾಯಣರಾವ್ ಮೃದಂಗ ವಾದನದಲ್ಲಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರಾಚಾರ್ ತಿಳಿಸಿದ್ದಾರೆ.

**ಸ್ಥಳ:** ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

# ಸಮಾನತೆಯ ಹರಿಕಾರ ಬಸವಣ್ಣನವರ ಜಯಂತಿ ಆಚರಣೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ರಾಜಾಜಿ ಹಾಲ್‌ನಲ್ಲಿ ಸಾಮಾಜಿಕ ಕ್ರಾಂತಿಯ ಹರಿಕಾರ ಜಗಜ್ಯೋತಿ ಬಸವೇಶ್ವರರ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಬಿಸಿಯು ಪ್ರಭಾರ ಕುಲಪತಿಗಳಾದ ಪ್ರೊ. ಕೆ.ಆರ್.ಜಲಜಾ, ಕುಲಸಚಿವ (ಮೌಲ್ಯಮಾಪನ) ಪ್ರೊ. ರಮೇಶ್ ಬಿ., ಬೋಧಕ- ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಬಸವಣ್ಣನವರಿಗೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಕುಲಪತಿ ಮತ್ತು ಕುಲಸಚಿವರು ಹನ್ನೆರಡನೇ ಶತಮಾನದಲ್ಲಿ ಜಗತ್ತಿಗೆ ಸಮಾನತೆಯ ಸಂದೇಶ ಸಾರಿದ ಬಸವೇಶ್ವರರ ತತ್ವ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಅಭಿಪ್ರಾಯಪಟ್ಟರು.

ಜಾತಿ ತಾರತಮ್ಯ, ಲಿಂಗ ತಾರತಮ್ಯ, ಬಡವ-ಬಲ್ಲಿದ ಬೇಧಭಾವ ತೊಡೆದುಹಾಕಿ ಸರ್ವರಿಗೂ ಸಮಾನ ಘನತೆಯ ಬದುಕು ಕಟ್ಟಿಕೊಡುವ ನಿಟ್ಟಿನಲ್ಲಿ ಬಸವಣ್ಣನವರು ಅಗಾಧವಾಗಿ ಶ್ರಮಿಸಿದರೆಂದು ಪ್ರೊ. ರಮೇಶ್ ವಿವರಿಸಿದರು.

ಅನುಭವ ಮಂಟಪದ ಮೂಲಕ ಪ್ರಪಂಚಕ್ಕೆ ಪ್ರಜಾಪ್ರಭುತ್ವ ವ್ಯವಸ್ಥೆಯ ಮಾದ ರಿಯನ್ನು ಪರಿಚಯಿಸಿದ ಶರಣ ಚಳವಳಿ ಭಾರತ ಸಂವಿಧಾನದ ಆಶಯಗಳಿಗೂ ಪ್ರೇರಣೆ ಒದಗಿಸಿತೆಂದು ಅವರು ವಿಶ್ಲೇಷಿಸಿದರು. ಕಾಯಕವೇ ಕೈಲಾಸ ತತ್ವದ ಮೂಲಕ ಶ್ರಮಜೀವನದ ಮೌಲ್ಯವನ್ನು ಎತ್ತಿಹಿಡಿದ ಬಸವಣ್ಣನವರು ಮಾನವೀಯ ಧರ್ಮ ಪ್ರತಿಪಾದಿಸಿದ ಮಹಾ ಸಂತರೆಂದು ಅವರು ಬಣ್ಣಿಸಿದರು. ಕುಲಸಚಿವರಾದ ಟಿ. ಜವರೇಗೌಡರ ಮಾರ್ಗದರ್ಶನ ದಲ್ಲಿ ಏರ್ಪಡಿಸಲಾಗಿದ್ದ ಸಮಾರಂಭದಲ್ಲಿ ಹಿರಿಯ ಪ್ರಾಧ್ಯಾಪಕ ರಾದ ಪ್ರೊ.ದೇವರಾಜ್, ಪ್ರೊ. ಹರಿಪ್ರಸಾದ್, ಪ್ರೊ. ರಿತಿಕಾ ಸಿನ್ಹಾ, ಪ್ರೊ.ನಿರ್ಮಲಾ, ಎನ್.ಎಸ್.ಎಸ್. ಸಂಯೋಜಕರಾದ ಡಾ.ಗೋವಿಂದೇಗೌಡ ಉಪ ಸ್ಥಿತರಿದ್ದರು. ಕನ್ನಡ ವಿಭಾಗದ ಡಾ. ಮಂಜು ಸಿ.ಎನ್., ತಂಡದವರು ವಚನ ಗಾಯನ ಪ್ರಸ್ತುತಪಡಿಸಿದರು.

# ಸಮಾಜ ಪರಿವರ್ತನೆಯ ಇತಿಹಾಸ ಬರೆದ ಬಸವಣ್ಣ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬಸವಣ್ಣ ಸಾಮಾಜಿಕ ಕ್ರಾಂತಿ ಮಾಡಿದ್ದಷ್ಟೇ ಅಲ್ಲ, ಸಾಮಾಜಿಕ ಪರಿವರ್ತನೆಗೆ ಇತಿಹಾಸದಲ್ಲೇ ಶಾಶ್ವತವಾಗಿ ಉಳಿಯುವ ಪ್ರಯತ್ನಗಳನ್ನು ಮಾಡಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಬಸವ ಸಮಿತಿ ವತಿಯಿಂದ ಆಯೋ ಜಿಸಲಾಗಿದ್ದ ಬಸವ ಜಯಂತಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಸವಣ್ಣ ವಿಶ್ವಗುರುಗಳು, ಅವರನ್ನು ಸಾಮಾಜಿಕ ಕ್ರಾಂತಿ ಮಾಡಿದರೂ ಎಂದು ಸೀಮಿತಗೊಳಿಸಬಾರದು. ಸಮಾಜದ ಪರಿವರ್ತನೆಗೆ ಇತಿಹಾಸದಲ್ಲಿ ಶಾಶ್ವತವಾಗಿ ನೆನಪಿನಲ್ಲಿ ಉಳಿಯುವ ಕೆಲಸವನ್ನು ಬಸವಣ್ಣ ತಮ ಜೀವಿತ ಅವಧಿಯಲ್ಲಿ ಮಾಡಿದ್ದಾರೆ. ಅವರನ್ನು ನೆನೆಯುವುದು ಭಾರತದ ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿ ಎಂದರು. ರಾಜ್ಯ ಸರ್ಕಾರ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದೆ. ಅವರ ಜಯಂತಿಯ ಸಂದರ್ಭದಲ್ಲಿ ನಾಡಿನ ಜನರಿಗೆ ಶುಭ ಹಾರೈಸುವುದಾಗಿ ಹೇಳಿದರು. ಎಂ.ಬಿ.ಪಾಟೀಲ್, ಮಾಜಿ ಸಚಿವೆ ಲೀಲಾದೇವಿ ಆರ್ ಪ್ರಸಾದ್, ಬಸವ ಸಮಿತಿಯ ಪದಾಧಿಕಾರಿಗಳು ಇದ್ದರು.

# ವೃತ್ತಿಪರ ಅಂತರ ರಾಜ್ಯ ಕಳ್ಳನ ಬಂಧನ 30 ಲಕ್ಷ ಮೌಲ್ಯದ ಚಿನ್ನಾಭರಣ ಜಪ್ತಿ

• ಉದಯವಾಹಿನಿ, ಬೆಂಗಳೂರು

ವೃತ್ತಿಪರ ಅಂತರ ರಾಜ್ಯ ಕಳ್ಳನನ್ನು ಕೆ.ಆರ್.ಪುರ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಮದನಪಲ್ಲಿಯ ಗಿಜ್ಜಲುಕುಂಟ ಗ್ರಾಮದ ಚಲ್ಲನರಸಿಂಹಲು (32) ಬಂಧಿತ ಆರೋಪಿ. ಮತ್ತೊಬ್ಬ ಆರೋಪಿ ಶ್ರೀನಿವಾಸ್ ಅಲಿಯಾಸ್ ಸೀನ ತಲೆಮರೆಸಿಕೊಂಡಿದ್ದು, ಶೋಧ ನಡೆಸಲಾಗುತ್ತಿದೆ. ಆರೋಪಿಯಿಂದ 30 ಲಕ್ಷ ಮೌಲ್ಯದ ಚಿನ್ನ ಹಾಗೂ ಬೆಳ್ಳಿ ಸಾಮಗ್ರಿಯನ್ನು ಜಪ್ತಿ ಮಾಡಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಬಿ.ದಯಾನಂದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಎಲೆಕ್ಟ್ರಾನಿಕ್ ಸಿಟಿ ಕೋನಪ್ಪನ ಅಗ್ರಹಾರದ ಗೋವಿಂದಶೆಟ್ಟಿ ಪಾಳ್ಯದಲ್ಲಿ ಆರೋಪಿ ಬಾಡಿಗೆ ಮನೆಯಲ್ಲಿ ನೆಲಸಿದ್ದ. ಹಗಲು ವೇಳೆ ಬೀಗ ಹಾಕಿದ ಮನೆಗಳನ್ನು ಗುರುತಿಸಿ ರಾತ್ರಿ ವೇಳೆ ಕಳ್ಳತನ ಮಾಡುತ್ತಿದ್ದ ಎಂದು ಅವರು ಮಾಹಿತಿ ನೀಡಿದರು. ದೂರುದಾರರು ಅಕ್ಟೋಬರ್ 15ರಂದು ಮನೆಗೆ ಬೀಗ ಹಾಕಿಕೊಂಡು ಸಂಬಂಧಿಕರ ಮನೆಗೆ ತೆರಳಿದ್ದರು.

ಅಕ್ಟೋಬರ್ 15 ರಂದು ವಾಪಸ್ ಬಂದು ನೋಡುವಾಗ ಮನೆಯ ಬೀಗ ಒಡೆದು ಚಿನ್ನಾಭರಣ ಕಳ್ಳತನ ಮಾಡಿಕೊಂಡು ಹೋಗಿರುವುದು ಗೊತ್ತಾಗಿತ್ತು. ಮನೆಯ ಮಾಲೀಕರು ನೀಡಿದ ದೂರು ಆಧರಿಸಿ ಕಾರ್ಯಾಚರಣೆ ನಡೆಸಿ ಕೋನಪ್ಪನ ಅಗ್ರಹಾರದ ಹುಸ್ಕೂರು ಕೆರೆಯ ಬಳಿ ಆರೋಪಿಯನ್ನು ಬಂಧಿಸಲಾಯಿತು ಎಂದು ತಿಳಿಸಿದರು. ಆರೋಪಿಯ ಬಂಧನದಿಂದ ಕೆ.ಆರ್.ಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ 10 ಕನ್ನ ಕಳವು, ಎರಡು ಮನೆ ಕಳ್ಳತನ, ಕಾಡುಗೋಡಿ ಠಾಣೆಯಲ್ಲಿ ದಾಖಲಾಗಿದ್ದ ಒಂದು ಕನ್ನ ಕಳವು ಪ್ರಕರಣಗಳು ಪತ್ತೆಯಾಗಿವೆ ಎಂದು ಪೊಲೀಸರು ಹೇಳಿದರು.

**10 ಲಕ್ಷ ಬೆಲೆ ಬಾಳುವ ಚಿನ್ನಾಭರಣ ಕಳ್ಳತನ:** ಮತ್ತೊಬ್ಬ ವೃತ್ತಿಪರ ಕಳ್ಳ ಜ್ಞಾನ ಪ್ರಕಾಶ್ ಎಂಬಾತನನ್ನು ಕೆ.ಆರ್.ಪುರ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಆರೋಪಿಯಿಂದ 10 ಲಕ್ಷ ಮೌಲ್ಯದ ಚಿನ್ನಾಭರಣ ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು. ಕೋಲಾರ ಜಿಲ್ಲೆಯ ಕೆಜಿಎಫ್ ತಾಲ್ಲೂಕಿನ ಅಂಡರ್ ಸನ್ ಪೇಟೆಯ ಲೂರ್ದು ನಗರದ ಜ್ಞಾನ ಪ್ರಕಾಶ್ ನಗರಕ್ಕೆ ಬಂದು ತನ್ನ ಸಹಚರ ಪ್ರೇಮ್ ಜತೆಗೆ ಸೇರಿಕೊಂಡು ಕಳ್ಳತನ ಮಾಡಿಕೊಂಡು ಪರಾರಿ ಆಗುತ್ತಿದ್ದ ಎಂದು ಪೊಲೀಸರು ಹೇಳಿದರು.

# ಪ್ರಾಥಮಿಕ ಹಂತದ ತನಿಖೆಯಲ್ಲಿ ಸೂಕ್ಷ್ಮ ಗ್ರಾಹಕ ಮಾಹಿತಿ ಸೋರಿಕೆಯಾಗಿಲ್ಲ

## ಬೆಂಗಳೂರು ನೀರಾವರಿ ಮಂಡಳಿಯ ಆನ್‌ಲೈನ್ ಜಲ ಸಂಪರ್ಕ ಪೋರ್ಟಲ್‌ಗೆ ಸೈಬರ್ ದಾಳಿ ಯತ್ನ ವಿಫಲ

• ಉದಯವಾಹಿನಿ, ಬೆಂಗಳೂರು






**ಬೆಂಗಳೂರು ಜಲಮಂಡಳಿಯ ಆನ್‌ಲೈನ್ ವಾಟರ್ ಕನೆಕ್ಷನ್ ಅರ್ಜಿ ಸಲ್ಲಿಸುವ ವೆಬ್‌ಸೈಟ್‌ನಿಂದ ದತ್ತಾಂಶ ಕದಿಯುವ ಪ್ರಯತ್ನಗಳನ್ನು ನಡೆಸಲಾಗಿದೆ. ಆದರೆ ಖದೀಮರ ಪ್ರಯತ್ನ ವಿಫಲವಾಗಿದೆ. ಈ ಸೈಬರ್ ದಾಳಿಯನ್ನು ಯಶಸ್ವಿಯಾಗಿ ತಡೆಗಟ್ಟಲಾಗಿದೆ. ಸೈಬರ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ತನಿಖೆ ನಡೆಯುತ್ತಿದೆ**

**-ಡಾ. ರಾಮ್ ಪ್ರಸಾತ್ ಮನೋಹರ್, ಜಲಮಂಡಳಿ ಅಧ್ಯಕ್ಷ**

ಬೆಂಗಳೂರು ನೀರಾವರಿ, ಒಳಚರಂಡಿ ಮಂಡಳಿಯ ಆನ್‌ಲೈನ್ ಅರ್ಜಿ ಸಲ್ಲಿಕೆಯ ಪೋರ್ಟಲ್‌ಗೆ ಸೈಬರ್ ದಾಳಿಯ ಯತ್ನ ನಡೆದಿದೆ. ಪ್ರಾಥಮಿಕ ಹಂತದ ತನಿಖೆಯಲ್ಲಿ ಸೂಕ್ಷ್ಮ ಗ್ರಾಹಕ ಮಾಹಿತಿ ಸೋರಿಕೆಯಾಗಿಲ್ಲ ಎನ್ನುವುದು ತಿಳಿದು ಬಂದಿದೆ. ಈ ಬಗ್ಗೆ ಹೆಚ್ಚಿನ ತನಿಖೆಯ ದೃಷ್ಟಿಯಿಂದ ಸೈಬರ್ ಠಾಣೆಗೆ ದೂರು ದಾಖಲಿಸಲಾಗಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ನೀಡಿರುವ ಅವರು,



ಏಪ್ರಿಲ್ 11 ರಂದು ಬೆಳಿಗ್ಗೆ ಜಲಮಂಡಳಿಯ ಆನ್‌ಲೈನ್ ವಾಟರ್ ಕನೆಕ್ಷನ್ ಅರ್ಜಿ ಸಲ್ಲಿಸುವ ವೆಬ್‌ಸೈಟ್‌ನಿಂದ ದತ್ತಾಂಶ ಕದಿಯುವ ಪ್ರಯತ್ನಗಳನ್ನು ನಡೆಸಲಾಗಿದೆ. ಈ ಬಗ್ಗೆ ಇಂಡಿಯನ್ ಕಂಪ್ಯೂಟರ್ ಎಮರ್ಜೆನ್ಸಿ ರೆಸ್ಪಾನ್ಸ್ ಟೀಮ್‌ನ ಮಾಹಿತಿಯ ನಂತರ ನಮ್ಮ ಇಂಜಿನೀಯರ್‌ಗಳು ದಾಳಿಯನ್ನು ತಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಬೆಂಗಳೂರು ಜಲಮಂಡಳಿಯ ಗ್ರಾಹಕರ ದತ್ತಾಂಶಗಳನ್ನು ಕರ್ನಾಟಕ ಸರ್ಕಾರ ನಿರ್ವಹಿಸುವಂತಹ ರಾಜ್ಯ ದತ್ತಾಂಶ ಕೇಂದ್ರದಲ್ಲಿ ಸಂಗ್ರಹಿಸಲಾಗಿದೆ. ನೀರಿನ ಸಂಪರ್ಕಕ್ಕೆ ಅರ್ಜಿಗಳನ್ನು ಸಲ್ಲಿಸುವ ವೆಬ್‌ಸೈಟ್ ಪೋರ್ಟಲ್ ಮೇಲೆ ದಾಳಿ ಮಾಡುವ ಪ್ರಯತ್ನ ನಡೆದಿದೆ. ಈ ಸೈಬರ್ ದಾಳಿಯನ್ನು ಯಶಸ್ವಿಯಾಗಿ ತಡೆಗಟ್ಟಲಾಗಿದೆ. ಸೈಬರ್ ದಾಳಿಕೋರರು ನಮ್ಮ ಒಟ್ಟಾರೆ ಗ್ರಾಹಕರ ದತ್ತಾಂಶದಲ್ಲಿ ಕೆಲವೇ ಭಾಗದ ಮಾಹಿತಿಯನ್ನು ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದ್ದು, ಪ್ರಾಥಮಿಕ ಹಂತದಲ್ಲಿ ಗ್ರಾಹಕರ ಸೂಕ್ಷ್ಮ ಮಾಹಿತಿಗಳು ಸೋರಿಕೆಯಾಗಿಲ್ಲ ಎನ್ನುವುದು ತಿಳಿದು ಬಂದಿದೆ.

**ಬ್ಲಾಕ್‌ಚೈನ್‌ನ ತಂತ್ರಜ್ಞಾನ ಅಳವಡಿಕೆಗೆ ಚಿಂತನೆ:** ಇಂತಹ ಪ್ರಕರಣ ಗಳು ಮರುಕಳಿಸದಂತೆ ಎಚ್ಚರಿಕೆಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ವೆಬ್‌ಸೈಟ್ ನಲ್ಲಿದ್ದಂತಹ ದತ್ತಾಂಶಗಳನ್ನು ಹೆಚ್ಚು ಸುರಕ್ಷಿತ ಕೇಂದ್ರೀಕೃತ ಸರ್ವರ್‌ಗಳಿಗೆ ವರ್ಗಾಯಿಸಲಾಗಿದೆ. ಪಾರದರ್ಶಕ, ಸುರಕ್ಷಿತ, ಟ್ಯಾಂಪರ್ - ರೆಸಿಸ್ಟಾಂಟ್ ಪ್ಲಾಟ್‌ಫಾರಂ ಆಗಿರುವಂತಹ ಬ್ಲಾಕ್‌ಚೈನ್‌ನಂತಹ ತಂತ್ರಜ್ಞಾನವನ್ನು ಅಳವಡಿ ಸಿಕೊಳ್ಳುವ ನಿಟ್ಟಿನಲ್ಲಿ ಚಿಂತನೆ ನಡೆಸಲಾಗುತ್ತಿದೆ. ''ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳ ಭದ್ರತೆಯನ್ನು ಇನ್ನಷ್ಟು ಬಲಪಡಿಸಲು ಬ್ಲಾಕ್ ಚೇನ್ ತಂತ್ರಜ್ಞಾನವನ್ನು ಭವಿಷ್ಯದ ದೀರ್ಘಕಾಲಿಕ ಕ್ರಮವಾಗಿ ಪರಿಗಣಿಸಲಾಗುತ್ತಿದೆ. ಈ ಪ್ರಕರಣದ ಹೆಚ್ಚಿನ ತನಿಖೆಗಾಗಿ ಬಗ್ಗೆ ದೂರು ಸಲ್ಲಿಸಲಾಗಿದ್ದು, ದತ್ತಾಂಶದ ಮಾರಾಟ ಹಾಗೂ ಅದರ ದುರುಪಯೋಗ ಪಡೆದುಕೊಳ್ಳುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವುದಾಗಿ ಜಲಮಂಡಳಿ ಅಧ್ಯಕ್ಷರು ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಹಕರ ಮಾಹಿತಿಯ ಭದ್ರತೆಗೆ ಬಿಡ್ಲ್ಯೂಎಸ್ ಎಸ್‌ಬಿ ಬದ್ಧವಾಗಿದ್ದು, ಸಾರ್ವಜನಿಕ ಸೇವೆಗಳ ನಿರ್ವಹಣೆಗೆ ದೃಢವಾದ ಡಿಜಿಟಲ್ ಮೂಲಸೌಕರ್ಯ ನಿರ್ಮಾಣಕ್ಕೆ ಸಕ್ರೀಯವಾಗಿದೆ ಎಂದು ಸಂಸ್ಥೆ ತಿಳಿಸಿದೆ.

- **ಬಿಡ್ಲ್ಯೂಎಸ್‌ಎಸ್‌ಬಿ ಆನ್‌ಲೈನ್ ಅರ್ಜಿ ಸಲ್ಲಿಕೆಯ ಪೋರ್ಟಲ್‌ಗೆ ಸೈಬರ್ ದಾಳಿಯ ಯತ್ನ**
- **ಪ್ರಾಥಮಿಕ ಹಂತದ ತನಿಖೆಯಲ್ಲಿ ಸೂಕ್ಷ್ಮ ಗ್ರಾಹಕ ಮಾಹಿತಿ ಸೋರಿಕೆಯಾಗಿಲ್ಲ**
- **ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳ ಭದ್ರತೆಗೆ ಬ್ಲಾಕ್‌ಚೈನ್‌ನ ತಂತ್ರಜ್ಞಾನ ಅಳವಡಿಕೆಗೆ ಚಿಂತನೆ**

# ಕಾರ್ಮಿಕನ ಇರಿದು ಕೊಲೆ

• ಉದಯವಾಹಿನಿ, ಬೆಂಗಳೂರು

ಶೆಡ್‌ನಲ್ಲಿ ನಡೆದ ಗಲಾಟೆಯಲ್ಲಿ ಕಾರ್ಮಿಕನನ್ನು ಇರಿದು ಕೊಲೆ ಮಾಡಿರುವ ಘಟನೆ ಕಾಡುಗೋಡಿ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಜಾರ್ಖಂಡ್ ಪವನ್ ಯಾದವ್(55) ಕೊಲೆಯಾದ ಕಾರ್ಮಿಕ, ಕೃತ್ಯ ಎಸಗಿದ ಆರೋಪದ ಅಡಿ ಗಣೇಶ್ ಧಾರ್(46) ಎಂಬಾತನನ್ನು ಬಂಧಿಸಲಾಗಿದೆ. ಆರೋಪಿ ಏಪ್ರಿಲ್ 28ರಂದು ಸಂಜೆ 4 ಗಂಟೆ ಸುಮಾರಿಗೆ ಪವನ್ ಯಾದವನನ್ನು ಚಾಕುವಿನಿಂದು ಇರಿದು ಕೊಲೆ ಮಾಡಿದ್ದ. ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು. ಪವನ್ ಯಾದವ್ ಮತ್ತು ಗಣೇಶ್ ಧಾರ್ ಎರಡು ವರ್ಷಗಳಿಂದ ನಗರದಲ್ಲಿ ಕಟ್ಟಡ ನಿರ್ಮಾಣ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದರು. ಒಂದು ವಾರದಿಂದ ಸೀಗೇಹಳ್ಳಿಯಲ್ಲಿ ಇರುವ ಅಪಾರ್ಟ್‌ಮೆಂಟ್‌ವೊಂದರ ನಿರ್ಮಾಣ ಕಾಮಗಾರಿಯಲ್ಲಿ ಕೆಲಸ ಮಾಡುತ್ತಿದ್ದರು. ಪಕ್ಕದಲ್ಲಿರುವ ಶೆಡ್‌ನಲ್ಲಿ ವಾಸವಾಗಿದ್ದರು. ಸೋಮವಾರ ಇಬ್ಬರೂ ಕೆಲಸಕ್ಕೆ ತೆರಳದೆ ಶೆಡ್‌ನಲ್ಲೇ ಇದ್ದರು. ಮಧ್ಯಾಹ್ನವೇ ಮದ್ಯದ ಪಾರ್ಟಿ ನಡೆಸಿದ್ದರು. ಮೊಬೈಲ್‌ನಲ್ಲಿ ಸಿನಿಮಾ ನೋಡುತ್ತಿದ್ದರು ಎಂಬುದು ಗೊತ್ತಾಗಿದೆ. ಆಗ ಕೌಟುಂಬಿಕ ವಿಚಾರ ಪ್ರಸ್ತಾಪವಾಗಿ ಗಲಾಟೆ ನಡೆದಿತ್ತು. ಗಲಾಟೆ ವಿಕೋಪಕ್ಕೆ ಹೋಗಿ ಪವನ್ ಯಾದವ್‌ನನ್ನು ಕೊಲೆ ಮಾಡಲಾಗಿತ್ತು ಎಂದು ಮೂಲಗಳು ತಿಳಿಸಿವೆ. ಕಟ್ಟಡ ನಿರ್ಮಾಣ ಕಾಮಗಾರಿಯ ಗುತ್ತಿಗೆದಾರರೊಬ್ಬರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು. ಕಾಡುಗೋಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯದಲ್ಲಿ ಮತ್ತಷ್ಟು ಹೆಚ್ಚಾಗಲಿದೆ ಪೂರ್ವ ಮುಂಗಾರು

• ಉದಯವಾಹಿನಿ, ಬೆಂಗಳೂರು




ಕೊಡಗಿನಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದ್ದು, ರಾಜ್ಯದಲ್ಲಿ ನಾಳೆಯಿಂದ ಪೂರ್ವ ಮುಂಗಾರು ಮಳೆ ರಾಜ್ಯದಲ್ಲಿ ಹೆಚ್ಚಾಗುವ ಸಾಧ್ಯತೆಗಳಿವೆ. ಕಳೆದ ಒಂದು ತಿಂಗಳಿನಿಂದಲೂ ರಾಜ್ಯದಲ್ಲಿ ಚದುರಿದಂತೆ ಮಳೆಯಾಗುತ್ತಿದೆ. ಮೈಸೂರು ಜಿಲ್ಲೆಯಲ್ಲೂ ಅರೆವ್ಯಾಪಕ ಪ್ರಮಾಣದ ಮಳೆಯಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ, ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಡಿ.ಎ.ಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 58.5 ಮಿ.ಮೀ.ನಷ್ಟು ಗರಿಷ್ಠ ಪ್ರಮಾಣದ ಮಳೆಯಾಗಿದೆ. ದಕ್ಷಿಣ ಕನ್ನಡ, ಮಂಡ್ಯ ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಮಳೆಯಾಗಿದೆ.

ಬೆಂಗಳೂರು ಗ್ರಾಮಾಂತರ, ದಾವಣಗೆರೆ, ಚಿತ್ರದುರ್ಗ, ಕೊಪ್ಪಳ, ಚಾಮರಾಜನಗರ, ರಾಯಚೂರು ಜಿಲ್ಲೆಗಳಲ್ಲಿ ಕೆಲವೆಡೆ ಅತ್ಯಲ್ಪ ಪ್ರಮಾಣದ ಮಳೆಯಾಗಿದೆ. ಬೆಂಗಳೂರು ನಗರ, ಧಾರವಾಡ, ಹಾಸನ, ಬೆಳಗಾವಿ, ಚಿಕ್ಕಮಗಳೂರು, ತುಮಕೂರು, ಬೀದರ್, ವಿಜಯನಗರ, ಹಾವೇರಿ, ಚಿಕ್ಕಬಳ್ಳಾಪುರ, ವಿಜಯಪುರ, ಶಿವಮೊಗ್ಗ, ರಾಮನಗರ, ಉಡುಪಿ, ಕಲಬುರಗಿ, ಗದಗ, ಬಳ್ಳಾರಿ, ಕೋಲಾರ, ಯಾದಗಿರಿ, ಬಾಗಲಕೋಟೆ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕೆಲವೆಡೆ ಮಾತ್ರ ಸಾಧಾರಣ ಮಳೆಯಾಗಿದೆ.

ವಾತಾವರಣದಲ್ಲಿ ಉಂಟಾಗಿರುವ ಕೆಲವೊಂದು ಬದಲಾವಣೆಗಳಿಂದಾಗಿ ರಾಜ್ಯದ ಒಳನಾಡಿನಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿರಲಿದ್ದು, ಸಂಜೆ ಹಾಗೂ ರಾತ್ರಿ ವೇಳೆ ಮಿಂಚು, ಗುಡುಗು ಸಹಿತ ಮಳೆಯಾಗುವ ಮುನ್ಸೂಚನೆಗಳಿವೆ. ಕೆಲವೆಡೆ ಆಲಿಕಲ್ಲು ಹಾಗೂ ಬಿರುಗಾಳಿ ಸಹಿತ ಮಳೆಯಾಗಬಹುದು. ಹವಾಮಾನ ಮುನ್ಸೂಚನೆ ಪ್ರಕಾರ ರಾಜ್ಯದ ಕರಾವಳಿ, ಮಲೆನಾಡು, ಒಳನಾಡಿನ ಜಿಲ್ಲೆಗಳಲ್ಲಿ ಚದುರಿದಂತೆ ಅಲ್ಲಲ್ಲಿ ಮಳೆಯಾಗಲಿದೆ. ಸರಾಸರಿ ಇದೇ ರೀತಿ ಮಳೆ ಮುಂದಿನ ಐದು ದಿನಗಳ ಕಾಲ ಮುಂದುವರೆಯುವ ಸಾಧ್ಯತೆಗಳಿವೆ.

# ಮೇ 4ರಂದು ಯುಜಿನೀಟ್ ಪರೀಕ್ಷೆ: ರಾಜ್ಯದಲ್ಲಿ 381 ಪರೀಕ್ಷಾ ಕೇಂದ್ರ

• ಉದಯವಾಹಿನಿ, ಬೆಂಗಳೂರು



ರಾಷ್ಟ್ರದಾದ್ಯಂತ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ವತಿಯಿಂದ 2025ರ ಯುಜಿನೀಟ್ ಪರೀಕ್ಷೆಯು ಮೇ 4 ರಂದು ನಡೆಯಲಿದೆ. ಅಂದು ಮಧ್ಯಾಹ್ನ 2 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ರಾಜ್ಯದಾದ್ಯಂತ ಒಟ್ಟು 381 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, 1,49,000 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಹಾಜರಾಗಲು ಅವಕಾಶವಿರುತ್ತದೆ ಎಂದು ಕಾಲೇಜು, ತಾಂತ್ರಿಕ ಶಿಕ್ಷಣ ಇಲಾಖೆ ತಿಳಿಸಿದೆ. ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಪ್ರವೇಶ ಪತ್ರದೊಂದಿಗೆ ಕಾಲೇಜಿನಿಂದ ನೀಡಿರುವ ಗುರುತಿನಚೀಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್, ಡಿ.ಎಲ್, ಮತದಾರರ ಗುರುತಿನಚೀಟಿ ಅಥವಾ ಇತರೆ ಯಾವುದಾದರೂ ಅಂಗೀಕೃತ ಗುರುತಿನ ಚೀಟಿ ಜೊತೆ, ಒಂದು ಪೋಸ್ಟ್ ಕಾರ್ಡ್ ಮತ್ತು ಎರಡು ಪಾಸ್ ಪೋರ್ಟ್ ಅಳತೆಯ ಫೋಟೋಗಳನ್ನು ಕಡ್ಡಾಯವಾಗಿ ತೆಗೆದುಕೊಂಡು ಹಾಜರಾಗಬೇಕು ಹೇಳಿದೆ. ಅಂದು ಬೆಳಿಗ್ಗೆ 11 ಗಂಟೆಯಿಂದ ಎನ್‌ಟಿಎ ವತಿಯಿಂದ ನೇಮಿಸಿರುವ ಏಜೆನ್ಸಿಗಳಿಂದ ಸಂಬಂಧಪಟ್ಟ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು, ನಿಯೋಜಿತ ಪೊಲೀಸ್ ಸಿಬ್ಬಂದಿಯಿಂದ ವಿದ್ಯಾರ್ಥಿಗಳ ಸುರಕ್ಷತಾ ತಪಾಸಣೆಯನ್ನು ನಡೆಸಲಾಗುವುದು.

ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿದ್ದು, ವಿದ್ಯಾರ್ಥಿಗಳು ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ವಯ ಮಾರ್ಗಸೂಚಿಯನ್ನು ಪಾಲಿಸಬೇಕು. ಪರೀಕ್ಷಾ ಕೇಂದ್ರಗಳಿಗೆ ನಿರಂತರ ವಿದ್ಯುತ್ ವ್ಯವಸ್ಥೆ, ಆರೋಗ್ಯ ಸಿಬ್ಬಂದಿ, ತುರ್ತು ಸೇವೆಗಳ ನಿಯೋಜನೆ, ಪರೀಕ್ಷಾ ಕೇಂದ್ರಗಳ ಸ್ವಚ್ಛತೆ, ಪರೀಕ್ಷೆಗೆ ಹಾಜರಾಗುವ ದಿವ್ಯಾಂಗರು ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ವಿಲ್ ಚೇರ್ ವ್ಯವಸ್ಥೆ, ತುರ್ತು ಅಗ್ನಿಶಾಮಕ ವ್ಯವಸ್ಥೆಯನ್ನು ಜಿಲ್ಲಾಡಳಿತದ ವತಿಯಿಂದ ಮಾಡಲಾಗುತ್ತದೆ ಎಂದು ತಿಳಿಸಿದೆ. ಎನ್‌ಟಿಎ ವತಿಯಿಂದ ಪರೀಕ್ಷಾ ಕೇಂದ್ರಕ್ಕೆ ಜಾಮರ್ ಅಳವಡಿಕೆ ಮತ್ತು ಫ್ರಿಸ್ಕಿಂಗ್ ಮಾಡಲು ಏಜೆನ್ಸಿ ನೇಮಿಸಿದ್ದು, ಈ ಬಗ್ಗೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಖಚಿತಪಡಿಸಿಕೊಳ್ಳಬೇಕು. ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಪೊಲೀಸ್ ಸಿಬ್ಬಂದಿಯು ಪರೀಕ್ಷೆಗೆ ಹಾಜರಾಗಲಿರುವ ವಿದ್ಯಾರ್ಥಿಗಳನ್ನು ಸೂಕ್ತ ತಪಾಸಣೆಗೆ ಒಳಪಡಿಸುವರು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಜಾರಿಗೆ ಕ್ರಮವಹಿಸಲಾಗಿದ್ದು, ಪರೀಕ್ಷಾ ಕೇಂದ್ರಗಳಿಗೆ ನಿಯೋಜಿತ ಅಧಿಕಾರಿ, ಸಿಬ್ಬಂದಿಯನ್ನು ಹೊರತುಪಡಿಸಿ, ಇತರೆ ಯಾವುದೇ ಸಾರ್ವಜನಿಕರಿಗೆ ಪ್ರವೇಶವಿರುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

# ದ್ವಿಚಕ್ರ ವಾಹನ ಕಳವು: ಇಬ್ಬರ ಬಂಧನ

• ಉದಯವಾಹಿನಿ, ಬೆಂಗಳೂರು

ದ್ವಿಚಕ್ರ ವಾಹನ ಕಳವು ಮಾಡುತ್ತಿದ್ದ ತಮಿಳುನಾಡಿನ ಇಬ್ಬರು ಆರೋಪಿಗಳನ್ನು ಬೊಮ್ಮನಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ತಮಿಳುನಾಡಿನ ಸುರೇಶ್ (22), ಬಾಲು(21) ಬಂಧಿತರು. ಆರೋಪಿಗಳಿಂದ 10 ಲಕ್ಷ ಮೌಲ್ಯದ 12 ಬೈಕ್‌ಗಳನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಗಳ ಬಂಧನದಿಂದ ನಗರ ಹಾಗೂ ಹೊರವಲಯದ ವಿವಿಧ ಠಾಣೆಗಳಲ್ಲಿ ದಾಖಲಾಗಿದ್ದ ವಾಹನ ಕಳವು ಪ್ರಕರಣಗಳು ಪತ್ತೆಯಾಗಿವೆ. ಇತ್ತೀಚೆಗೆ ಬಂಧಿತರು, ರೂಪೇನ ಅಗ್ರಹಾರದ ಮನೆಯೊಂದರ ಎದುರು ನಿಲುಗಡೆ ಮಾಡಿದ್ದ ದ್ವಿಚಕ್ರ ವಾಹನ ಕಳವು ಮಾಡಿದ್ದರು. ಈ ಸಂಬಂಧ ದಾಖಲಾದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಆರೋಪಿಗಳ ಬಂಧಿಸಲಾಗಿದೆ. ಅವರ ಮಾಹಿತಿ ಮೇರೆಗೆ ಕೂಡ್ಲುಗೇಟ್ ಬಸ್ ನಿಲ್ದಾಣದ ಖಾಲಿ ಜಾಗದಲ್ಲಿ ನಿಲುಗಡೆ ಮಾಡಿದ್ದ ಬೈಕ್‌ಗಳನ್ನು ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ಹೇಳಿದರು.

# ಪ್ರಾಂಶುಪಾಲರನ್ನು ಕತ್ತರಿಸಿ ಫ್ರಿಜ್‌ನಲ್ಲಿ ಇಡುವುದಾಗಿ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ಆಚಾರ್ಯ ಕಾಲೇಜಿಗೆ ಹುಸಿ ಬಾಂಬ್ ಬೆದರಿಕೆಯ ಇ-ಮೇಲ್ ಸಂದೇಶ ಬಂದಿದ್ದು, ಆರೋಪಿ ಪತ್ತೆಗೆ ಸೋಲದೇವನಹಳ್ಳಿ ಠಾಣೆಯ ಪೊಲೀಸರು ಶೋಧ ಆರಂಭಿಸಿದ್ದಾರೆ. ಕಾಲೇಜಿನ ಆಡಳಿತ ಮಂಡಳಿಯವರು ನೀಡಿದ ದೂರು ಆಧರಿಸಿ ಏಪ್ರಿಲ್ 22ರಂದು ಸೋಲದೇವನಹಳ್ಳಿ ಠಾಣೆಯ ಪೊಲೀಸರು ಎನ್‌ಸಿಆರ್ ದಾಖಲಿಸಿಕೊಂಡಿದ್ದರು. ಸಿಜೆಎಂ ನ್ಯಾಯಾಲಯದ ಸೂಚನೆ ಮೇರೆಗೆ ಈಗ ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ ಎಂಬುದು ಗೊತ್ತಾಗಿದೆ.

'ಕಾಲೇಜು ಆಡಳಿತ ಮಂಡಳಿಯವರು ನೀಡಿದ ಮಾಹಿತಿ ಮೇರೆಗೆ ಅಂದೇ ಕಾಲೇಜು ಆವರಣಕ್ಕೆ ತೆರಳಿ ಪರಿಶೀಲನೆ ನಡೆಸಲಾಗಿತ್ತು. ಶ್ವಾನದಳ ಹಾಗೂ ಬಾಂಬ್ ನಿಷ್ಕ್ರಿಯ ದಳದ ಸಿಬ್ಬಂದಿಯೂ ಸ್ಥಳಕ್ಕೆ ತೆರಳಿ ತಪಾಸಣೆ ನಡೆಸಿದರು. ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗಿಲ್ಲ. ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ. ಬೆದರಿಕೆ ಸಂದೇಶ ಹೊತ್ತು ತಂದಿದ್ದ ಇ-ಮೇಲ್ ಅನ್ನು ತಾಂತ್ರಿಕ ತಜ್ಞರು ಪರಿಶೀಲಿಸುತ್ತಿದ್ದಾರೆ' ಎಂದು ಪೊಲೀಸರು ಹೇಳಿದರು.



**ಇ-ಮೇಲ್‌ನಲ್ಲಿ ಏನಿತ್ತು?**

**'ಏಪ್ರಿಲ್ 22ರಂದು ಆಚಾರ್ಯ ಕಾಲೇಜಿನ ಅಧಿಕೃತ ಇ-ಮೇಲ್ ಐ.ಡಿಗೆ ಅಪರಿಚಿತ ವ್ಯಕ್ತಿ ಸಂದೇಶ ಕಳುಹಿಸಿದ್ದ. ಕಾಲೇಜು ಆವರಣದಲ್ಲಿ ಬಾಂಬ್ ಇಡಲಾಗಿದೆ. ಅದು ಸ್ಫೋಟಗೊಳ್ಳಲಿದೆ. ಪ್ರಾಂಶುಪಾಲರನ್ನು ಕತ್ತರಿಸಿ ದೇಹವನ್ನು ಫ್ರಿಜ್‌ನಲ್ಲಿ ಇಡಲಾಗುವುದು ಎಂದು ಇ-ಮೇಲ್‌ನಲ್ಲಿ ಬರೆಯಲಾಗಿತ್ತು' ಎಂದು ಪೊಲೀಸ್ ಮೂಲಗಳು ತಿಳಿಸಿವೆ.**

# ಇಂದಿರಾ ಗಾಂಧಿಗೆ ಕಪ್ಪು ಬಾವುಟ ತೋರಿಸಿದ್ದ ಸಿದ್ದರಾಮಯ್ಯರನ್ನ ಪಕ್ಷದಿಂದ ಉಚ್ಚಾಟಿಸೋ ಧಮ್ ಇದೆಯಾ ಡಿಕೆಶಿಯವರೇ

• ಉದಯವಾಹಿನಿ, ಬೆಂಗಳೂರು

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರಿಗೆ ಕಪ್ಪು ಬಾವುಟ ತೋರಿಸಿದ್ದ ಸಿದ್ದರಾಮಯ್ಯನವರನ್ನ ಪಕ್ಷದಿಂದ ಉಚ್ಚಾಟನೆ ಮಾಡೋ ಧಮ್ ಇದೆಯಾ ಡಿಕೆ ಶಿವಕುಮಾರ್ ಅವರೇ? ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಪ್ರಶ್ನೆ ಮಾಡಿದ್ದಾರೆ. ಈ ಕುರಿತು ಸಿದ್ದರಾಮಯ್ಯನವರು, ಇಂದಿರಾಗಾಂಧಿ ಅವರ ವಿರುದ್ಧ ಕಪ್ಪು ಬಾವುಟ ಹಾರಿಸಿದ್ದೇ ಎಂಬ ಹೇಳಿಕೆಯ ಹಳೆಯ ವಿಡಿಯೋವನ್ನು ತಮ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಹಂಚಿಕೊಂಡಿರುವ ಆಶೋಕ್ ಅವರು, ಉತ್ತರನ ಪೌರುಷ ಒಲೆಯ ಮುಂದೆ ಎನ್ನುವ ಹಾಗೆ ನಿಮ ಪ್ರತಾಪ ಬರೀ ಮಾಧ್ಯಮಗಳ ಮುಂದೆ ಡೈಲಾಗ್ ಹೊಡೆಯೋದಕ್ಕೆ ಮಾತ್ರ ಸೀಮಿತನಾ ಡಿಸಿಎಂ ಶಿವಕುಮಾರ್ ಅವರೇ ಎಂದು ವ್ಯಂಗ್ಯವಾಡಿದ್ದಾರೆ.

ರಾಜ್ಯದಲ್ಲಿ ಬಿಜೆಪಿಗೆ ಒಂದೇ ಒಂದು ಸಭೆ ಮಾಡಲೂ ಬಿಡುವುದಿಲ್ಲ ಎಂದು ಧಮ್ಕಿ ಹಾಕಿದ್ದೀರಲ್ಲ, ನಿಮಗೆ ನಿಜವಾಗಿಯೂ ತಾಕತ್ತಿದ್ದರೆ ಮಾಜಿ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿ ಅವರಿಗೆ ಕಪ್ಪು ಬಾವುಟ ತೋರಿಸಿದ್ದ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿ ಪಕ್ಷದಿಂದ ಉಚ್ಚಾಟನೆ ಮಾಡಿ ನೋಡೋಣ ಎಂದು ಬಹಿರಂಗ ಸವಾಲು ಹಾಕಿದ್ದಾರೆ. ನಿಮ ಪಕ್ಷದ ಸರ್ವೋಚ್ಚ ನಾಯಕಿ ಪ್ರಧಾನಿ ಆಗಿದ್ದಾಗ ಕಪ್ಪು ಬಾವುಟ ತೋರಿಸಿದ್ದ ವ್ಯಕ್ತಿಯನ್ನು ಪಕ್ಷಕ್ಕೆ ಕರೆದುಕೊಂಡು ಬಂದು ಎರಡೆರಡು ಬಾರಿ ಮುಖ್ಯಮಂತ್ರಿ ಮಾಡಿ, ಅವರ ಋಣದಲ್ಲಿ ಅಧಿಕಾರ ಅನುಭವಿಸುತ್ತಿದ್ದೀರಲ್ಲ, ಸಿದ್ದರಾಮಯ್ಯ, ಬಿಜೆಪಿ ಪ್ರಶ್ನೆ ಮಾಡುವ ಪ್ರತಿಭಟನೆಗೆ ಧಮ್ಕಿ ಹಾಕುವ ಯಾವ ನೈತಿಕತೆ ಇದೆ ತಮಗೆ ಎಂದು ಆಶೋಕ್ ಕಿಡಿಕಾರಿದ್ದಾರೆ.

# ಅಧಿಕಾರಿಗಳ ದಾಳಿ: ಪ್ಲಾಸ್ಟಿಕ್ ವಶ

• ಉದಯವಾಹಿನಿ, ಹೊಸಕೋಟೆ

ನಗರಸಭೆ ವ್ಯಾಪ್ತಿಯಲ್ಲಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದ್ದ ಪ್ಲಾಸ್ಟಿಕ್ ಗೋದಾಮುಗಳ ಮೇಲೆ ನಗರಸಭೆ ಅಧಿಕಾರಿಗಳು ದಾಳಿ ನಡೆಸಿ 1 ಟನ್‌ಗೂ ಹೆಚ್ಚು ನಿಷೇಧಿತ ಪ್ಲಾಸ್ಟಿಕ್ಕನ್ನು ವಶಪಡಿಸಿ, ನಾಶಪಡಿಸಿದ್ದಾರೆ. ನಗರಸಭೆ ಪೌರಾಯುಕ್ತ ನೀಲಲೋಚನ ಪ್ರಭು ಮಾತನಾಡಿ, ನಗರದ ಎಲ್ಲಾ ಅಂಗಡಿಗಳ ಮಾಲಿಕರಿಗೆ, ಬಾಡಿಗೆದಾರರಿಗೆ ಪ್ಲಾಸ್ಟಿಕ್ ಬಳಸದಂತೆ ಎಚ್ಚರಿಕೆ ನೀಡಿದ್ದೆ. ಹಲವು ಬಾರಿ ದಾಳಿ ಮಾಡಿ ನಿಷೇಧಿತ ಪ್ಲಾಸ್ಟಿಕ್ ವಶಪಡಿಸಿಕೊಂಡು ನಾಶಪಡಿಸಿದ್ದೆವು.

ಆದರೂ ನಗರದಲ್ಲಿ ಅಕ್ರಮವಾಗಿ ದಾಸ್ತಾನು ಮಾಡಿಕೊಂಡು ಪ್ಲಾಸ್ಟಿಕ್ ಮಾರಾಟ ಮಾಡಲಾಗುತ್ತಿದೆ ಎಂದರು. ಪ್ಲಾಸ್ಟಿಕ್ ಬಳಕೆಯಿಂದ ಪ್ರಕೃತಿಯ ಮೇಲಾಗುತ್ತಿರುವ ದುಷ್ಪರಿಣಾಮ ಮತ್ತು ಜನ ಮತ್ತು ಪ್ರಾಣಿಗಳ ಆರೋಗ್ಯದ ಮೇಲೆ ಬೀರುತ್ತಿರುವ ಕೆಟ್ಟ ಪರಿಣಾಮಗಳನ್ನು ಅರಿತು ಪ್ಲಾಸ್ಟಿಕ್ ನಿಷೇಧಕ್ಕೆ ಹೆಜ್ಜೆ ಇಡಲಾಗಿದೆ. ಜನರಿಗಾಗಿ ನಡೆಯುತ್ತಿರುವ ಈ ಕಾರ್ಯದಲ್ಲಿ ಜನರೇ ಅಸಹಕಾರ ತೋರುತ್ತಿರುವುದು ಖೇದಕರ. ಸ್ವಚ್ಛ ಹೊಸಕೋಟೆ, ಆರೋಗ್ಯವಂತ ಹೊಸಕೋಟೆ ನಿರ್ಮಾಣ ಮಾಡಲು ಎಲ್ಲರೂ ಸಹಕರಿಸಬೇಕು ಎಂದರು.

## 18 ಬಿಜೆಪಿ ಶಾಸಕರ ಅಮಾನತು ರದ್ದುಗೊಳಿಸುವ ಕುರಿತು ಸಿಎಂ, ಸ್ಪೀಕರ್ ಅವರಿಗೆ ರಾಜ್ಯಪಾಲರ ಪತ್ರ

# ಶಾಸಕರಿಗೆ ತಮ್ಮ ಅಧಿಕಾರ ಚಲಾಯಿಸಲು ಅನುವು ಮಾಡಿಕೊಡಿ

• ಉದಯವಾಹಿನಿ, ಬೆಂಗಳೂರು



18 ಮಂದಿ ಬಿಜೆಪಿ ಶಾಸಕರ ಅಮಾನತು ರದ್ದುಗೊಳಿಸುವ ಸಂಬಂಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸಿಎಂ ಸಿದ್ದರಾಮಯ್ಯ, ಸ್ಪೀಕರ್ ಯು.ಟಿ.ಖಾದರ್ ಅವರಿಗೆ ಪತ್ರ ಬರೆದಿದ್ದಾರೆ. ವಿಧಾನಸಭೆಯ 18 ಬಿಜೆಪಿ ಸದಸ್ಯರ (ಶಾಸಕರು) ಅಮಾನತು ರದ್ದುಗೊಳಿಸುವ ಮನವಿಯನ್ನು ಸಕಾರಾತ್ಮಕವಾಗಿ ಪರಿಗಣಿಸುವಂತೆ, ಈ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ. ಮುಖ್ಯಮಂತ್ರಿ, ಸ್ಪೀಕರ್‌ಗೆ ಬರೆದ ಪ್ರತ್ಯೇಕ ಪತ್ರಗಳಲ್ಲಿ, ರಾಜ್ಯದಲ್ಲಿ ಪ್ರಜಾಪ್ರಭುತ್ವ ಮೌಲ್ಯಗಳ ಮೂಲ ತತ್ವಗಳನ್ನು ಎತ್ತಿಹಿಡಿಯಲು, ಅಮಾನತು ಗೊಂಡ ಶಾಸಕರು ಮತ್ತೆ ಜನ ಪ್ರತಿನಿಧಿಗಳಾಗಿ ತಮ್ಮ ಜವಾಬ್ದಾರಿಗಳನ್ನು ವಹಿಸಿಕೊಳ್ಳಲು ಅನುವು ಮಾಡಿಕೊಡುವಂತಹ ನಿರ್ಧಾರ ತೆಗೆದುಕೊಳ್ಳಬೇಕೆಂಬ ಆಸೆಯನ್ನು ರಾಜ್ಯಪಾಲರು ವ್ಯಕ್ತಪಡಿಸಿದ್ದಾರೆ. ವಿಪಕ್ಷ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರಾಜ್ಯಪಾಲರನ್ನು ಭೇಟಿಯಾಗಿ ಶಾಸಕರ ಅಮಾನತು ಸಂಬಂಧ ದೂರು ನೀಡಿದ್ದರು. ಅಮಾನತು ತೆರವು ಗೊಳಿಸಿ ಶಾಸಕರಿಗೆ ತಮ್ಮ ಅಧಿಕಾರ ಚಲಾಯಿಸಲು ಅನುವು ಮಾಡಿಕೊಡುವಂತೆ ರಾಜ್ಯಪಾಲರಿಗೆ ಬಿಜೆಪಿ ನಿಯೋಗ ಮನವಿ ನೀಡಿತ್ತು. ಇದೀಗ ರಾಜ್ಯ ಪಾಲರು ಸಿಎಂ ಸಿದ್ದರಾಮಯ್ಯ, ಸ್ಪೀಕರ್ ಯು.ಟಿ.ಖಾದರ್‌ಗೆ ಪತ್ರ ಬರೆದು, 18 ಬಿಜೆಪಿ ಶಾಸಕರ ಅಮಾನತು ತೆರವು ಗೊಳಿಸುವಂತೆ ಸಲಹೆ ನೀಡಿದ್ದಾರೆ. ಉಭಯ ಸದನದ ಬಿಜೆಪಿ ವಿಪಕ್ಷ ನಾಯಕರು ನನ್ನನ್ನು ಭೇಟಿಯಾಗಿ 18 ಬಿಜೆಪಿ ಶಾಸಕರ ಅಮಾ ನತು ಸಂಬಂಧ ಮನವಿ ಪತ್ರ ಸಲ್ಲಿಸಿದ್ದಾರೆ. 18 ಶಾಸಕರ ಅಮಾನತು ಆದೇಶವನ್ನು ಮರುಪರಿಗಣಿಸುವ ಅವರ ಕೋರಿಕೆಯನ್ನು ಸ್ಪೀಕರ್, ರಾಜ್ಯ ಸರ್ಕಾರಕ್ಕೆ ಕಳುಹಿಸಿ ಕೊಡುವಂತೆ ಮನವಿ ಮಾಡಿದ್ದಾರೆ ಎಂದು ರಾಜ್ಯಪಾಲರು ಪತ್ರದಲ್ಲಿ ತಿಳಿಸಿದ್ದಾರೆ. ರಾಜ್ಯದ ಪ್ರಜಾಪ್ರಭುತ್ವ ಮೌಲ್ಯಗಳನ್ನು ಎತ್ತಿ ಹಿಡಿಯುವ ದೃಷ್ಟಿಯಿಂದ, ಜನಪ್ರತಿನಿಧಿಯಾಗಿ ಅಮಾನತುಗೊಂಡ ಶಾಸಕರುಗಳು ತಮ್ಮ ಜವಾಬ್ದಾರಿಯನ್ನು ಪುನರಾರಂಭಿಸಲು ಅನುವು ಮಾಡಿಕೊಡಲು ಬಿಜೆಪಿ ನಿಯೋಗದ ಮನವಿಗೆ ಸಕಾರಾತಕವಾಗಿ ಸ್ಪಂದಿಸಿ,

**ಮೇಲಿನದನ್ನು ಗಮನದಲ್ಲಿಟ್ಟುಕೊಂಡು, ಕರ್ನಾಟಕ ರಾಜ್ಯದಲ್ಲಿ ಪ್ರಜಾಪ್ರಭುತ್ವ ಮೌಲ್ಯಗಳ ಮೂಲ ತತ್ವಗಳನ್ನು ಎತ್ತಿಹಿಡಿಯಲು, ಅಮಾನತುಗೊಂಡ ಸದಸ್ಯರು ಜನ ಪ್ರತಿನಿಧಿಗಳಾಗಿ ತಮ ಜವಾಬ್ದಾರಿಗಳನ್ನು ಪುನರಾರಂಭಿಸಲು, ಅವರ ವಿನಂತಿಯನ್ನು ಸಕಾರಾತ್ಮಕವಾಗಿ ಪರಿಗಣಿಸಬೇಕೆಂದು, ಅಮಾನತು ರದ್ದುಗೊಳಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ನಾನು ಬಯಸುತ್ತೇನೆ ಎಂದು ಏಪ್ರಿಲ್ 28 ರಂದು ರಾಜ್ಯಪಾಲರು ಬರೆದ ಪತ್ರದಲ್ಲಿ ತಿಳಿಸಲಾಗಿತು.**

18 ಸದಸ್ಯರ ಅಮಾನತು ಆದೇಶ ರದ್ದತಿಗೆ ಅಗತ್ಯ ಕ್ರಮ ಕೈಗೊಳ್ಳಲು ಬಯಸುತ್ತೇನೆ. ಈ ಸಂಬಂಧ ಕೈಗೊಳ್ಳಲಾದ ಕ್ರಮವನ್ನು ನನ್ನ ಗಮನಕ್ಕೆ ತನ್ನಿ ಎಂದು ರಾಜ್ಯಪಾಲರು ಸೂಚಿಸಿದ್ದಾರೆ.

**ಏನಿದು ಪ್ರಕರಣ?:** ಕಳೆದ ಮಾರ್ಚ್ 21 ರಂದು ಅಭೂತಪೂರ್ವ ಕ್ರಮದಲ್ಲಿ, ಅಶಿಸ್ತು, ಸ್ಪೀಕರ್‌ಗೆ ಅಗೌರವ ತೋರಿದ್ದಕ್ಕಾಗಿ 18 ಬಿಜೆಪಿ ಶಾಸಕರನ್ನು ಆರು ತಿಂಗಳ ಕಾಲ ಅಮಾನತುಗೊಳಿಸಲಾಗಿತ್ತು. ಸಭೆಯಿಂದ ಹೊರಹೋಗಲು ನಿರಾಕರಿಸಿದ ನಂತರ ಮಾರ್ಷಲ್‌ಗಳು ಅವರನ್ನು ವಿಧಾನಸಭೆಯಿಂದ ಬಲವಂತವಾಗಿ ಹೊರಹಾಕಿದ್ದರು.

ಈ ಸಂಬಂಧ ತೆಗೆದುಕೊಂಡ ಕ್ರಮಗಳ ವಿವರಗಳನ್ನು ನನ್ನ ಗಮನಕ್ಕೆ ತರಬಹುದು ಎಂದು ಗೆಹ್ಲೋಟ್ ಹೇಳಿದ್ದಾರೆ. ವಿಧಾನಸಭೆಯ ಬಜೆಟ್ ಅಧಿವೇಶನದ ಕೊನೆಯ ದಿನದಂದು ಬಿಜೆಪಿ ಶಾಸಕರು ಬೃಹತ್ ಪ್ರತಿಭಟನೆ ನಡೆಸಿದಾಗ ಅಮಾನತುಗೊಳಿಸಿರುವ ಘಟನೆ ನಡೆದಿತ್ತು. ಸದನದಲ್ಲಿ ವಿಪಕ್ಷ ನಾಯಕರು ಸಾರ್ವಜನಿಕ ಒಪ್ಪಂದಗಳಲ್ಲಿ ಮುಸ್ಲಿಮರಿಗೆ ಶೇ.4 ರಷ್ಟು ಮೀಸಲಾತಿಯನ್ನು ವಿರೋಧಿಸುತ್ತಿದ್ದರು, ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ಒಳಗೊಂಡ ಹನಿಟ್ರ್ಯಾಪ್ ಪ್ರಯತ್ನದ ಬಗ್ಗೆ ನ್ಯಾಯಾಂಗ ತನಿಖೆಗೆ ಒತ್ತಾಯಿಸುತ್ತಿದ್ದರು.

ವಿಧಾನ ಸಭೆಯೊಳಗೆ ಪ್ರತಿ ಭಟನೆಯ ಸಮಯದಲ್ಲಿ, ಕೆಲವು ಬಿಜೆಪಿ ಶಾಸಕರು ಸ್ಪೀಕರ್ ಅವರ ವೇದಿಕೆಯ ಮೇಲೆ ಹತ್ತಿ ಅವರ ಕುರ್ಚಿಯನ್ನು ಸುತ್ತುವರೆದರು, ಆದರೆ ಇತರರು ಸದನದ ಬಾವಿಯಿಂದ ಕಾಗದಗಳನ್ನು ಎಸೆದರು. ಮಾರ್ಷಲ್‌ಗಳು ಮಧ್ಯಪ್ರವೇಶಿಸಿ ಶಾಸಕರನ್ನು ಬಲವಂತವಾಗಿ ಹೊರಹಾಕಿದ್ದರು. ಬಿಜೆಪಿ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್, ಮಾಜಿ ಡಿಸಿಎಂ ಸಿ.ಎನ್.ಅಶ್ವತ್ ನಾರಾಯಣ್, ಎಸ್.ಆರ್.ವಿಶ್ವನಾಥ್, ಬಿ.ಎ.ಬಸವರಾಜು, ಎಂ. ಆರ್. ಪಾಟೀಲ್, ಚನ್ನಬಸಪ್ಪ, ಬಿ. ಸುರೇಶ್ ಗೌಡ, ಉಮಾನಾಥ ಕೋಟ್ಯಾನ್, ಶರಣು ಸಲಗರ, ಡಾ ಶೈಲೇಂದ್ರ ಬೆಲ್ದಾಳೆ, ಸಿ.ಕೆ.ರಾಮಮೂರ್ತಿ, ಯಶ್ಪಾಲ್ ಸುವರ್ಣ, ಡಿ. ಲಮಾಣಿ, ಮುನಿರತ್ನ, ಬಸವರಾಜ ಮತ್ತಿಮೂಡ್ ಅಮಾನತುಗೊಂಡಿದ್ದರು.

**ವಿಧಾನಸಭೆ ಮತ್ತು ಪರಿಷತ್ತಿನ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರು ಸಲ್ಲಿಸಿದ ಜ್ಞಾಪಕ ಪತ್ರವನ್ನು ಉಲ್ಲೇಖಿಸಿ, ರಾಜ್ಯಪಾಲರು ತಮ ಪತ್ರದಲ್ಲಿ, ಪ್ರಮುಖ ವಿರೋಧ ಪಕ್ಷಕ್ಕೆ ಸೇರಿದ 18 ಶಾಸಕರ ಮೇಲೆ ವಿಧಿಸಲಾದ ಅಮಾನತು ಆದೇಶವನ್ನು ಮರುಪರಿಶೀಲಿಸುವಂತೆ ತಮ ಪ್ರಾತಿನಿಧ್ಯವನ್ನು ಸ್ಪೀಕರ್ ಮತ್ತು ರಾಜ್ಯ ಸರ್ಕಾರಕ್ಕೆ ಕಳುಹಿಸುವಂತೆ ವಿನಂತಿಸಿರುವುದಾಗಿ ತಿಳಿಸಿದ್ದರು.**

## ನ್ಯೂಜಿಲೆಂಡ್‌ನಲ್ಲಿ ಭೂಕಂಪ

**ವೆಲ್ಲಿಂಗ್ಟನ್:** ನ್ಯೂಜಿಲೆಂಡ್‌ನ ಪಶ್ಚಿಮ ಕರಾವಳಿಯಲ್ಲಿ 6.2 ತೀವ್ರತೆಯ ಭೂಕಂಪ ಸಂಭವಿಸಿದೆ. ಸ್ಥಳೀಯ ಸಮಯ ಬೆಳಗಿನ ಜಾವ 1 ಗಂಟೆ ಸಮಯದಲ್ಲಿ ಭೂಕಂಪ ಸಂಭವಿಸಿದೆ ಎಂದು ಅಮೆರಿಕ ಭೂವೈಜ್ಞಾನಿಕ ಸಮೀಕ್ಷೆ ತಿಳಿಸಿದೆ. ನ್ಯೂಜಿಲೆಂಡ್‌ನ ನೈಋತ್ಯಕ್ಕೆ 187 ಮೈಲುಗಳು ದೂರದ ಕರಾವಳಿಯ ಸಮುದ್ರದ 10 ಕಿ.ಮೀ ಆಳದಲ್ಲಿ ಕೇಂದ್ರ ಬಿಂದು ದಾಖಲಾಗಿದೆ. ಆದರೆ ನ್ಯೂಜಿಲೆಂಡ್‌ನಲ್ಲಿ ಭೂಕಂಪದ ಅನುಭವವಾಗಲಿಲ್ಲ ಎಂದು ದೇಶದ ಭೂವೈಜ್ಞಾನಿಕ ವಿಜ್ಞಾನ ಸಂಸ್ಥೆ ತಿಳಿಸಿದೆ. ಸುಮಾರು 50 ಲಕ್ಷ ಜನರಿಗೆ ನೆಲೆಯಾಗಿರುವ ನ್ಯೂಜಿಲೆಂಡ್ ಭೂಕಂಪಗಳು ಮತ್ತು ಜ್ವಾಲಾಮುಖಿಗಳು ಸಾಮಾನ್ಯವಾಗಿ ಕಂಡುಬರುವ ಪೆಸಿಫಿಕ್ ಮಹಾಸಾಗರದ ಸುತ್ತಲಿನ ಭೂಕಂಪನ ದೋಷಗಳ ಕಮಾನಿನ ರಿಂಗ್ ಆಫ್ ಫೈರ್ ನಲ್ಲಿದೆ.

## ಸಂಘರ್ಷ ಹೆಚ್ಚಿಸದಂತೆ ಭಾರತ ಮತ್ತು ಪಾಕಿಸ್ತಾನಕ್ಕೆ ಅಮೆರಿಕ ಕರೆ

**ನ್ಯೂಯಾರ್ಕ್:** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಸಂಘರ್ಷವನ್ನು ಹೆಚ್ಚಿಸದಂತೆ ಅಮೆರಿಕ ಎರಡೂ ದೇಶಗಳಿಗೆ ಕರೆ ನೀಡಿದೆ. ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಇಂದು ಅಥವಾ ನಾಳೆ ಬೇಗನೆ ಎರಡೂ ದೇಶಗಳ ವಿದೇಶಾಂಗ ಮಂತ್ರಿಗಳೊಂದಿಗೆ ಮಾತನಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪತ್ರಿಕಾಗೋಷ್ಠಿಯಲ್ಲಿ ಅಮೆರಿಕ ವಿದೇಶಾಂಗ ಇಲಾಖೆಯ ವಕ್ತಾರ ಟ್ಯಾಮಿ ಬ್ರೂಸ್, ಕಾಶ್ಮೀರ ಪರಿಸ್ಥಿತಿಗೆ ಸಂಬಂಧಿಸಿದಂತೆ ಭಾರತ ಮತ್ತು ಪಾಕಿಸ್ತಾನ ನಡುವೆ ವೈಮನಸ್ಯ ಉಂಟಾಗಿದ್ದು ಸದ್ಯ ಪರಿಸ್ಥಿತಿಯನ್ನು ಉಲ್ಬಣಗೊಳಿಸಬೇಡಿ ಎಂದು ಮನವಿ ಮಾಡುತ್ತೇನೆ ಎಂದು ಹೇಳಿದರು. ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಇಂದು ಅಥವಾ ನಾಳೆ ಬೇಗನೆ ಪಾಕಿಸ್ತಾನ ಮತ್ತು ಭಾರತದ ವಿದೇಶಾಂಗ ಮಂತ್ರಿಗಳೊಂದಿಗೆ ಮಾತನಾಡುವ ನಿರೀಕ್ಷೆಯಿದೆ ಎಂದು ಬ್ರೂಸ್ ಹೇಳಿದರು. ಅಧ್ಯಕ್ಷ ಟ್ರಂಪ್ ಅವರ ನಾಯಕತ್ವದ ಮೇಲೆ ಅವರು ಹೊಂದಿರುವ ಪ್ರಭಾವವನ್ನು ನಾವು ಖಂಡಿತವಾಗಿಯೂ ನಿರೀಕ್ಷಿಸುತ್ತೇವೆ, ಭಾರತ ಮತ್ತು ಪಾಕಿಸ್ತಾನದ ಜೊತೆ ಸಂಭಾಷಣೆಗಳನ್ನು ನಡೆಸುತ್ತಿವೆ. ಇದು ಅವರಿಗೆ ಬಹಳ ಮುಖ್ಯವಾಗಿದೆ ಎಂದು ಬ್ರೂಸ್ ಹೇಳಿದರು.

## ಮೆಹುಲ್ ಚೋಕ್ಸಿ ವಿರುದ್ಧ ಮುಂಬೈ ಕೋರ್ಟ್ ಜಾಮೀನು ರಹಿತ ವಾರಂಟ್

**ಮುಂಬೈ:** ಕೆನರಾ ಬ್ಯಾಂಕ್ ಸಮೂಹದಿಂದ ಸಾಲ ಪಡೆದು ಸುಮಾರು 55 ಕೋಟಿ ರೂ. ವಂಚಿಸಿದ ಪ್ರಕರಣದಲ್ಲಿ ವಜ್ರೋದ್ಯಮಿ ಮೆಹುಲ್ ಚೋಕ್ಸಿ ವಿರುದ್ಧ ಮುಂಬಯಿ ನ್ಯಾಯಾಲಯವೊಂದು ಜಾಮೀನು ರಹಿತ ವಾರಂಟ್ ಹೊರಡಿಸಿದೆ. ವಾರಂಟ್ ಕುರಿತ ವರದಿಗಾಗಿ ಜೂನ್ 2 ಕ್ಕೆ ಪ್ರಕರಣವನ್ನು ಮುಂದೂಡಲಾಗಿದೆ.

ಪಂಜಾಬ್ ನ್ಯಾಷನಲ್ ಬ್ಯಾಂಕ್‌ನ ಬಹುಕೋಟಿ ಹಣ ವಂಚನೆ ಪ್ರಕರಣದ ಪ್ರಮುಖ ಆರೋಪಿಯಾಗಿರುವ ಚೋಕ್ಸಿಯನ್ನು ಭಾರತೀಯ ತನಿಖಾ ಸಂಸ್ಥೆಗಳು ಹಸ್ತಾಂತರ ಕೋರಿದ ನಂತರ ಏಪ್ರಿಲ್ 12 ರಂದು ಬೆಲ್ಜಿಯಂನಲ್ಲಿ ಬಂಧಿಸಲಾಗಿತ್ತು. ಹೆಚ್ಚುವರಿ ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಆರ್.ಬಿ ಠಾಕೂರ್ ಅವರು ಜಾಮೀನು ರಹಿತ ವಾರಂಟ್ ಹೊರಡಿಸಿದ್ದಾರೆ.

ಕೆನರಾ ಬ್ಯಾಂಕ್ ಮತ್ತು ಬ್ಯಾಂಕ್ ಆಫ್ ಮಹಾರಾಷ್ಟ್ರವು ಬೆಜೆಲ್ ಜ್ಯುವೆಲ್ಲರಿಗೆ ಒಕ್ಕೂಟ ಒಪ್ಪಂದದ ಅಡಿಯಲ್ಲಿ ಕಾರ್ಯ ಬಂಡವಾಳ ಸೌಲಭ್ಯಗಳಾಗಿ ಕ್ರಮವಾಗಿ 30 ಕೋಟಿ ಮತ್ತು 25 ಕೋಟಿ ರೂ.ಗಳನ್ನು ಮಂಜೂರು ಮಾಡಿವೆ ಎಂದು ಕೇಂದ್ರ ತನಿಖಾ ದಳ (ಸಿಬಿಐ) ಆರೋಪಿಸಿದೆ.

### 36 ಗಂಟೆಗಳಲ್ಲಿ ಭಾರತ ದಾಳಿ ನಡೆಸುತ್ತೆ: ಪಾಕ್‌ನಿಂದ ಮಿಡ್‌ನೈಟ್ ಪ್ರೆಸ್‌ಮೀಟ್

# ಮೋದಿ ಸಾಲು ಸಾಲು ಸಭೆಗೆ ನಡುಗಿದ ಪಾಕಿಸ್ತಾನ

**ಇಸ್ಲಾಮಾಬಾದ್:** ಪಹಲ್ಗಾಮ್ ದಾಳಿಯ ಬೆನ್ನಲ್ಲೇ ಭಾರತ ಹಾಗೂ ಪಾಕಿಸ್ತಾನದ ನಡುವಿನ ಪರಿಸ್ಥಿತಿ ಉದ್ವಿಗ್ನಗೊಂಡಿದೆ. ಕ್ರಾಸ್ ಬಾರ್ಡರ್ ಟೆರರಿಸಂ ಪ್ರೋತ್ಸಾಹಿಸುತ್ತಿರುವ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಲು ಭಾರತ ಸಿದ್ಧವಾಗಿದೆ. ಮಂಗಳವಾರವಷ್ಟೇ ಪ್ರಧಾನಿ ಹೈ ವೋಲ್ಟೇಜ್ ಸಭೆ ನಡೆಸಿ ಸೇನೆಗೆ ಸಂಪೂರ್ಣ ಸ್ವಾತಂತ್ರ್ಯವನ್ನು ನೀಡಿದ್ದರು.

ಇದು ಪಾಕಿಸ್ತಾನದ ಎದೆಯನ್ನು ನಡುಗಿಸಿದ್ದು, ಈ ಸಲ ಭಾರತ ನಮ್ಮನ್ನು ಬಿಡಲ್ಲ ಎಂಬುದು ಗೊತ್ತಾಗಿದೆ. ಈ ಹಿನ್ನೆಲೆ ಪಾಕಿಸ್ತಾನದ ಮಾಹಿತಿ ಮತ್ತು ಪ್ರಸಾರ ಖಾತೆಯ ಸಚಿವ ಮಧ್ಯರಾತ್ರಿ 2 ಗಂಟೆಗೆ ಸುದ್ದಿಗೋಷ್ಠಿ ನಡೆಸಿ ಬುಧವಾರ ಅಥವಾ ಗುರುವಾರ ಭಾರತ ನಮ್ಮ ಮೇಲೆ ದಾಳಿ ನಡೆಸೋದು ಖಚಿತ ಎಂದಿದ್ದಾರೆ.

ಅದಲ್ಲದೇ ಜಗತ್ತು ಭಾರತದ ಸಂಭಾವ್ಯ ದಾಳಿಯನ್ನು ಗಮನಿಸಲಿ ಎನ್ನುವ ಮೂಲಕ ಪರೋಕ್ಷವಾಗಿ ಕಾಪಾಡಿ.. ಕಾಪಾಡಿ ಎಂದು ಗೋಗರೆದಿದೆ. ಪಾಕ್ ಸಚಿವನ ಈ ಮಾತುಗಳಲ್ಲಿ ಪಾಕಿಸ್ತಾನದ ಆತಂಕ ಬಯಲಾ

### ಸಚಿವರ ಈ ಆತಂಕದ ಸುದ್ದಿಗೋಷ್ಠಿ

**ಪಾಕಿಸ್ತಾನದ ಸಚಿವರ ಈ ಆತಂಕದ ಸುದ್ದಿಗೋಷ್ಠಿ ಪ್ರಧಾನಿ ನರೇಂದ್ರ ಮೋದಿ ತಮ್ಮ ನಿವಾಸದಲ್ಲಿ ಹೈ ವೋಲ್ಟೇಜ್ ಸಭೆ ನಡೆಸಿದ ಬೆನ್ನಲ್ಲೇ ನಡೆದಿದೆ. ಪ್ರಧಾನಿ ಮೋದಿ ತಮ್ಮ ನಿವಾಸದಲ್ಲಿ ಸಂಜೆ ಸುಮಾರು ಒಂದೂವರೆ ಗಂಟೆಗಳ ಕಾಲ ಸಭೆ ನಡೆಸಿದರು. ಈ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ ಸಿಂಗ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಚೀಫ್ ಅಫ್ ಡಿಫೆನ್ಸ್ ಸರ್ವೀಸಸ್ ಜನರಲ್ ಅನಿಲ್ ಚೌಹಾಣ್, ಭಾರತೀಯ ಸೇನೆಯ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ವಾಯುಪಡೆ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಮತ್ತು ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಇದ್ದರು. ಉಗ್ರರ ವಿರುದ್ಧ ಕಾರ್ಯಾಚರಣೆ ಬಗ್ಗೆ ಚರ್ಚಿಸಿದ ಮೋದಿ, ಸೇನೆಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದಾರೆ. ಪಾಕಿಸ್ತಾನಕ್ಕೆ ಯಾವ ರೀತಿ ಉತ್ತರ ಕೊಡಬೇಕೋ ಎಲ್ಲ ನೀವೆ ನಿರ್ಧರಿಸಿ, ಟಾರ್ಗೆಟ್ ಹಾಗೂ ಸಮಯವನ್ನು ನೀವೆ ನಿರ್ಧಾರ ಮಾಡಿ ಎಂದು ಸೇನೆಗೆ ಫ್ರೀ ಹ್ಯಾಂಡ್ ಕೊಟ್ಟಿದ್ದಾರೆ.**

ಗಿದ್ದು, ನಾವು ತಿರುಗೇಟು ನೀಡಲು ಸಿದ್ಧ ಎಂದು ಹೇಳಿರುವುದು ಎರಡು ದೇಶಗಳ ನಡುವೆ ಯುದ್ಧ ನಡೆಯುವುದು ಫಿಕ್ಸ್ ಎಂಬಂತಾಗಿದೆ. ಹೌದು, ಪ್ರಧಾನಿ ಮೋದಿ ಸಭೆ ಬೆನ್ನಲ್ಲೇ ಮಧ್ಯರಾತ್ರಿ 2 ಗಂಟೆಗೆ ಸುದ್ದಿಗೋಷ್ಠಿ ನಡೆಸಿ



**ಭಾರತ ನಮ್ಮನ್ನು ಬಿಡಲ್ಲ**

### ಮೋದಿ ಸಭೆ ಆಗಿ ಕೆಲವೇ ಗಂಟೆಯಲ್ಲಿ ಸುದ್ದಿಗೋಷ್ಠಿ

**ಅದಲ್ಲದೇ, ಭಾರತ - ಪಾಕಿಸ್ತಾನದ ಮೇಲೆ ಯುದ್ಧ ಹೇರಲು ಪ್ರಯತ್ನಿಸಿದರೆ, ವಿನಾಶಕಾರಿ ಪರಿಸ್ಥಿತಿಗೆ ಅದು ಮಾತ್ರ ಜವಾಬ್ದಾರಿ ಆಗಿರುತ್ತದೆ ಎಂದು ಅತ್ತೌಲ್ಲಾ ತರಾರ್ ಹೇಳಿರುವುದು ಭಾರತದ ವಿರುದ್ಧ ಅಣ್ವಸ್ತ್ರ ಪ್ರಯೋಗಿಸುವ ಆಯ್ಕೆಯನ್ನು ಫಸ್ಟ್ ಚಾಯ್ಸ್ ಆಗಿಟ್ಟಿರುವುದು ಸ್ಪಷ್ಟವಾಗಿದೆ. ಅದಲ್ಲದೇ ಇದೇ ವೇಳೆ ಪಾಕಿಸ್ತಾನದ ವಿರುದ್ಧ ಭಾರತದ ಯೋಜಿತ ಆಕ್ರಮಣವನ್ನು ಅಂತಾರಾಷ್ಟ್ರೀಯ ಸಮುದಾಯ ಗಮನಿಸಬೇಕು ಎಂದು ತರಾರ್ ಕರೆ ನೀಡಿದ್ದು, ಭಾರತದ ದಾಳಿಯಿಂದ ತಮ್ಮನ್ನು ರಕ್ಷಿಸಿ ಎಂದು ಕೇಳಿಕೊಂಡಂತಿದೆ.**

ರುವ ಪಾಕಿಸ್ತಾನದ ಮಾಹಿತಿ ಮತ್ತು ಪ್ರಸಾರ ಖಾತೆಯ ಫೆಡರಲ್ ಸಚಿವ ಅತ್ತೌಲ್ಲಾ ತರಾರ್, ಮುಂದಿನ 24 ರಿಂದ 36 ಗಂಟೆಗಳಲ್ಲಿ ತಮ್ಮ ದೇಶದ ವಿರುದ್ಧ ಮಿಲಿಟರಿ ಕಾರ್ಯಾಚರಣೆ ನಡೆಸುವ ಬಗ್ಗೆ ಗುಪ್ತಚರ ವರದಿ ಸಿಕ್ಕಿದೆ ಎಂದಿದ್ದಾರೆ.

## ಮಿನಿ ನ್ಯೂಸ್

### ಉಗ್ರರ ದಾಳಿ ವಿರುದ್ಧ ರಾಜಕೀಯ ಐಕ್ಯತೆಗೆ ಮಾಯವತಿ ಕರೆ

**ಲಕ್ನೋ:** ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ರಾಜಕೀಯ ಐಕ್ಯತೆಗೆ ಬಿಎಸ್‌ಪಿ ಮುಖ್ಯಸ್ಥೆ ಮಾಯಾವತಿ ಕರೆ ನೀಡಿದ್ದಾರೆ. ರಾಜಕೀಯ ಪಾಯಿಂಟ್ ಸ್ಕೋರಿಂಗ್‌ನಲ್ಲಿ ತೊಡಗುವ ಬದಲು ಸರ್ಕಾರದ ಕ್ರಮಗಳನ್ನು ಬೆಂಬಲಿಸುವಂತೆ ಎಲ್ಲಾ ಪಕ್ಷಗಳನ್ನು ಅವರು ಇದೇ ಸಂದರ್ಭದಲ್ಲಿ ಒತ್ತಾಯಿಸಿದರು.

ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪ್ರವಾಸಿ ತಾಣದಲ್ಲಿ ಕೆಲವು ಭಯೋತ್ಪಾದಕರು ಗುಂಡು ಹಾರಿಸಿದಾಗ 26 ಜನರು ಸಾವನ್ನಪ್ಪಿದ್ದರು.ಈ ಬಗ್ಗೆ ಟ್ವೀಟ್ ಮಾಡಿರುವ ಮಾಯಾವತಿ, ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ತೆಗೆದು ಕೊಳ್ಳುವ ಪ್ರತಿಯೊಂದು ಹೆಜ್ಜೆಯಲ್ಲೂ ಎಲ್ಲಾ ರಾಜಕೀಯ ಪಕ್ಷಗಳು ಒಂದಾಗಿ ಸರ್ಕಾರದೊಂದಿಗೆ ನಿಲ್ಲಬೇಕು ಎಂದಿದ್ದಾರೆ. ಕ್ಷುಲ್ಲಕ ರಾಜಕೀ ಯವನ್ನು ಗುರಿಯಾಗಿಸಿಕೊಂಡು ಪ್ರಚೋದ ನಕಾರಿ ಪೋಸ್ಟರ್‌ಗಳು ಅಥವಾ ಹೇಳಿಕೆಗಳಿಗೆ ಇದು ಸಮಯವಲ್ಲ, ಏಕೆಂದರೆ ಅಂತಹ ಕ್ರಮಗಳು ಸಾರ್ವಜನಿಕರಲ್ಲಿ ಗೊಂದಲವನ್ನು ಸೃಷ್ಟಿಸುತ್ತಿವೆ, ಇದು ರಾಷ್ಟ್ರೀಯ ಹಿತಾಸಕ್ತಿಗೆ ವಿರುದ್ಧವಾಗಿದೆ ಎಂದು ಅವರು ಹೇಳಿದರು.

## ಹಿಂದೂ ನಾಯಕ ಚಿನ್ಮಯ್ ಕೃಷ್ಣ ದಾಸ್‌ಗೆ ಕೊನೆಗೂ ಜಾಮೀನು

**ಬಾಂಗ್ಲಾದೇಶ:** ಇಸ್ಕಾನ್‌ನ ಮಾಜಿ ಧರ್ಮಗುರು ಹಾಗೂ ಹಿಂದೂ ನಾಯಕ ಚಿನ್ಮಯ್ ಕೃಷ್ಣ ದಾಸ್ ಅವರಿಗೆ ಬಾಂಗ್ಲಾದೇಶದ ಹೈಕೋರ್ಟ್ ಕೊನೆಗೂ ಜಾಮೀನು ಮಂಜೂರು ಮಾಡಿದೆ. ಸುಮಾರು ಆರು ತಿಂಗಳ ಹಿಂದೆ ದೇಶದ್ರೋಹದ ಕೇಸ್‌ನಲ್ಲಿ ಅವರನ್ನು ಅಲ್ಲಿನ ಪೊಲೀಸರು ಬಂಧಿಸಿದ್ದರು.

ಚಿನ್ಮಯ್ ಕೃಷ್ಣ ದಾಸ್ ಅವರು ಈ ಹಿಂದೆ ಇಸ್ಕಾನ್‌ನ ಧರ್ಮಗುರುವಾಗಿದ್ದರು. ಬಾಂಗ್ಲಾದೇಶ ಸಮ್ಮಿಲಿತ್ ಸನಾತನಿ ಜಾಗರಣ್ ಜೋಟೆಯ ವಕ್ತಾರರಾಗಿ ಅವರು ಕೆಲಸ ಮಾಡುತ್ತಿದ್ದರು. ಬಾಂಗ್ಲಾದೇಶದ ರಾಷ್ಟ್ರಧ್ವಜಕ್ಕೆ ಅವಮಾನ ಮಾಡಿದ ಆರೋಪದಲ್ಲಿ ಅವರ ಮೇಲೆ ದೇಶದ್ರೋಹದ ಕೇಸ್ ದಾಖಲಿಸಲಾಗಿತ್ತು.

ಅವರನ್ನು ನವೆಂಬರ್ 25 ರಂದು ಢಾಕಾ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿತ್ತು. ಆದರೆ, ಜಾಮೀನು ಪಡೆಯುವ ಅವರ ಪ್ರಯತ್ನ ಸಫಲವಾಗಿರಲಿಲ್ಲ. ಕೆಳ ನ್ಯಾಯಾಲಯ ಅವರ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ ನಂತರ ಅವರು ಬೇಲ್‌ಗಾಗಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದರು. ಇದೀಗ ಬಾಂಗ್ಲಾದೇಶ ಹೈಕೋರ್ಟ್ ನ್ಯಾಯಮೂರ್ತಿಗಳಾದ ಮೊಹಮ್ಮದ್ ಅಟೋವರ್ ರೆಹಮಾನ್ ಮತ್ತು ಮೊಹಮ್ಮದ್ ಅಲಿ ರೆಝಾ ಅವರ



ಪೀಠವು ಜಾಮೀನು ಮಂಜೂರು ಮಾಡಿದೆ.

ಏಪ್ರಿಲ್ 23 ರಂದು ಚಿನ್ಮಯ್ ದಾಸ್ ಪರ ವಕೀಲ ಅಪೂರ್ಬಾ ಕುಮಾರ್ ಭಟ್ಟಾಚಾರ್ಜಿ ಅವರು ತಮ್ಮ ಕಕ್ಷಿದಾರರಿಗೆ ಜಾಮೀನು ನೀಡುವಂತೆ ಹೈಕೋರ್ಟ್ ಪೀಠಕ್ಕೆ ಮನವಿ ಮಾಡಿದ್ದರು. ದಾಸ್ ಅವರು ಅನಾರೋಗ್ಯದಿಂದ ಬಳಲುತ್ತಿದ್ದು, ವಿಚಾರಣೆಯಿಲ್ಲದೆ ಜೈಲು ಶಿಕ್ಷೆ ಎದುರಿಸುತ್ತಿದ್ದಾರೆ ಎಂದು ಹೇಳಿದ್ದರು.

ಚಿನ್ಮಯ್ ಕೃಷ್ಣ ದಾಸ್ ಅವರ ಬಂಧನವನ್ನು ವಿರೋಧಿಸಿ ಅವರ ಬೆಂಬಲಿಗರು ನವೆಂಬರ್ 27 ರಂದು ಚಿತ್ತಗಾಂಗ್ ಕೋರ್ಟ್ ಕಟ್ಟಡದ ಹೊರಗೆ ಹಿಂಸಾತ್ಮಕ ಘರ್ಷಣೆಗೆ ಇಳಿದಿದ್ದರು. ಇದರಲ್ಲೇ ವಕೀಲರೊಬ್ಬರು ಮೃತಪಟ್ಟಿದ್ದರು. ಬಾಂಗ್ಲಾದೇಶದ 17 ಕೋಟಿ ಜನಸಂಖ್ಯೆಯಲ್ಲಿ ಅಲ್ಪಸಂಖ್ಯಾತ ಹಿಂದೂಗಳು ಕೇವಲ ಶೇ. 8ರಷ್ಟು ಇದ್ದಾರೆ. ಆಗಸ್ಟ್ 5ರಂದು ಶೇಖ್ ಹಸೀನಾ ನೇತೃತ್ವದ ಅವಾಮಿ ಲೀಗ್ ಸರ್ಕಾರ ಪತನವಾದ ಬಳಿಕ ದೇಶದ 60ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಹಿಂದೂಗಳ ಮೇಲೆ ನೂರಾರು ದಾಳಿಗಳು ನಡೆದಿತ್ತು. ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ದೇಶದಲ್ಲಿ ತೊಂದರೆ ಉಂಟುಮಾಡುತ್ತಿರುವ ಮೂಲಭೂತವಾದಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಮತ್ತು ಅಲ್ಪಸಂಖ್ಯಾತರಲ್ಲಿ ವಿಶ್ವಾಸವನ್ನು ಬೆಳೆಸಲು ಈ ರೀತಿ ಸಮಸ್ಯೆ ಸೃಷ್ಟಿಸುವವರನ್ನು ಬಂಧಿಸಬೇಕು ಎಂದು ಚಿನ್ಮಯಿ ದಾಸ್ ಈ ಹಿಂದೆ ಒತ್ತಾಯಿಸಿದ್ದರು.

### ಚಿನ್ಮಯಿ ಕೃಷ್ಣದಾಸ್ ಪರ ಪ್ರತಿಭಟನೆ

**ಚಿನ್ಮಯಿ ಕೃಷ್ಣ ದಾಸ್ ಅವರ ಬಂಧನವನ್ನು ವಿರೋಧಿಸಿ ಪ್ರತಿಭಟನೆಗಳು ನಡೆದಿದ್ದವು. ಅವರ ಬೆಂಬಲಿಗರು ಮತ್ತು ಪೊಲೀಸರ ನಡುವೆ ಭಾರೀ ಘರ್ಷಣೆಯೂ ಉಂಟಾಗಿತ್ತು. ಈ ಗಲಭೆಯಲ್ಲಿ ವಕೀಲರೊಬ್ಬರು ಮೃತಪಟ್ಟಿದ್ದಲ್ಲದೆ ಇದು ಭಾರತ ಮತ್ತು ಬಾಂಗ್ಲಾದೇಶದ ನಡುವಿನ ಸಂಬಂಧವನ್ನು ಇನ್ನಷ್ಟು ಹದಗೆಡಿಸಿತ್ತು.**

## ಭೀಕರ ಬೆಂಕಿ ಅವಘಡ, 15 ಮಂದಿ ಸಾವು

**ಕೋಲ್ಕತ್ತಾ:** ಮೆಚುಪಟ್ಟಿ ಪ್ರದೇಶದ ಹೋಟೆಲ್ ವೊಂದರಲ್ಲಿ ಭೀಕರ ಬೆಂಕಿ ಕಾಣಿಸಿಕೊಂಡಿದ್ದು, ಮಹಿಳೆ ಮತ್ತು ಇಬ್ಬರು ಮಕ್ಕಳು ಸೇರಿದಂತೆ 15 ಜನರು ಸಾವನ್ನಪ್ಪಿದ್ದಾರೆ ಮಧ್ಯ ಕೋಲ್ಕತ್ತಾದಲ್ಲಿರುವ 6 ಮಹಡಿಯ ಹೋಟಲ್‌ನ 42 ಕೊಠಡಿಗಳಲ್ಲಿ 88 ಅತಿಥಿಗಳಿದ್ದರು,ಕಳೆದ ರಾತ್ರಿ ಈ ಬೆಂಕಿ ಅವಘಡ ಸಂಭವಿಸಿದೆ. ಸುಮಾರು 13 ಮಂದಿ ಗಾಯಗೊಂಡಿದ್ದಾರೆ ಅಧರಲ್ಲಿ ಹಲವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕಡಿಮೆ ವೆಚ್ಚದ ರಿತುರಾಜ್ ಹೋಟೆಲ್‌ನಲ್ಲಿ ರಾತ್ರಿ 7:30 ರ ಸುಮಾರಿನಲ್ಲಿ ಹೊಗೆ ಕಾಣಿಸಿಕೊಂಡಿದ್ದು ಅಲ್ಲಿದ್ದವರು ಚೀರಾಡುತ್ತಾ ಹೊರಗೆ ಓಡಿಬಂದಿದ್ದಾರೆ.

ಹತ್ತು ಅಗ್ನಿಶಾಮಕ ವಾಹನ ಸ್ಥಳಕ್ಕೆ ಬಂದು ಸಿಬ್ಬಂದಿ ಇಂದು ಬೆಳಿಗ್ಗೆ ಬೆಂಕಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ ಎಂದು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ತನಿಖೆಗೆ ವಿಶೇಷ ತನಿಖಾ ತಂಡವನ್ನು (ಎಸ್‌ಐಟಿ) ರಚಿಸಲಾಗಿದೆ. ಮೃತರಲ್ಲಿ 11 ಪುರುಷರು ಸೇರಿದ್ದಾರೆ, ಅವರಲ್ಲಿ ಎಂಟು



ಮಂದಿಯನ್ನು ಗುರುತಿಸಲಾಗಿದೆ. ಬೆಂಕಿ ಅನಾಹುತಕ್ಕೆ ಕಾರಣ ಇನ್ನೂ ತಿಳಿದುಬಂದಿಲ್ಲ. ನಮ್ಮ ಫೋರೆನ್ಸಿಕ್ ತಂಡವು ಪರಿಶೀಲಿಸುತ್ತದೆ ಎಂದು ಪೊಲೀಸ್ ಅಧಿಕಾರಿ ಹೇಳಿದರು.


ಅವಘಡದಲ್ಲಿ ಸಂಭವಿಸಿದ ಪ್ರಾಣಹಾನಿಯ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರು ಸಂತಾಪ ವ್ಯಕ್ತಪಡಿಸಿದ್ದು, ಮೃತರ ಕುಟುಂಬಕ್ಕೆ 2 ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ತಿಳಿಸಿದ್ದಾರೆ ಮತ್ತು ಗಾಯಾಳುಗಳಿಗೆ 50,000 ರೂಪಾಯಿಗಳನ್ನು ನೀಡಲಾಗುವುದು ಎಂದು ಪಶ್ಚಿಮ ಬಂಗಾಳದ ಬಿಜೆಪಿ ಅಧ್ಯಕ್ಷ ಸುಕಾಂತ ಮಜುಂದಾರ್ ಅವರು ಮಮತಾ ಬ್ಯಾನರ್ಜಿ ವಿರುದ್ಧ ವಾಗ್ದಾಳಿ ನಡೆಸಿದರು.

## ಗಡಿಯುದ್ದಕ್ಕೂ ಪಾಕ್‌ನಿಂದ ನಿರಂತರ ಅಪ್ರಚೋದಿತ ದಾಳಿ

**ಜಮ್ಮು :** ಜಮ್ಮು ಮತ್ತು ಕಾಶ್ಮೀರದ ನಾಲ್ಕು ಗಡಿ ಜಿಲ್ಲೆಗಳ ಹಲವು ವಲಯಗಳಲ್ಲಿ ನಿಯಂತ್ರಣ ರೇಖೆ (ಎಲ್‌ಒಸಿ) ಮತ್ತು ಅಂತರರಾಷ್ಟ್ರೀಯ ಗಡಿ (ಐಬಿ) ಉದ್ದಕ್ಕೂ ಪಾಕಿಸ್ತಾನ ಪಡೆಗಳು ಅಪ್ರಚೋದಿತ ಗುಂಡಿನ ದಾಳಿಯಲ್ಲಿ ತೊಡಗಿದ್ದು, ಭಾರತೀಯ ಪಡೆಗಳು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜಮ್ಮು ಜಿಲ್ಲೆಯ ಐಬಿ ಉದ್ದಕ್ಕೂ ಪರ್ಗ್ವಾಲ್ ಸೆಕ್ಟರ್ ಮತ್ತು ರಾಜೌರಿ ಜಿಲ್ಲೆಯ ಸುಂದರ್ಬಾನಿ ಮತ್ತು ನೌಶೇರಾ ಸೆಕ್ಟರ್‌ಗಳಿಂದ ಸಣ್ಣ ಶಸ್ತ್ರಾಸ್ತ್ರಗಳಿಂದ ಪ್ರಾರಂಭವಾದ ಗುಂಡಿನ ದಾಳಿ ವರದಿಯಾಗಿದೆ.

ಏ. 22 ರಂದು ಪಹಲ್ಗಾಮ್ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯ ನಂತರ ನವದೆಹಲಿ ಮತ್ತು ಇಸ್ಲಾಮಾಬಾದ್ ನಡುವಿನ ಉದ್ವಿಗ್ನತೆಯ ಮಧ್ಯೆ, ನಿಯಂತ್ರಣ ರೇಖೆಯ ಉದ್ದಕ್ಕೂ ಪಾಕಿಸ್ತಾನದಿಂದ ಸತತ ಆರನೇ ರಾತ್ರಿ ಕದನ ವಿರಾಮ ಉಲ್ಲಂಘನೆಯಾಗಿದೆ.

ಏಪ್ರಿಲ್ 29–30 ರ ರಾತ್ರಿ, ಪಾಕಿಸ್ತಾನ ಸೇನಾ ಪೋಸ್ಟ್‌ಗಳು ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದ ನೌಶೇರಾ, ಸುಂದರ್ಬಾನಿ ಮತ್ತು ಅಖ್ನೂರ್ ಸೆಕ್ಟರ್‌ಗಳ ಎದುರಿನ ನಿಯಂತ್ರಣ ರೇಖೆಯ ಉದ್ದಕ್ಕೂ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ



**ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ 26 ಜನರ ಹತ್ಯೆಗೆ ಪ್ರತಿಕ್ರಿಯೆಯಾಗಿ ಭಾರತವು ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ಸ್ವಲ್ಪ ಸಮಯದ ನಂತರ, ಏಪ್ರಿಲ್ 24 ರ ರಾತ್ರಿಯಿಂದ, ಪಾಕಿಸ್ತಾನ ಪಡೆಗಳು ಕಾಶ್ಮೀರ ಕಣಿವೆಯಿಂದ ಪ್ರಾರಂಭಿಸಿ ಜಮ್ಮು ಮತ್ತು ಕಾಶ್ಮೀರದ ನಿಯಂತ್ರಣ ರೇಖೆಯ ಉದ್ದಕ್ಕೂ ವಿವಿಧ ಸ್ಥಳಗಳಲ್ಲಿ ಅಪ್ರಚೋದಿತ ಗುಂಡಿನ ದಾಳಿಯಲ್ಲಿ ತೊಡಗಿವೆ.**

ಗುಂಡಿನ ದಾಳಿಯನ್ನು ಪ್ರಾರಂಭಿಸಿದವು ಎಂದು ಜಮ್ಮುವಿನ ರಕ್ಷಣಾ ವಕ್ತಾರರು ತಿಳಿಸಿದ್ದಾರೆ.

ಭಾರತೀಯ ಸೇನಾ ಪಡೆಗಳು ತ್ವರಿತವಾಗಿ ಮತ್ತು ಪ್ರಮಾಣಾನುಗುಣವಾಗಿ ಪ್ರತಿಕ್ರಿಯಿಸಿದವು ಎಂದು ವಕ್ತಾರರು ತಿಳಿಸಿದ್ದಾರೆ. ಕಾಶ್ಮೀರ ಕಣಿವೆಯ ಬಾರಾಮುಲ್ಲಾ ಮತ್ತು ಕುಪ್ವಾರಾ ಜಿಲ್ಲೆಗಳ ನಿಯಂತ್ರಣ ರೇಖೆಯ ಉದ್ದಕ್ಕೂ ಮತ್ತು ಪರ್ಗ್ವಾಲ್ ವಲಯದ ಐಬಿ ಉದ್ದಕ್ಕೂ ಪಾಕಿಸ್ತಾನದ ಪೋಸ್ಟ್‌ಗಳಿಂದ ಇದೇ ರೀತಿಯ ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳ ಗುಂಡಿನ ಘಟನೆಗಳು ವರದಿಯಾಗಿವೆ.

ಆರಂಭದಲ್ಲಿ, ಕುಪ್ವಾರಾ ಮತ್ತು ಬಾರಾಮುಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭವಾದ ಗುಂಡಿನ ದಾಳಿ ನಂತರ ಪೂಂಚ್ ಮತ್ತು ಅಖ್ನೂರ್ ವಲಯಗಳಿಗೆ ಹರಡಿತು. ಇದು ರಾಜೌರಿ ಜಿಲ್ಲೆಯ ಸುಂದರ್ಬಾನಿ ಮತ್ತು ನೌಶೇರಾ ಸೆಕ್ಟರ್ಗಳಿಗೆ ವಿಸ್ತರಿಸಿತು, ನಂತರ ಜಮ್ಮುವಿನ ಪರ್ಗ್ವಾಲ್ ವಲಯದ ಐಬಿ ಉದ್ದಕ್ಕೂ ಗುಂಡಿನ ದಾಳಿ ನಡೆಯಿತು.

## ಭಾರತ-ಯುಕೆ ನಡುವೆ ಒಪ್ಪಂದ

**ಲಂಡನ್:** ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ಎರಡು ದಿನಗಳ ಯುಕೆ ಭೇಟಿಯನ್ನು ಲಂಡನ್ ನ ಲ್ಯಾಂಕಾಸ್ಟರ್ ಹೌಸ್ ನಲ್ಲಿ ಜಂಟಿ ವ್ಯಾಪಾರ ಸ್ವಾಗತ ಸಮಾರಂಭದಲ್ಲಿ ಮುಕ್ತಾಯಗೊಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಯುಕೆ ವಿದೇಶಾಂಗ ಕಾರ್ಯದರ್ಶಿ ಡೇವಿಡ್ ಲ್ಯಾಮಿ ಮತ್ತು ವ್ಯಾಪಾರ ಮತ್ತು ವ್ಯಾಪಾರ ಕಾರ್ಯದರ್ಶಿ ಜೊನಾಥನ್ ರೆನಾಲ್ಡ್ ಮತ್ತು ಎರಡೂ ದೇಶಗಳ ಹಿರಿಯ ಉದ್ಯಮಿಗಳು ಭಾಗವಹಿಸಿದ್ದರು. ಡೌನಿಂಗ್ ಸ್ಟ್ರೀಟ್ನಲ್ಲಿ ರೆನಾಲ್ಡ್ ಮತ್ತು ಯುಕೆ ಚಾನ್ಸಲರ್ ರಾಚೆಲ್ ರೀವ್ಸ್ ಅವರೊಂದಿಗಿನ ತೀವ್ರವಾದ ಮುಚ್ಚಿದ ಬಾಗಿಲಿನ ಸಭೆಗಳ ನಂತರ ಇದು ನಡೆಯಿತು, ಅಲ್ಲಿ ನಡೆಯುತ್ತಿರುವ ಮುಕ್ತ ವ್ಯಾಪಾರ ಒಪ್ಪಂದ ಮಾತುಕತೆಗಳು ಕಾರ್ಯಸೂಚಿಯಲ್ಲಿ ಉನ್ನತ ಮಟ್ಟದಲ್ಲಿವೆ.ಯುಕೆ ವ್ಯಾಪಾರ ಮತ್ತು ವ್ಯಾಪಾರ ಕಾರ್ಯದರ್ಶಿ ಜೊನಾಥನ್ ನೇತೃತ್ವದ ಸಭೆಯನ್ನುದ್ದೇಶಿಸಿ ಮಾತನಾಡಿದ್ದೇನೆ ಮತ್ತು ಭಾರತ –ಯುಕೆ ಪಾಲುದಾರಿಕೆಯ ಉಜ್ವಲ ಭವಿಷ್ಯದ ಬಗ್ಗೆ ಮಾತನಾಡಿದ್ದೇನೆ ಎಂದು ಗೋಯಲ್ ಜಂಟಿ ವ್ಯಾಪಾರ ಸ್ವಾಗತದ ನಂತರ ಹೇಳಿದರು.

ನಮ್ಮ ಯುಕೆ ಪಾಲುದಾರರು ನೀಡಿದ ಆತ್ಮೀಯ ಮತ್ತು ಕರುಣಾಮಯಿ ಆತಿಥ್ಯಕ್ಕೆ ಅಪಾರ ಕೃತಜ್ಞರಾಗಿರುತ್ತೇವೆ. ನಮ್ಮ ಹಂಚಿಕೆಯ ದೃಷ್ಟಿಕೋನದ ಸ್ಪಷ್ಟ ಫಲಿತಾಂಶಗಳನ್ನು ಎದುರು ನೋಡುತ್ತಿದ್ದೇವೆ ಎಂದು ಅವರು ಹೇಳಿದರು.

## ಪಹಲ್ಗಾಮ್ ದಾಳಿಯ ಶಂಕಿತನನ್ನು ಗುರುತು ಹಿಡಿದ ಜಲ್ನಾ ನಿವಾಸಿ

**ಜಲ್ನಾ:** ಇತ್ತೀಚೆಗೆ ಕಾಶ್ಮೀರದಿಂದ ಹಿಂದಿರುಗಿದ ಮಹಾರಾಷ್ಟ್ರದ ಜಲ್ನಾ ನಗರದ ಯುವಕನೊಬ್ಬ ಪಹಲ್ಗಾಮ್ ಭಯೋತ್ಪಾದಕ ಪ್ರಕರಣದ ಶಂಕಿತ ದಾಳಿಕೋರರಲ್ಲಿ ಒಬ್ಬನು ಹತ್ಯಾಕಾಂಡಕ್ಕೆ ಒಂದು ದಿನ ಮೊದಲು ತನ್ನೊಂದಿಗೆ ಮಾತನಾಡಿದ್ದ ಎಂದು ಹೇಳಿಕೊಂಡಿದ್ದಾನೆ. ಹಿಂದೂ ಹೋ ಕ್ಯಾ. ನೀವು ಕಾಶ್ಮೀರದವರಂತೆ ಕಾಣುತ್ತಿಲ್ಲ ಎಂದು ಆದರ್ಶ್ ರೌತ್ ಏಪ್ರಿಲ್ 21 ರಂದು ಬೈಸರನ್ ಕಣಿವೆಯ ಆಹಾರ ಮಳಿಗೆಯಲ್ಲಿ ವ್ಯಕ್ತಿಯೊಬ್ಬರೊಂದಿಗಿನ ಸಂವಾದವನ್ನು ನೆನಪಿಸಿಕೊಂಡಿದ್ದಾರೆ. ಏಪ್ರಿಲ್ 22 ರಂದು ದಕ್ಷಿಣ ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಜನಪ್ರಿಯ ಪ್ರವಾಸಿ ಪಟ್ಟಣ ಪಹಲ್ಗಾಮ್ ಬಳಿಯ ಹುಲ್ಲುಗಾವಲಿನಲ್ಲಿ ಭಯೋತ್ಪಾದಕರು ಗುಂಡು ಹಾರಿಸಿದಾಗ 26 ಜನರು ಸಾವನ್ನಪ್ಪಿದ್ದಾರೆ ಮತ್ತು ಹಲವರು ಗಾಯಗೊಂಡಿದ್ದಾರೆ.

ಪ್ರವಾಸಿಗರ ಹತ್ಯಾಕಾಂಡದ ಕೆಲವು ದಿನಗಳ ನಂತರ, ಭದ್ರತಾ ಸಂಸ್ಥೆಗಳು ಮೂವರು ಶಂಕಿತ ದಾಳಿಕೋರರ ರೇಖಾ ಚಿತ್ರಗಳನ್ನು ಬಿಡುಗಡೆ ಮಾಡಿವೆ ಮತ್ತು ಅವರಲ್ಲಿ ಒಬ್ಬರು ಅವರೊಂದಿಗೆ ಮಾತನಾಡಿದ ವ್ಯಕ್ತಿಗೆ ಹೋಲಿಕೆಯಾಗಿದ್ದಾರೆ ಎಂದು ರೌತ್ ಮಾಧ್ಯಮಗಳಿಗೆ ತಿಳಿಸಿದರು.ರೌತ್ ಅವರ ಪ್ರಕಾರ, ಏಪ್ರಿಲ್ 21 ರಂದು ಪಹಲ್ಗಾಮ್ನಲ್ಲಿ ಕುದುರೆ ಸವಾರಿ ಮಾಡಲು ಹೋಗಿದ್ದೆ ಮತ್ತು ಆಹಾರಕ್ಕಾಗಿ ಮ್ಯಾಗಿ ಸ್ಟಾಲ್ ಬಳಿ ನಿಂತಿದ್ದಾಗ ವ್ಯಕ್ತಿಯೊಬ್ಬರು ಅವರನ್ನು ಸಮೀಪಿಸಿ ನೀವು ಹಿಂದೂವೇ ಎಂದು ಕೇಳಿದ್ದರು. ನಂತರ ಶಂಕಿತನು ತನ್ನ ಸಹಚರನ ಕಡೆಗೆ ತಿರುಗಿ, ಇಂದು ಕಡಿಮೆ ಜನಸಂದಣಿ ಇದೆ ಎಂದು



ಹೇಳಿದ್ದ ಎಂದು ರೌತ್ ಹೇಳಿದರು. ಸಂಭಾಷಣೆಯು ಸ್ವಲ್ಪ ಗೊಂದಲಮಯವಾಗಿದೆ ಎಂದು ಜಲ್ನಾ ನಿವಾಸಿ ಹೇಳಿದರು ಆದರೆ ಮರುದಿನ ಭಯೋತ್ಪಾದಕರು ಅದೇ ಪ್ರದೇಶದಲ್ಲಿ ಎರಡು ಡಜನ್‌ಗೂ ಹೆಚ್ಚು ಪ್ರವಾಸಿಗರನ್ನು ಕೊಲ್ಲುವವರೆಗೂ ಅದರ ಪೂರ್ಣ ಪರಿಣಾಮವನ್ನು ಗ್ರಹಿಸಲಿಲ್ಲ. ರಾಷ್ಟ್ರೀಯ ತನಿಖಾ ಸಂಸ್ಥೆ ಬಿಡುಗಡೆ ಮಾಡಿದ ರೇಖಾಚಿತ್ರಗಳನ್ನು ನೋಡಿದ ನಂತರ, ನನ್ನೊಂದಿಗೆ ಮಾತನಾಡಿದ್ದ ವ್ಯಕ್ತಿಯೇ ಶಂಕಿತ ಎಂದು ಅವರು ಹೇಳಿದ್ದಾರೆ. ಕಾಶ್ಮೀರದಲ್ಲಿನ ತನ್ನ ಅನುಭವದ ವಿವರವಾದ ಖಾತೆಯನ್ನು ಎನ್‌ಐಎಗೆ ಇಮೇಲ್ ಮಾಡಿದ್ದೇನೆ ಎಂದು ರಾವತ್ ಹೇಳಿದರು. ನನಗೆ ನೆನಪಿರುವ ಎಲ್ಲವನ್ನೂ ಬರೆದಿದ್ದೇನೆ. ನೆಟ್‌ವರ್ಕ್ ಸಮಸ್ಯೆಗಳಿಂದಾಗಿ ನಾನು ಆರಂಭದಲ್ಲಿ ಮ್ಯಾಗಿ ಸ್ಟಾಲ್ ಮಾಲೀಕರಿಗೆ ಪಾವತಿಸಲು ಸಾಧ್ಯವಾಗಲಿಲ್ಲ ಎಂದು ನಾನು ಉಲ್ಲೇಖಿಸಿದ್ದೇನೆ. ನಾನು ಬೆಟ್ಟದಿಂದ ಇಳಿದ ನಂತರ ಅವರ ಫೋನ್ ಸಂಖ್ಯೆಯನ್ನು ತೆಗೆದುಕೊಂಡು ಅವರಿಗೆ ಪಾವತಿಸಿದೆ ಎಂದು ಅವರು ಹೇಳಿದರು.

### ಜಸ್ಟಿನ್ ಟ್ರೂಡೋ ಆಡಳಿತದೊಂದಿಗೆ ಹದಗೆಟ್ಟಿರುವ ಸಂಬಂಧವನ್ನು ಮತ್ತೆ ಸರಿಪಡಿಸಿಕೊಳ್ಳಲು ಭಾರತವು ಪ್ರಮುಖ ಹೆಜ್ಜೆ

# ಭಾರತದೊಂದಿಗೆ ದೋಸ್ತಿಗೆ ಮಾರ್ಕ್ ಕಾರ್ನಿ ಉತ್ಸಾಹ

**ದೆಹಲಿ:** ಮಾರ್ಕ್ ಕಾರ್ನಿ ನೇತೃತ್ವದ ಲಿಬರಲ್ ಪಾರ್ಟಿಯು ಕೆನಡಾದಲ್ಲಿ ಹೊಸ ಸರಕಾರವನ್ನು ರಚಿಸುತ್ತಿದೆ. ಇದು ಭಾರತದ ಪಾಲಿಗೂ ಹೊಸ ನಿರೀಕ್ಷೆಯನ್ನು ಹುಟ್ಟುಹಾಕಿದೆ.

ಭಾರತದ ವಿದ್ಯಾರ್ಥಿಗಳು, ಉದ್ಯಮಿಗಳ ಭವಿಷ್ಯ ಹಾಗೂ ಭಾರತ ಮತ್ತು ಕೆನಡಾದ ಬಾಂಧವ್ಯದ ಬಗ್ಗೆ ಭರವಸೆಯ ತಂಗಾಳಿ ಬೀಸುತ್ತಿದೆ. ಹೊಸದಿಲ್ಲಿ ಮತ್ತು ಒಟ್ಟಾವಾ ನಡುವೆ ಹಿಂದಿನ ಸ್ನೇಹ ಮತ್ತೆ ಚಿಗುರುವ ವಿಶ್ವಾಸವು ಕೆನಡಾದ ಚುನಾವಣಾ ಫಲಿತಾಂಶದ ಜೊತೆಗೆ ಮೂಡುತ್ತಿದೆ.

ಈಗ ಕೆನಡಾದಲ್ಲಿ ಮಾರ್ಕ್ ಕಾರ್ನಿ ನೇತೃತ್ವದ ಸರಕಾರವು ರಚನೆಯಾಗುತ್ತಿದೆ. ಕೆನಡಾ ದೇಶವನ್ನು ಅಮೆರಿಕದ 51ನೇ ರಾಜ್ಯವಾಗಿ ಸೇರಿಸಿಕೊಳ್ತೀನಿ ಅಂತಿದ್ದ ಡೊನಾಲ್ಡ್ ಟ್ರಂಪ್ ವಿಚಾರಗಳನ್ನೇ ಮುಂದಿಟ್ಟು ಕಾರ್ನಿ ಚುನಾವಣಾ ಪ್ರಚಾರ ನಡೆಸಿದ್ದರು. ಸುಂಕ ಹೇರಿಕೆ ಮಾಡಿರುವ ಅಮೆರಿಕದ ಸವಾಲುಗಳನ್ನು ದಿಟ್ಟವಾಗಿ ಹೆದರಿಸುವುದಾಗಿ ಘೋಷಿಸಿರುವ ಕಾರ್ನಿಗೆ ಕೆನಡಾದ ಜನರು ಬೆಂಬಲ ಕೊಟ್ಟಿದ್ದಾರೆ. ಪೂರ್ಣ ಬಹುಮತಕ್ಕೆ ನಾಲ್ಕು ಸ್ಥಾನಗಳಷ್ಟು ಕಡಿಮೆ ಅಂತರದಲ್ಲಿರುವ ಲಿಬರಲ್‌ಗೆ ಪುಟ್ಟ ಪಕ್ಷಗಳ ಬೆಂಬಲ ಬೇಕಾಗುತ್ತೆ. ಆದ್ರೆ, ಕನ್ಸರ್ವೇಟಿವ್ ಪಾರ್ಟಿಯು ಸರಕಾರ ರಚನೆ ಮಾಡೋದು ದೂರದ ಮಾತು. ಹಾಗಾಗಿ, ಮಾರ್ಕ್ ಕಾರ್ನಿ ಪ್ರಧಾನಿಯಾಗಿ ಮುಂದುವರಿಯಲಿದ್ದಾರೆ. ಈ ಬೆಳವಣಿಗೆಯು ಭಾರತದ ಪಾಲಿಗೆ ಸಂಬಂಧ ವೃದ್ಧಿಸಿಕೊಳ್ಳುವ ಅವಕಾಶವನ್ನು ತೆರೆದಿಟ್ಟಿದೆ. ಕೆಲವು ವರ್ಷಗಳಿಂದ ಜಸ್ಟಿನ್ ಟ್ರೂಡೋ ಆಡಳಿತದೊಂದಿಗೆ

**ಸ್ನೇಹ ಮತ್ತೆ ಚಿಗುರುವ ವಿಶ್ವಾಸ**

### ಭಾರತೀಯ ವಿದ್ಯಾರ್ಥಿಗಳಿಗೆ ಕೆನಡಾ ಮತ್ತೆ ಸೇಫ್?

**ಕೆನಡಾದಲ್ಲಿ ಮೂಲಭೂತ ಸೌಕರ್ಯಗಳು ಹಾಗೂ ವಸತಿ ವ್ಯವಸ್ಥೆಯನ್ನು ವಿಸ್ತರಿಸಲು ಸ್ಥಳೀಯ ಪ್ರತಿಭೆಗಳನ್ನು ಬಳಸಿಕೊಳ್ಳೋಕೆ ಮಾರ್ಕ್ ಕಾರ್ನಿ ಯೋಜನೆ ರೂಪಿಸಿದ್ದಾರೆ. ಹಾಗೇ ವಿದೇಶಿ ವಿದ್ಯಾರ್ಥಿಗಳು ಹಾಗೂ ವಲಸೆಯ ಬಗ್ಗೆ ಅನುಕೂಲಕರ ಕ್ರಮಗಳನ್ನು ಕೈಗೊಳ್ಳೋದಾಗಿ ಭರವಸೆ ಕೊಟ್ಟಿದ್ದಾರೆ. ಕೆನಡಾದಲ್ಲಿರುವ 4 ಲಕ್ಷಕ್ಕೂ ಹೆಚ್ಚು ವಿದೇಶಿ ವಿದ್ಯಾರ್ಥಿಗಳ ಸಮೂಹದಲ್ಲಿ ಭಾರತೀಯ ವಿದ್ಯಾರ್ಥಿಗಳ ಪಾಲು ದೊಡ್ಡದಿದೆ. ಲಿಬರಲ್ ಪಾರ್ಟಿಯ ಚುನಾವಣಾ ಪ್ರಣಾಳಿಕೆಯ ಪ್ರಕಾರ, ವಿದೇಶಿ ವಿದ್ಯಾರ್ಥಿಗಳು ಮತ್ತು ತಾತ್ಕಾಲಿಕ ಕೆಲಸಗಾರರ ಸಂಖ್ಯೆಯು ಕೆನಡಾದ ಒಟ್ಟು ಸಂಖ್ಯೆಯ ಶೇಕಡ 5ರಷ್ಟು ಮೀರದಂತೆ ಕ್ರಮವಹಿಸುವುದಾಗಿ ತಿಳಿಸಿದೆ.**



ಹದಗೆಟ್ಟಿರುವ ಸಂಬಂಧವನ್ನು ಮತ್ತೆ ಸರಿಪಡಿಸಿಕೊಳ್ಳಲು ಭಾರತವು ಪ್ರಮುಖ ಹೆಜ್ಜೆಯನ್ನು ಇಡಲಿದೆ.

ಕೆನಡಾದ ಬ್ರಿಟಿಷ್ ಕೊಲಂಬಿಯಾದಲ್ಲಿ ಖಲಿಸ್ತಾನಿ ಉಗ್ರಗಾಮಿ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ನಡೆದ ನಂತರ ಜಸ್ಟಿನ್ ಟ್ರೂಡೋ ಭಾರತದ ವಿರುದ್ಧ ಮುಗಿಬಿದ್ದಿದ್ದರು. ನಿಜ್ಜರ್ ಹತ್ಯೆಯಲ್ಲಿ ಭಾರತದ ಕೈವಾಡ ಇರುವುದಾಗಿ 2023ರ ಸೆಪ್ಟೆಂಬರ್‌ನಲ್ಲಿ ಟ್ರೂಡೋ ಆರೋಪಿಸಿದ್ದರು. ಅದು ರಾಜತಾಂತ್ರಿಕ ಸಂಬಂಧದಲ್ಲಿ ಬಿರುಕು ಮೂಡಿಸಿತ್ತು.

ಭಾರತದ ರಾಜತಾಂತ್ರಿಕ ಅಧಿಕಾರಿಗಳನ್ನು ಕೆನಡಾದಿಂದ ವಾಪಸ್ ಕಳಿಸಲಾಗಿತ್ತು. ಅದರಿಂದ ಪರಸ್ಪರ ನಂಬಿಕೆಗೆ ಹಾನಿಯಾಗಿತ್ತು. ಆದರೆ, ಮಾರ್ಕ್ ಕಾರ್ನಿ ಭಾರತದೊಂದಿಗೆ ವ್ಯಾಪಾರ ಸಂಬಂಧವನ್ನು ಮತ್ತಷ್ಟು ಗಟ್ಟಿ ಮಾಡಿಕೊಳ್ಳುವ ಮಾತನಾಡಿದ್ದಾರೆ.

ಭಾರತದೊಂದಿಗೆ ಪಾಲುದಾರಿಕೆಯನ್ನು ಹೆಚ್ಚಿಸಿಕೊಳ್ಳಲು ಉತ್ಸಾಹ ತೋರಿರುವುದು ಭಾರತದ ಪಾಲಿಗೆ ಒಳ್ಳೆಯ ವಿಚಾರವಾಗಿದೆ. ಹೊರ ದೇಶದಿಂದ ಬಂದ ನಾಗರಿಕರು ಶಾಶ್ವತವಾಗಿ ಕೆನಡಾದಲ್ಲಿ ನೆಲೆಸುವ ಅವಕಾಶವು ವಾರ್ಷಿಕ ಶೇಕಡ 1ರಷ್ಟು ಇರಲಿದೆ. ಕೆನಡಾಗೆ ವಲಸೆ ಬಂದವರಿಗೆ ವಸತಿ, ಉದ್ಯೋಗ ಹಾಗೂ ಆರೋಗ್ಯ ಸೇವೆಯನ್ನು ಪೂರೈಸುವ ನಿಟ್ಟಿನಲ್ಲಿ ಕ್ರಮವಹಿಸುವುದಾಗಿ ಮಾರ್ಕ್ ಕಾರ್ನಿ ಹೇಳಿದ್ದಾರೆ. ವಲಸಿಗರು, ವಿದೇಶಿ ವಿದ್ಯಾರ್ಥಿಗಳನ್ನು ಅಧಿಕೃತವಾಗಿ ಒಳಗೆ ಕರೆದುಕೊಳ್ಳಲು ಅವಕಾಶ ಕೊಟ್ಟಿರೋದ್ರಿಂದ ಭಾರತೀಯ ವಿದ್ಯಾರ್ಥಿಗಳಿಗೆ ಅನುಕೂಲ ಆಗಲಿದೆ. ವಿದ್ಯಾರ್ಥಿಗಳಿಗೆ ಅವಕಾಶ ಸಿಗುತ್ತದೆ ಆದರೆ, ಅಮೆರಿಕದ ವೀಸಾ ನೀತಿಗಳು ಕಠಿಣ ಆಗ್ತಿರೋದ್ರಿಂದ ಹೆಚ್ಚಿನ ವಿದ್ಯಾರ್ಥಿಗಳು ಕೆನಡಾ ಕಡೆಗೆ ಮುಖ ಮಾಡ್ತಿದ್ದಾರೆ. ಅದ್ರಿಂದಾಗಿ ಕಾಂಪಿಟೇಷನ್ ಜಾಸ್ತಿಯಾಗಲಿದೆ. ಇನ್ನು ವಿದೇಶಗಳ ತಾತ್ಕಾಲಿಕ ಕೆಲಸಗಾರರ ಸಂಖ್ಯೆ ಕಡಿಮೆ ಮಾಡೋದಾಗಿಯೂ ಘೋಷಣೆ ಮಾಡಿದ್ದು, ವರ್ಷಕ್ಕೆ 82,000 ಜನರಿಗೆ ಕೆನಡಾದಲ್ಲಿ ಕೆಲಸ ಮಾಡೋಕೆ ಅವಕಾಶ ಸಿಗಲಿದೆ.

### ನಿಜ್ಜರ್ ಹತ್ಯೆಯಿಂದ ಸಂಬಂಧ ಹಾಳು

**ಸೌದಿಯಿಂದ ಹಿಡಿದು ಸೌತ್ ಆಫ್ರಿಕಾದವರೆಗೂ, ಅಮೆರಿಕದಿಂದ ಹಿಡಿದು ಅಫ್ಘಾನಿಸ್ತಾನದವರೆಗೂ, ಪುಟ್ಟ ದ್ವೀಪ ರಾಷ್ಟ್ರಗಳಿಂದ ಹಿಡಿದು, ಬೃಹತ್ ಆರ್ಥಿಕತೆಯ ದೇಶಗಳವರೆಗೂ ಭಾರತವು ಬಾಂಧವ್ಯವನ್ನು ಗಟ್ಟಿ ಮಾಡಿಕೊಳ್ತಿದೆ. ಹೊಸ ಹೊಸ ವ್ಯಾಪಾರ ಒಪ್ಪಂದಗಳ ಮೂಲಕ ಸ್ನೇಹವನ್ನು ವಿಸ್ತರಿಸಿಕೊಳ್ಳುವ ಪ್ರಯತ್ನವನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರಕಾರವು ಮುಂದುವರಿಸಿದೆ. ಆದರೆ, ಪಾಕಿಸ್ತಾನ, ಚೀನಾ, ಕೆನಡಾ, ಬಾಂಗ್ಲಾ ದೇಶಗಳ ಜೊತೆಗಿನ ಸಂಬಂಧದಲ್ಲಿ ಬಿರುಕು ಕಾಣಿಸಿಕೊಂಡಿದೆ. ಬಾಂಗ್ಲಾ ಮತ್ತು ಚೀನಾ ಜೊತೆಗೆ ಬೇರೆ ರೀತಿಯಲ್ಲೇ ವಿದೇಶಾಂಗ ಸಚಿವಾಲಯವು ಡೀಲ್ ಮಾಡ್ತಿದೆ. ಇನ್ನೂ ಪಾಕಿಸ್ತಾನದೊಂದಿಗೆ ನೇರ ಮಾತುಕತೆಯನ್ನು ತಿರಸ್ಕರಿಸಿದೆ. ಆದರೆ, ಪಂಜಾಬ್ ಸೇರಿದಂತೆ ಭಾರತ ಮೂಲದ ಬಹಳಷ್ಟು ಜನರು ನೆಲೆ ಕಂಡುಕೊಂಡಿರುವ ಕೆನಡಾದೊಂದಿಗೆ ಸಂಬಂಧ ಹಳಸಿದೆ. ಕೆನಡಾದ ಮಾಜಿ ಪ್ರಧಾನಿ ಜಸ್ಟಿನ್ ಟ್ರೂಡೋ ಭಾರತದ ವಿರುದ್ಧ ಹಲವು ಆರೋಪಗಳನ್ನು ಮಾಡಿದ್ದರು. ಕೆನಡಾ ನೆಲೆದಲ್ಲಿ ನಡೆದ ದಾಳಿಯಲ್ಲಿ ಭಾರತದ ಇಂಟೆಲಿಜೆನ್ಸ್‌ನ ಕೈವಾಡ ಇರೋದಾಗಿ ನಿರಂತರವಾಗಿ ಆರೋಪಿಸಿದ್ದರು. ಅದರ ಬೆನ್ನಲ್ಲೇ ಭಾರತ ಮತ್ತು ಕೆನಡಾದ ರಾಜತಾಂತ್ರಿಕ ಸಂಬಂಧದಲ್ಲಿ ಗೊಂದಲ ಸೃಷ್ಟಿಯಾಗಿತ್ತು.**

## ಯಾರಾಗಲಿದ್ದಾರೆ ಮುಂದಿನ ಪೋಪ್..?



**ವ್ಯಾಟಿಕನ್ ಸಿಟಿ:** (ಎಪಿ) ಪೋಪ್ ಹುದ್ದೆಗೆ ಯಾವುದೇ ಅಧಿಕೃತ ಅಭ್ಯರ್ಥಿಗಳಿಲ್ಲ, ಆದರೆ ಕೆಲವು ಕಾರ್ಡಿನಲ್‌ಗಳನ್ನು ಪಾಪೈಲ್ ಎಂದು ಪರಿಗಣಿಸಲಾಗುತ್ತದೆ ಅಥವಾ ಪೋಪ್ ಆಗಲು ಅಗತ್ಯವಾದ ಗುಣಲಕ್ಷಣಗಳನ್ನು ಹೊಂದಿದ್ದಾರೆ. ಸೇಂಟ್ ಜಾನ್ ಪಾಲ್ 1978 ರಲ್ಲಿ ಪೋಪ್ ಹುದ್ದೆಯ ಮೇಲೆ ಶತಮಾನಗಳ ಕಾಲ ಇಟಾಲಿಯನ್ ಹಿಡಿತವನ್ನು ಮುರಿದ ನಂತರ, ಸ್ಪರ್ಧಿಗಳ ಕ್ಷೇತ್ರವು ಗಣನೀಯವಾಗಿ ವಿಸ್ತರಿಸಿದೆ. ಲ್ಯಾಟಿನ್ ಅಮೆರಿಕದ ಮೊದಲ ಧರ್ಮಗುರು ಪೋಪ್ ಫ್ರಾನ್ಸಿಸ್ ಅವರ ಉತ್ತರಾಧಿಕಾರಿಯನ್ನು ಆಯ್ಕೆ ಮಾಡಲು ಕಾರ್ಡಿನಲ್ ಗಳು ಮೇ 7 ರಂದು ಸಿಸ್ಟೈನ್ ಚಾಪೆಲ್ ಗೆ ಪ್ರವೇಶಿಸಿದಾಗ, ಅವರು ಎಲ್ಲಕ್ಕಿಂತ ಹೆಚ್ಚಾಗಿ ಕ್ಯಾಥೊಲಿಕ್ ಚರ್ಚ್ ಗೆ ಮಾರ್ಗದರ್ಶನ ನೀಡಬಲ್ಲ ಪವಿತ್ರ ವ್ಯಕ್ತಿಯನ್ನು ಹುಡುಕುತ್ತಿದ್ದಾರೆ.


ಅದರಾಚೆಗೆ, ಅವರು ಅವನ ಆಡಳಿತಾತ್ಮಕ ಮತ್ತು ಗ್ರಾಮೀಣ ಅನುಭವವನ್ನು ತೂಗುತ್ತಾರೆ ಮತ್ತು ಚರ್ಚ್ ಗೆ ಇಂದು ಏನು ಬೇಕು ಎಂಬುದನ್ನು ಪರಿಗಣಿಸುತ್ತಾರೆ.ಯಾವುದೇ ನಿರ್ದಿಷ್ಟ ಕ್ರಮದಲ್ಲಿ ಸಂಭಾವ್ಯ ಸ್ಪರ್ಧಿಗಳ ಆಯ್ಕೆ ಇಲ್ಲಿದೆ. ಕಾರ್ಡಿನಲ್‌ಗಳು ತಮ್ಮ ಮುಚ್ಚಿದ ಬಾಗಿಲು, ಪ್ರಿಕಾನ್‌ಕ ಅನ್ನು ಮುಂದುವರಿಸುತ್ತಿದ್ದಂತೆ ಪಟ್ಟಿಯನ್ನು ನವೀಕರಿಸಲಾಗುತ್ತದೆ. ಕಾರ್ಡಿನಲ್ ಪಿಯೆಟ್ರೊ ಪರೋಲಿನ್ ಹುಟ್ಟಿದ ದಿನಾಂಕ ಜನವರಿ 17, 1955 ರಾಷ್ಟ್ರೀಯತೆ ಇಟಾಲಿಯನ್ ಸ್ಥಾನ ಫ್ರಾನ್ಸಿಸ್ ಅನುಭವದ ಅಡಿಯಲ್ಲಿ ವ್ಯಾಟಿಕನ್ ರಾಜ್ಯ ಕಾರ್ಯದರ್ಶಿ ಹಿರಿಯ ವ್ಯಾಟಿಕನ್ ರಾಜತಾಂತ್ರಿಕರು ಕಾರ್ಡಿನಲ್ ಆದರು ಫ್ರಾನ್ಸಿಸ್ 70 ವರ್ಷದ ಹಿರಿಯ ರಾಜತಾಂತ್ರಿಕ ಫ್ರಾನ್ಸಿಸ್ ಅವರ ರಾಜ್ಯ ಕಾರ್ಯದರ್ಶಿಯಾಗಿದ್ದರು.

ತಿಮ್ಮಪ್ಪನಿಗೆ ನಟಿ ವಿಶೇಷ ಪೂಜೆ ಸಲ್ಲಿಕೆ



## ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ಆಶಿಕಾ ರಂಗನಾಥ್

ಕನ್ನಡದ ನಟಿ ಆಶಿಕಾ ರಂಗನಾಥ್ ಅವರು ಸಿನಿಮಾ ಕೆಲಸಕ್ಕೆ ಬ್ರೇಕ್ ಸಿಕ್ಕ ಬೆನ್ನಲ್ಲೇ ತಿರುಪತಿ ತಿಮ್ಮಪ್ಪನ ದರ್ಶನ ಪಡೆದಿದ್ದಾರೆ. ತಿಮ್ಮಪ್ಪನಿಗೆ ನಟಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.



ಅಕ್ಕ ಅನುಷಾ ಮತ್ತು ಭಾವನೊಂದಿಗೆ ಆಂಧ್ರಪ್ರದೇಶದ ತಿರುಪತಿ ತಿರುಮಲ ವೆಂಕಟೇಶ್ವರ ಸ್ವಾಮಿ ದೇಗುಲಕ್ಕೆ ಆಶಿಕಾ ಭೇಟಿ ನೀಡಿದ್ದಾರೆ. ತಿಮ್ಮಪ್ಪನಿಗೆ ಪೂಜೆ ಸಲ್ಲಿಸಿ ಕೆಲ ಕಾಲ ದೇವಸ್ಥಾನದಲ್ಲಿ ಸಮಯ ಕಳೆದಿದ್ದಾರೆ.

ಈ ವೇಳೆ, ಬಹುಭಾಷಾ ನಟಿ ಆಶಿಕಾರನ್ನು ಅಭಿಮಾನಿಗಳು ಸೆಲ್ಫಿಗಾಗಿ ಮುಗಿಬಿದ್ದಿದ್ದಾರೆ. ಕಳೆದ ವಾರ ಗೆಳತಿ ಅರ್ಚನಾ ಕೊಟ್ಟಿಗೆ ಮತ್ತು ಕ್ರಿಕೆಟರ್ ಶರತ್ ಮದುವೆಯಲ್ಲಿ ಮಿಂಚಿದ್ದರು. ದಿಯಾ ಖ್ಯಾತಿಯ ಖುಷಿ, ತೇಜಸ್ವಿ ಶರ್ಮಾ, ಸಿರಿ ಪ್ರಹ್ಲಾದ್ ಸೇರಿದಂತೆ ಅನೇಕರು ಅರ್ಚನಾ ಮದುವೆಯಲ್ಲಿ ಭಾಗಿಯಾಗಿದ್ದರು. ಸದ್ಯ ಕಾರ್ತಿ ನಟನೆಯ 'ಸರ್ದಾರ್ 2', ಮೆಗಾಸ್ಟಾರ್ ಚಿರಂಜೀವಿ ನಟನೆಯ 'ವಿಶ್ವಂಭರ', ಕನ್ನಡದ 'ಗತವೈಭವ' ಸೇರಿದಂತೆ ಹಲವು ಚಿತ್ರಗಳು ಆಶಿಕಾ ಕೈಯಲ್ಲಿವೆ.

## 'ಮಿಸ್ಟರ್ ಪರ್ಫೆಕ್ಷನಿಸ್ಟ್' ಹೆಸರು ಕೊಟ್ಟಿದ್ದು...

ಬಾಲಿವುಡ್‌ನ ಮೂವರು ಖಾನ್‌ಗಳಲ್ಲಿ ಆಮಿರ್ ಖಾನ್ ಸಹ ಒಬ್ಬರು. ಸಲ್ಮಾನ್, ಶಾರುಖ್ ರೀತಿ ಪಕ್ಕಾ ಕಮರ್ಶಿಯಲ್ ಸಿನಿಮಾ ಮಾಡದ ಆಮಿರ್ ಖಾನ್ ಒಳ್ಳೆಯ ಸಿನಿಮಾಗಳನ್ನೇ ಮಾಡುತ್ತಾ ಬಂದವರು. ಪಾತ್ರ ನಿರ್ವಹಿಸಲು ಯಾವ ಹಂತಕ್ಕೆ ಬೇಕಾದರೂ ಹೋಗುವ ಆಮಿರ್ ಖಾನ್ ಇದೇ ಕಾರಣಕ್ಕೆ ಪರ್ಫೆಕ್ಷನಿಸ್ಟ್ ಹೆಸರು ಪಡೆದುಕೊಂಡಿದ್ದಾರೆ ಎಂದುಕೊಳ್ಳಲಾಗಿದೆ. ಆದರೆ ಪರ್ಫೆಕ್ಷನಿಸ್ಟ್ ಹೆಸರು ಬಂದಿರುವುದು ಬೇರೆ ಕಾರಣಕ್ಕೆ, ಆ ಹೆಸರು ಕೊಟ್ಟವರು ಯಾರು ಕಾರಣ ಏನು ಇಲ್ಲಿದೆ ಮಾಹಿತಿ. ಖಾನ್ ತ್ರಯರಲ್ಲಿ ಒಬ್ಬರಾದ ಆಮಿರ್ ಖಾನ್, ಬಾಲಿವುಡ್‌ನ ಸ್ಟಾರ್ ನಟ. ಇತರೆ ಖಾನ್‌ಗಳಾದ ಶಾರುಖ್ ಖಾನ್ ಹಾಗೂ ಸಲ್ಮಾನ್ ಖಾನ್ ಪಕ್ಕಾ ಹಣ ಗಳಿಸುವ ಮಾಸ್ ಮಸಾಲ, ಕಮರ್ಶಿಯಲ್ ಸಿನಿಮಾಗಳನ್ನು ಮಾಡುತ್ತಾ ಕೋಟಿಗಳ ಮೇಲೆ ಕೋಟಿಗಳನ್ನು ಬಾಚುತ್ತಿದ್ದರೆ ಆಮಿರ್ ಖಾನ್ ಮಾತ್ರ ಸಂದೇಶ ಕೊಡುವ ಸಿನಿಮಾ, ಸದಭಿರುಚಿಯ, ಪರಿಪೂರ್ಣ ಸಿನಿಮಾಗಳನ್ನೇ ನೀಡುವ ಪ್ರಯತ್ನದಲ್ಲಿದ್ದಾರೆ. ಅತ್ತ ಸಲ್ಮಾನ್, ಶಾರುಖ್ 'ಟೈಗರ್ ಜಿಂದಾ ಹೇ', 'ಪಠಾಣ್', 'ಜವಾನ್' ರೀತಿಯ ಸಿನಿಮಾಗಳನ್ನು ಮಾಡುತ್ತಿದ್ದರೆ, ಇತ್ತ ಆಮಿರ್ ಖಾನ್ 'ಸಿತಾರೆ ಜಮೀನ್ ಪರ್' ಅಂಥಹಾ ಸಿನಿಮಾಗಳನ್ನು ಮಾಡುತ್ತಿದ್ದಾರೆ. ಇದೇ ಆಮಿರ್ ಖಾನ್‌ಗೂ ಇತರೆ ಖಾನ್‌ಗಳಿಗೂ ಇರುವ ವ್ಯತ್ಯಾಸ. ಆಮಿರ್ ಖಾನ್ ಎಷ್ಟೋ ವರ್ಷಕ್ಕೊಂದು ಸಿನಿಮಾ ಮಾಡುತ್ತಾರೆ ಆದರೆ ಮಾಡುವ ಸಿನಿಮಾವನ್ನು ಪರಿಪೂರ್ಣತೆಯಿಂದ ಮಾಡುತ್ತಾರೆ. ಸಿನಿಮಾದ ಪಾತ್ರ ನಿರ್ವಹಣೆಗೆ ಯಾವ ಹಂತಕ್ಕೆ ಬೇಕಾದರೂ ಹೋಗುತ್ತಾರೆ. ಒಂದು ಪಾತ್ರ ಒಪ್ಪಿಕೊಂಡರೆ ಆ ಪಾತ್ರವನ್ನೇ ಜೀವಿಸುತ್ತಾರೆ. ಇದೇ ಕಾರಣಕ್ಕೆ ಅವರನ್ನು ಬಾಲಿವುಡ್‌ನ 'ಮಿಸ್ಟರ್ ಪರ್ಫೆಕ್ಷನಿಸ್ಟ್' ಎಂದು ಕರೆಯಲಾಗುತ್ತದೆ. ಸಿನಿಮಾದ ಪ್ರತಿ ದೃಶ್ಯವೂ ಅವರಿಗೆ ಪರ್ಫೆಕ್ಟ್ ಆಗಿರಬೇಕು, ಪರ್ಫೆಕ್ಟ್ ಆಗಿಲ್ಲದಿದ್ದರೆ ಅವರು ಒಪ್ಪುವುದೇ ಇಲ್ಲ. ಇದೇ ಕಾರಣಕ್ಕೆ ಅವರ ಸಿನಿಮಾ ಬಹಳ ತಡವಾಗುತ್ತದೆ. ಆದರೆ ಆಮಿರ್ ಖಾನ್‌ಗೆ ಈ 'ಮಿಸ್ಟರ್ ಪರ್ಫೆಕ್ಷನಿಸ್ಟ್' ಹೆಸರು ಕೊಟ್ಟಿದ್ದು ಯಾರು ಮತ್ತು ಏಕೆ ಈ ವಿಷಯ ಅವರೇ ಹೇಳಿಕೊಂಡಿದ್ದಾರೆ.



ಹೆಸರು ಕೊಟ್ಟಿದ್ದು ಯಾರು


## ಮಾಡೆಲ್ ಮನೆಯಿಂದ ಕದ್ದ ಮನೆ ಕೆಲಸದಾಕೆ

ನಟಿ ನೇಹಾ ಮಲಿಕ್ ಅವರ ಮುಂಬೈನ ಮನೆಯಿಂದ 34 ಲಕ್ಷ ರೂಪಾಯಿ ಮೌಲ್ಯದ ಆಭರಣಗಳು ಕಳುವಾಗಿವೆ. ಪೊಲೀಸರು ನೇಹಾ ಅವರ ಮನೆ ಕೆಲಸದಾಕೆ ಶಹನತ್ ಶೇಖ್ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ಶಹನತ್ ಪ್ರಸ್ತುತ ತಲೆಮರೆಸಿಕೊಂಡಿದ್ದಾಳೆ. ಘಟನೆ ಸಂಭವಿಸಿದ ಸಮಯದಲ್ಲಿ ನೇಹಾ ಅವರ ತಾಯಿ ಮನೆಯಲ್ಲಿ ಇರಲಿಲ್ಲ. ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದಾರೆ.

ನಟಿ, ರೂಪದರ್ಶಿ ಮತ್ತು ಸೋಶಿಯಲ್ ಮಿಡಿಯಾ ಇನ್‌ಫ್ಲುಯೆನ್ಸರ್ ನೇಹಾ ಮಲಿಕ್ ಅವರ ಮನೆಯಿಂದ 34 ಲಕ್ಷ ರೂ. ಮೌಲ್ಯದ ಆಭರಣಗಳು ಕಳವಾಗಿವೆ ಎಂಬ ಮಾಹಿತಿ ಹೊರಬೀಳುತ್ತಿದೆ. ಈ ಪ್ರಕರಣದಲ್ಲಿ ಅಂಬೋಲಿ ಪೊಲೀಸರು ನೇಹಾ ಅವರ ಮನೆ ಕೆಲಸದಾಕೆಯ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ. ನೇಹಾ ಮನೆಯಲ್ಲಿ ಕೆಲಸ ಮಾಡುವ ಶಹನತ್ ಶೇಖ್ ಪ್ರಸ್ತುತ ತಲೆಮರೆಸಿಕೊಂಡಿದ್ದಾಳೆ. ಮುಂಬೈನ ಚಾರ್ ಬಂಗಲೋದಲ್ಲಿ ವಾಸಿಸುವ ನೇಹಾ ಅವರ ಮನೆಯಲ್ಲಿ ಶುಕ್ರವಾರ ಕಳ್ಳತನ ನಡೆದಿದೆ. ಆ ಸಮಯದಲ್ಲಿ, ನೇಹಾಳ ತಾಯಿ ಮಂಜು ಮಲಿಕ್ ಹತ್ತಿರದ ಗುರುದ್ವಾರಕ್ಕೆ ಪ್ರಾರ್ಥನೆ ಸಲ್ಲಿಸಲು ಹೋಗಿದ್ದರು. ಕೆಲಸದಾಕೆ ಶೆಹನಾಜ್ ಮನೆಯಲ್ಲಿ ಒಬ್ಬಂಟಿಯಾಗಿದ್ದಳು.



## ಕನ್ನಡಕ್ಕೆ ಬಂದ ಬಾಲಿವುಡ್ ಗಾಯಕ



ಬಾಲಿವುಡ್‌ನ ಸಂಗೀತ ನಿರ್ದೇಶಕ ಕಮ್ ಗಾಯಕ ಅಜಯ್ ಗೋಗವಾಲೆ ಅವರು ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟಿದ್ದಾರೆ. ಮೊದಲ ಬಾರಿಗೆ ಕನ್ನಡ ಚಿತ್ರಕ್ಕೆ ಅವರು ಹಾಡಿದ್ದಾರೆ. 'ದೂರದರ್ಶನ' ಚಿತ್ರ ನಿರ್ದೇಶಿಸಿದ್ದ ಸುಕೇಶ್ ಶೆಟ್ಟಿ ನಿರ್ದೇಶನದ 'ಪೀಟರ್' ಚಿತ್ರಕ್ಕೆ ಬಾಲಿವುಡ್ ಗಾಯಕ ಅಜಯ್ ಗೋಗವಾಲೆ ಹಾಡುವ ಮೂಲಕ ಕನ್ನಡ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಸ್ಟುಡಿಯೋಗೆ ಆಗಮಿಸಿ ತಮ್ಮ ಹಾಡಿನ ಭಾಗ ಪೂರ್ಣಗೊಳಿಸಿ ತೆರಳಿದ್ದಾರೆ. ಅಂದಹಾಗೆ, ಈ ಚಿತ್ರದಲ್ಲಿ 'ಅಗ್ನಿಸಾಕ್ಷಿ' ಖ್ಯಾತಿಯ ರಾಜೇಶ್ ಧ್ರುವ, ರವೀಕ್ಷಾ ಶೆಟ್ಟಿ, ಜಾನ್ವಿ ರಾಯಲ, ಪ್ರತಿಮಾ ನಾಯಕ್, ರಘು ಪಾಂಡೇಶ್ವರ್ ಸೇರಿದಂತೆ ಅನೇಕರು ನಟಿಸಿದ್ದಾರೆ. ವೃದ್ಧಿ ಸ್ಟುಡಿಯೋ ಬ್ಯಾನರ್ ಅಡಿಯಲ್ಲಿ ಈ ಚಿತ್ರ ನಿರ್ಮಾಣ ಮಾಡಲಾಗಿದೆ. ಕನ್ನಡ, ಮಲಯಾಳಂ, ತಮಿಳಿನಲ್ಲಿ ಸಿನಿಮಾ ಮೂಡಿ ಬರಲಿದೆ.

ಗೋಗವಾಲೆ ಕನ್ನಡ ಚಿತ್ರರಂಗಕ್ಕೆ ಎಂಟ್ರಿ

## ದೊಡ್ಮನೆ ಕುಡಿಗೆ ದುನಿಯಾ ವಿಜಯ್ ಪುತ್ರಿ ನಾಯಕಿ

ಎಕ್ಕ ಸಿನಿಮಾ ಬೆನ್ನಲ್ಲೇ ಹೊಸ ಸಿನಿಮಾವೊಂದನ್ನು ಯುವ ರಾಜ್‌ಕುಮಾರ್ ಒಪ್ಪಿಕೊಂಡಿದ್ದಾರೆ. ಖ್ಯಾತ ನಿರ್ದೇಶಕ ಸೂರಿ ಜೊತೆ ಕೈಜೋಡಿಸಿದ್ದಾರೆ. ಈ ಚಿತ್ರದಲ್ಲಿ ಯುವಗೆ ದುನಿಯಾ ವಿಜಯ್ ಪುತ್ರಿಗೆ ರಿತನ್ಯಾ ನಾಯಕಿಯಾಗಿದ್ದಾರೆ. ಬಹಳ ದಿನಗಳಿಂದ ಕೇಳಿ ಬರುತ್ತಿದ್ದ ಯುವರಾಜ್‌ಕುಮಾರ್ ಹಾಗೂ ನಿರ್ದೇಶಕ ಸೂರಿ ಸಿನಿಮಾಗೆ ಇಂದು (ಏ.30) ಅಧಿಕೃತವಾಗಿ ಚಾಲನೆ ಸಿಕ್ಕಿದೆ. ಅಕ್ಷಯ ತೃತೀಯದಿನವಾದ ಇಂದು ಬೆಂಗಳೂರಿನ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಸರಳವಾಗಿ ಮುಹೂರ್ತ ನೆರವೇರಿದೆ. ಸ್ಯಾಂಡಲ್‌ವುಡ್ ಸಲಗ ದುನಿಯಾ ವಿಜಯ್‌ಕುಮಾರ್ ಕ್ಲ್ಯಾಪ್ ಮಾಡಿದ್ದಾರೆ. ಅಪ್ಪು ಅವರ ಮಗಳು ಧೃತಿ ಕ್ಯಾಮೆರಾಗೆ ಚಾಲನೆ ಮಾಡಿ ಇಡೀ ತಂಡಕ್ಕೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಯುವ ಫ್ಯಾಮಿಲಿ, ಅಶ್ವಿನಿ ಪುನೀತ್ ರಾಜ್‌ಕುಮಾರ್, ಕಾರ್ತಿಕ್ ಗೌಡ, ಯೋಗಿ ಜಿ ರಾಜ್, ನಿರ್ದೇಶಕ ಸೂರಿ ಸೇರಿದಂತೆ ಇಡೀ ಚಿತ್ರತಂಡ ಉಪಸ್ಥಿತರಿದ್ದರು.


ದುನಿಯಾ, ಕೆಂಡಸಂಪಿಗೆ, ಬ್ಯಾಡ್ ಮ್ಯಾನರ್ಸ್, ಟಗರು ಸಿನಿಮಾಗಳ ಮೂಲಕ ಸಕ್ಸಸ್ ಕಂಡಿರೋ ಸೂರಿ ಗರಡಿಯಲ್ಲಿ ಯುವ ಅವರು ಯಾವ ರೀತಿ ಕಾಣಿಸಲಿದ್ದಾರೆ ಎಂಬ ಕುತೂಹಲ ಫ್ಯಾನ್ಸ್‌ಗೆ ಇದೆ. ದುನಿಯಾ ವಿಜಯ್ ಮೊದಲ ಪುತ್ರಿ ರಿತನ್ಯಾ ಈ ಚಿತ್ರದ ನಾಯಕಿಯಾಗಿದ್ದಾರೆ.



## ಶಾಹಿದ್ ಅಫ್ರಿದಿಗೆ ಬ್ಯಾನ್ ಶಾಕ್ ನೀಡಿದ ಭಾರತ ಸರ್ಕಾರ

ಭಾರತ ಸರ್ಕಾರವು ಪಾಕಿಸ್ತಾನದ ಮಾಜಿ ಕ್ರಿಕೆಟ್ ಆಟಗಾರ ಶಾಹಿದ್ ಅಫ್ರಿದಿ ಅವರ ಯೂಟ್ಯೂಬ್ ಚಾನೆಲ್ ಅನ್ನು ನಿಷೇಧಿಸಿದೆ. ಅಫ್ರಿದಿ ಅವರು ಭಾರತದ ವಿರುದ್ಧ ವಿವಾದಾತ್ಮಕ ಹೇಳಿಕೆಗಳನ್ನು ನೀಡಿದ್ದರಿಂದ ಈ ಕ್ರಮ ಕೈಗೊಳ್ಳಲಾಗಿದೆ. ಇದರ ಜೊತೆಗೆ, ಮತ್ತಿತರ ಪಾಕಿಸ್ತಾನಿ ಯೂಟ್ಯೂಬ್ ಚಾನೆಲ್‌ಗಳನ್ನು ಕೂಡ ನಿಷೇಧಿಸಲಾಗಿದೆ. ಈ ನಿಷೇಧದಿಂದ ಅಫ್ರಿದಿ ಅವರ ಯೂಟ್ಯೂಬ್ ಚಾನೆಲ್‌ನ ಬೆಳವಣಿಗೆ ಮತ್ತು ಆದಾಯದ ಮೇಲೆ ಪರಿಣಾಮ ಬೀರಲಿದೆ.

ಪಾಕಿಸ್ತಾನ ಕ್ರಿಕೆಟ್ ತಂಡದ ಮಾಜಿ ನಾಯಕ ಶಾಹಿದ್ ಅಫ್ರಿದಿ ವಿರುದ್ಧ ಮೋದಿ ಸರ್ಕಾರ ಕೊನೆಗೂ ಕ್ರಮ ಕೈಗೊಂಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತದ ವಿರುದ್ಧ ವಿಷ ಕಾರುತ್ತಿದ್ದ ಅಫ್ರಿದಿ ಭಾರತೀಯ ಸೇನೆಯ ಬಗ್ಗೆ ಪ್ರಶ್ನೆಗಳನ್ನು ಎತ್ತುತ್ತಿದ್ದರು. ಆದರೆ ಈಗ ಭಾರತ ಸರ್ಕಾರ ಶಾಹಿದ್ ಅಫ್ರಿದಿ ವಿರುದ್ಧ ಕ್ರಮ ಕೈಗೊಂಡಿದ್ದು, ಅಫ್ರಿದಿ ಅವರ ಯೂಟ್ಯೂಬ್ ಚಾನೆಲ್ ಅನ್ನು ಸಹ ನಿಷೇಧಿಸಿದೆ. ಇದರರ್ಥ ಇನ್ನು ಮುಂದೆ ಶಾಹಿದ್ ಅಫ್ರಿದಿ ಅವರ ಯೂಟ್ಯೂಬ್ ಚಾನೆಲ್ ಭಾರತದಲ್ಲಿ ಕಾಣಸಿಗುಸುವುದಿಲ್ಲ. ಶಾಹಿದ್ ಅಫ್ರಿದಿ ಅವರಿಗೂ ಮುನ್ನ ಮತ್ತೊಬ್ಬ ಸ್ಟಾರ್ ಕ್ರಿಕೆಟಿಗ ಶೊಯೇಬ್ ಅಖ್ತರ್ ಅವರ ಯೂಟ್ಯೂಬ್ ಚಾನೆಲ್ ಅನ್ನು ಸಹ ಭಾರತದಲ್ಲಿ ನಿಷೇಧಿಸಲಾಗಿತ್ತು. ಲಕ್ಷಾಂತರ ಚಂದಾದಾರರನ್ನು ಹೊಂದಿರುವ ಅಫ್ರಿದಿ ಭಾರತದಿಂದ ಸಾಕಷ್ಟು ವೀಕ್ಷಣೆಗಳನ್ನು ಪಡೆಯುತ್ತಿದ್ದರು.



ಯೂಟ್ಯೂಬ್ ಚಾನೆಲ್‌ಗಳ ವಿರುದ್ಧ ಕ್ರಮ

ಆದರೀಗ ಭಾರತ ಸರ್ಕಾರದ ಕ್ರಮ ಕೈಗೊಂಡಿರುವ ಕಾರಣ ಅಫ್ರಿದಿಗೆ ನಷ್ಟವಾಗುವುದಂತು ಖಚಿತ.

**ಭಾರತದ ಮೇಲೆ ವಿಷಕಾರಿದ್ದ ಅಫ್ರಿದಿ:** ಭಾರತದ ವಿರುದ್ಧ ಹಲವು ಹೇಳಿಕೆಗಳನ್ನು ನೀಡಿದ್ದ ಶಾಹಿದ್ ಅಫ್ರಿದಿ, 'ಪಹಲ್ಗಾಮ್ ಭಯೋತ್ಪಾದಕ ದಾಳಿಯು ಭಾರತೀಯ ಸೇನೆಯ ವೈಫಲ್ಯ. ಈ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನದ ಯಾವುದೇ ಪಾತ್ರವಿಲ್ಲ. ಭಾರತದಲ್ಲಿ ಪಟಾಕಿ ಸಿಡಿದರೆ ಜನರು ಪಾಕಿಸ್ತಾನವನ್ನು ದೂಷಿಸು ತ್ತಾರೆ. ಕಾಶ್ಮೀರದಲ್ಲಿ 8 ಲಕ್ಷ ಭಾರತೀಯ ಸೈನಿಕರಿದ್ದಾರೆ,

ಇದರ ಹೊರತಾಗಿಯೂ ಪಹಲ್ಗಾಮ್‌ನಲ್ಲಿ ಇದು ಸಂಭವಿಸಿದಲ್ಲಿ ಅದು ಭಾರತೀಯ ಸೇನೆಯ ವೈಫಲ್ಯ ಎಂದು ಅಫ್ರಿದಿ ಹೇಳಿದ್ದರು. ಮೇಲೆ ಹೇಳಿದಂತೆ ಶಾಹಿದ್ ಅಫ್ರಿದಿಗೂ ಮೊದಲು, ಭಾರತ ಸರ್ಕಾರವು ಅನೇಕ ಪಾಕಿಸ್ತಾನಿ ಯೂಟ್ಯೂಬ್ ಚಾನೆಲ್‌ಗಳ ವಿರುದ್ಧ ಕ್ರಮ ಕೈಗೊಂಡಿದೆ. ಶಾಹಿದ್ ಅಫ್ರಿದಿಗೂ ಮೊದಲು, ಸೋಮವಾರವೇ, ಭಾರತ ಸರ್ಕಾರ ಪಾಕಿಸ್ತಾನದ 16 ಜನಪ್ರಿಯ ಯೂಟ್ಯೂಬ್ ಚಾನೆಲ್‌ಗಳನ್ನು ನಿಷೇಧಿಸಿತ್ತು. ಇದರಲ್ಲಿ ಶೋಯೆಬ್ ಅಖ್ತರ್ ಮತ್ತು ಬಸಿತ್ ಅಲಿ ಅವರ ಯೂಟ್ಯೂಬ್ ಚಾನೆಲ್‌ಗಳು ಸಹ ಸೇರಿವೆ. ಇವುಗಳಲ್ಲದೆ, ಡಾನ್ ನ್ಯೂಸ್, ಸಮಾ ಟಿವಿ, ಎಆರ್‌ವೈ ನ್ಯೂಸ್, ಬೋಲ್ ನ್ಯೂಸ್, ಜಿಯೋ ನ್ಯೂಸ್, ಸಮಾ ಸ್ಪೋರ್ಟ್ಸ್‌ನಂತಹ ದೊಡ್ಡ ಚಾನೆಲ್‌ಗಳ ಯೂಟ್ಯೂಬ್ ಚಾನೆಲ್‌ಗಳನ್ನು ಸಹ ಭಾರತದಲ್ಲಿ ನಿಷೇಧಿಸಲಾಗಿದೆ.



## ತವರಲ್ಲಿ ಸಿಎಸ್‌ಕೆಗೆ ಭಾರೀ ಅವಮಾನ..

### ಧೋನಿ ಪಡೆಗೆ ಹಿಗ್ಗಾಮುಗ್ಗಾ ಬಾರಿಸಿದ ಶ್ರೇಯಸ್, ಪ್ರಭಸಿಮ್ರನ್

ತವರಿನಲ್ಲಿ ನಡೆದ ಐಪಿಎಲ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಕೂಲ್ ಕ್ಯಾಪ್ಟನ್ ಎಂ.ಎಸ್ ಧೋನಿ ನೇತೃತ್ವದ ಚೆನ್ನೈ ಸೂಪರ್ ಕಿಂಗ್ಸ್ ನೆಲ ಕಚ್ಚಿದೆ. 4 ವಿಕೆಟ್‌ಗಳಿಂದ ಪಂಜಾಬ್ ಅಮೋಘ ಗೆಲುವು ಪಡೆದಿದೆ.

ಚೆನ್ನೈ ಎಂ.ಎ ಚಿದಂಬರಂ ಮೈದಾನದಲ್ಲಿ ನಡೆದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಕ್ಯಾಪ್ಟನ್ ಶ್ರೇಯಸ್ ಅಯ್ಯರ್ ಟಾಸ್ ಗೆದ್ದುಕೊಂಡು ಚೆನ್ನೈ ತಂಡವನ್ನು ಮೊದಲ ಬ್ಯಾಟಿಂಗ್‌ಗೆ ಆಹ್ವಾನ ಮಾಡಿದರು. ಚೆನ್ನೈ ಪರವಾಗಿ ಓಪನರ್ಸ್ ಆಗಿ ಕ್ರೀಸ್‌ಗೆ ಬಂದ ಶೈಕ್ ರಶೀದ್ 11 ಹಾಗೂ ಆಯುಷ್ ಕೇವಲ 7 ರನ್‌ಗೆ ವಿಕೆಟ್ ಒಪ್ಪಿಸಿ ಹೊರ ನಡೆದರು. ಶೈಕ್ ರಶೀದ್ ಬಳಿಕ ಬ್ಯಾಟಿಂಗ್‌ಗೆ ಆಗಮಿಸಿದ ಸ್ಯಾಮ್ ಕರನ್ ಚೆನ್ನೈ ಮಾನ ಕಾಪಾಡಿದರು. ಅಲ್ಪಮೊತ್ತಕ್ಕೆ ಕುಸಿಯುತ್ತಿದ್ದ ತಂಡವನ್ನು ಸುಧಾರಿಸಿದರು.



ಪಂದ್ಯದಲ್ಲಿ 47 ಎಸೆತ ಎದುರಿಸಿದ ಕರನ್ 9 ಬೌಂಡರಿ, 4 ಸಿಕ್ಸರ್‌ಗಳಿಂದ 88 ರನ್ ಚಚ್ಚಿ ಕೀಪರ್ ಕ್ಯಾಚ್ ಆದರು. ಡೆವಾಲ್ಡ್ ಬ್ರೆವಿಸ್ 32 ರನ್ ಗಳಿಸಿ ಕ್ಲೀನ್ ಬೋಲ್ಡ್ ಆಗಿ ಪೆವಿಲಿಯನ್‌ಗೆ ಮುಖ ಮಾಡಿದರು.

ಕ್ಯಾಪ್ಟನ್ ಎಂ.ಎಸ್ ಧೋನಿ 11 ರನ್‌ಗೆ ಔಟ್ ಆಗಿ ಚೆನ್ನೈ ಫ್ಯಾನ್ಸ್‌ಗೆ ಶಾಕ್ ಕೊಟ್ಟರು. ಇವರ ನಂತರ ಬಂದ ಯಾವ ಬ್ಯಾಟರ್ ಕೂಡ 11 ರನ್ ಗಡಿ ದಾಟಲಿಲ್ಲ. ಹೀಗಾಗಿ ಚೆನ್ನೈ ಇನ್ನೂ 4 ಬಾಲ್ ಬಾಕಿ ಇರುವಾಗಲೇ ಆಲೌಟ್ ಆಗಿ 191 ರನ್ ಗುರಿ ನೀಡಿತ್ತು.

ಇನ್ನು ಪಂದ್ಯದಲ್ಲಿ ಪಂಜಾಬ್ ಪರ ಸ್ಪಿನ್ನರ್ ಯಜುವೇಂದ್ರ ಚಹಲ್ ಅವರು ಹ್ಯಾಟ್ರಿಕ್ ವಿಕೆಟ್ ಪಡೆದು ಈ ಸೀಸನ್‌ನ ಮೊದಲ ಬೌಲರ್ ಎನ್ನುವ ಖ್ಯಾತಿ ಪಡೆದರು.

ದೀಪಕ್ ಹೂಡಾ, ನೂರ್ ಅಹ್ಮದ್ ಕ್ಯಾಚ್ ಔಟ್ ಆದ್ರೆ ಅನ್ಶುಲ್ ಕಾಂಬೋಜ್ ಕ್ಲೀನ್ ಬೋಲ್ಡ್ ಆಗುವ ಮೂಲಕ ಚಹಲ್ ಹ್ಯಾಟ್ರಿಕ್ ವಿಕೆಟ್ ಸಂಭ್ರಮಿಸಿದರು.

## ಡಿಸಿಗೆ ಸತತ ಸೋಲು: ಅಂಕ ಪಟ್ಟಿಯಲ್ಲಿ ಮಹತ್ವದ ಬದಲಾವಣೆ

ಇಂಡಿಯನ್ ಪ್ರೀಮಿಯರ್ ಲೀಗ್‌ನ 48 ಪಂದ್ಯಗಳು ಮುಗಿದೆ. ಈ ಪಂದ್ಯಗಳ ಮುಕ್ತಾಯದ ಬೆನ್ನಲ್ಲೇ ಐಪಿಎಲ್ ಅಂಕ ಪಟ್ಟಿಯಲ್ಲೂ ಮಹತ್ವದ ಬದಲಾವಣೆಯಾಗಿದೆ. ಈ ಬಾರಿ ಅಗ್ರಸ್ಥಾನ ಅಲಂಕರಿಸಿರುವುದು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ. ಆಡಿರುವ 10 ಪಂದ್ಯಗಳಲ್ಲಿ 7 ಜಯ ಸಾಧಿಸಿರುವ ಆರ್‌ಸಿಬಿ 14 ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದೆ.



ಆರ್‌ಸಿಬಿ ಅಂಕಪಟ್ಟಿಯಲ್ಲಿ ಮೊದಲ ಸ್ಥಾನ

**ರಾಯಲ್ ಚಾಲೆಂಜರ್ಸ್ ಬೆಂಗಳೂರು:** ಆರ್‌ಸಿಬಿ ತಂಡವು 10 ಪಂದ್ಯಗಳಲ್ಲಿ 3 ರಲ್ಲಿ ಮ್ಯಾಚ್‌ಗಳಲ್ಲಿ ಮಾತ್ರ ಸೋಲನುಭವಿಸಿದೆ. ಇನ್ನುಳಿದ 7 ಪಂದ್ಯಗಳಲ್ಲಿ ಗೆದ್ದಿರುವ ಆರ್‌ಸಿಬಿ ಒಟ್ಟು 14 ಅಂಕಗಳನ್ನು ಹಾಕಿದೆ. +0.521 ನೆಟ್ ರನ್ ರೇಟ್ ಹೊಂದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಅಂಕಪಟ್ಟಿಯಲ್ಲಿ 1ನೇ ಸ್ಥಾನದಲ್ಲಿದೆ.

**ಮುಂಬೈ ಇಂಡಿಯನ್ಸ್:** ಹಾರ್ದಿಕ್ ಪಾಂಡ್ಯ ನೇತೃತ್ವದ ಮುಂಬೈ ಇಂಡಿಯನ್ಸ್ ತಂಡವು ಈವರೆಗೆ 10 ಪಂದ್ಯಗಳನ್ನಾಡಿದ್ದು, ಈ ವೇಳೆ 6 ಮ್ಯಾಚ್‌ಗಳಲ್ಲಿ ಜಯ ಸಾಧಿಸಿದೆ. ಅದರಂತೆ ಇದೀಗ +0.889 ನೆಟ್ ರನ್ ರೇಟ್‌ನೊಂದಿಗೆ 12 ಅಂಕಗಳನ್ನು ಪಡೆದಿರುವ ಮುಂಬೈ ಇಂಡಿಯನ್ಸ್ 2ನೇ ಸ್ಥಾನದಲ್ಲಿದೆ.

**ಗುಜರಾತ್ ಟೈಟಾನ್ಸ್:** ಶುಭ್‌ಮನ್ ಗಿಲ್ ಮುಂದಾಳತ್ವದ ಗುಜರಾತ್ ಟೈಟಾನ್ಸ್ ತಂಡವು ಈವರೆಗೆ 9 ಪಂದ್ಯಗಳನ್ನಾಡಿದ್ದು, ಈ ವೇಳೆ 6 ಪಂದ್ಯಗಳಲ್ಲಿ ಜಯ ಸಾಧಿಸಿದೆ. ಅದರಂತೆ +0.748 ನೆಟ್ ರನ್ ರೇಟ್‌ನೊಂದಿಗೆ ಒಟ್ಟು 12 ಅಂಕಗಳನ್ನು ಕಲೆಹಾಕಿ 3ನೇ ಸ್ಥಾನದಲ್ಲಿ ಕಾಣಿಸಿಕೊಂಡಿದೆ.

**ಡೆಲ್ಲಿ ಕ್ಯಾಪಿಟಲ್ಸ್:** ಅಕ್ಷರ್ ಪಟೇಲ್ ನಾಯಕತ್ವದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ಈವರೆಗೆ ಆಡಿದ 9 ಪಂದ್ಯಗಳಲ್ಲಿ 6 ಮ್ಯಾಚ್‌ಗಳಲ್ಲಿ ಜಯ ಸಾಧಿಸಿದೆ. ಈ ಮೂಲಕ +0.362 ನೆಟ್ ರನ್ ರೇಟ್‌ನೊಂದಿಗೆ ಒಟ್ಟು 12 ಅಂಕಗಳನ್ನು ಪಡೆದು 4ನೇ ಸ್ಥಾನ ಅಲಂಕರಿಸಿದೆ.

**ಪಂಜಾಬ್ ಕಿಂಗ್ಸ್:** ಶ್ರೇಯಸ್ ಅಯ್ಯರ್ ಮುಂದಾಳತ್ವದಲ್ಲಿ ಕಣಕ್ಕಿಳಿಯುತ್ತಿರುವ ಪಂಜಾಬ್ ಕಿಂಗ್ಸ್ ತಂಡವು ಆಡಿದ 9 ಮ್ಯಾಚ್‌ಗಳಲ್ಲಿ ಮೂರರಲ್ಲಿ ಸೋಲನುಭವಿಸಿದೆ. ಈ ಮೂಲಕ +0.177 ನೆಟ್ ರನ್ ರೇಟ್‌ನೊಂದಿಗೆ 11 ಅಂಕಗಳನ್ನು ಪಡೆದಿರುವ ಪಂಜಾಬ್ ಕಿಂಗ್ಸ್ ಅಂಕಪಟ್ಟಿಯಲ್ಲಿ 5ನೇ ಸ್ಥಾನದಲ್ಲಿದೆ.

**ಲಕ್ನೋ ಸೂಪರ್ ಜೈಂಟ್ಸ್:** ರಿಷಭ್ ಪಂತ್ ನಾಯಕತ್ವದ ಲಕ್ನೋ ಸೂಪರ್ ಜೈಂಟ್ಸ್ ತಂಡವು ಈವರೆಗೆ 10 ಪಂದ್ಯಗಳನ್ನಾಡಿದ್ದು, ಈ ವೇಳೆ 5 ರಲ್ಲಿ ಜಯ ಸಾಧಿಸಿ, ಐದು ಪಂದ್ಯಗಳಲ್ಲಿ ಸೋಲನುಭವಿಸಿದೆ. ಈ ಮೂಲಕ -0.325 ನೆಟ್ ರನ್ ರೇಟ್‌ನೊಂದಿಗೆ 6ನೇ ಸ್ಥಾನದಲ್ಲಿ ಕಾಣಿಸಿಕೊಂಡಿದೆ.


ಇನ್ನುಳಿದಂತೆ ಕೊಲ್ಕತ್ತಾ ನೈಟ್ ರೈಡರ್ಸ್ (9 ಅಂಕಗಳು), ಸನ್‌ರೈಸರ್ಸ್ ಹೈದರಾಬಾದ್ (6 ಅಂಕಗಳು), ರಾಜಸ್ಥಾನ್ ರಾಯಲ್ಸ್ (6 ಅಂಕಗಳು), ಚೆನ್ನೈ ಸೂಪರ್ ಕಿಂಗ್ಸ್ (4 ಅಂಕಗಳು) ಕ್ರಮವಾಗಿ 7 ರಿಂದ 10ನೇ ಸ್ಥಾನಗಳನ್ನು ಅಲಂಕರಿಸಿದೆ.

## ಈ ಬಾರಿ ಮುಂಬೈ ಇಂಡಿಯನ್ಸ್ ಚಾಂಪಿಯನ್ಸ್

ಇಂಡಿಯನ್ ಪ್ರೀಮಿಯರ್ ಲೀಗ್‌ನ 48 ಪಂದ್ಯಗಳು ಮುಗಿದಿದೆ. 48 ಪಂದ್ಯಗಳ ಮುಕ್ತಾಯದ ವೇಳೆಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದ್ದರೆ, ಮುಂಬೈ ಇಂಡಿಯನ್ಸ್ ದ್ವಿತೀಯ ಸ್ಥಾನದಲ್ಲಿದೆ. ವಿಶೇಷ ಎಂದರೆ ಆರಂಭಿಕ ಪಂದ್ಯಗಳಲ್ಲಿ ಸೋತು ಸುಣ್ಣವಾಗಿದ್ದ ಮುಂಬೈ ಇಂಡಿಯನ್ಸ್ ಬ್ಯಾಕ್ ಟು ಬ್ಯಾಕ್ 5 ಮ್ಯಾಚ್‌ಗಳಲ್ಲಿ ಗೆಲುವು ಸಾಧಿಸಿ ಇದೀಗ ಪ್ಲೇಆಫ್ ನತ್ತ ದಾಪುಗಾಲಿಟ್ಟಿದೆ. ಇದರ ಬೆನ್ನಲ್ಲೇ ಮುಂಬೈ ಇಂಡಿಯನ್ಸ್ ಅಭಿಮಾನಿಗಳ 'ಕರುಣ್ ನಾಯರ್ ಡಕ್ ಔಟ್' ಲೆಕ್ಕಾಚಾರವೊಂದು ಮುನ್ನಲೆಗೆ ಬಂದಿದೆ.

ಈ ಬಾರಿಯ ಐಪಿಎಲ್‌ನಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಆಟಗಾರ ಕರುಣ್ ನಾಯರ್ ಶೂನ್ಯಕ್ಕೆ ಔಟಾಗಿದ್ದರು. ಏಪ್ರಿಲ್ 16 ರಂದು ನಡೆದ ರಾಜಸ್ಥಾನ್ ರಾಯಲ್ ವಿರುದ್ಧದ ಪಂದ್ಯದಲ್ಲಿ ಕರುಣ್ ನಾಯರ್ ಡಕ್ ಔಟಾಗಿ ನಿರಾಸೆ ಮೂಡಿಸಿದ್ದರು. ಕರುಣ್ ಶೂನ್ಯಕ್ಕೆ ಔಟಾಗಿರುವುದೇ ಇದೀಗ ಮುಂಬೈ ಇಂಡಿಯನ್ಸ್ ಅಭಿಮಾನಿಗಳ ನಿರೀಕ್ಷೆಯನ್ನು ಹೆಚ್ಚಿಸಿದೆ.

ಕರುಣ್ ಡಕೌಟ್



ಏಕೆಂದರೆ ಕರುಣ್ ನಾಯರ್ ಡಕ್ ಔಟ್ ಆದ ಸೀಸನ್‌ಗಳಲ್ಲಿ ಮುಂಬೈ ಇಂಡಿಯನ್ಸ್ ತಂಡ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಇದೀಗ 4ನೇ ಬಾರಿ ಕರುಣ್ ನಾಯರ್ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದ್ದು, ಇದರ ಬೆನ್ನಲ್ಲೇ ಈ ಸಲ ಕಪ್ ನಮ್ದೆ ಎಂಬ ಲೆಕ್ಕಾಚಾರದಲ್ಲಿದ್ದಾರೆ ಮುಂಬೈ ಇಂಡಿಯನ್ಸ್ ತಂಡಗಳು ಅಭಿಮಾನಿಗಳು.

ಕರುಣ್ ನಾಯರ್ ಐಪಿಎಲ್‌ನಲ್ಲಿ ಮೊದಲ ಬಾರಿಗೆ ಡಕ್ ಔಟ್ ಆಗಿದ್ದು 2013 ರಲ್ಲಿ. ಆ ವರ್ಷ ಐಪಿಎಲ್ ಟ್ರೋಫಿ ಎತ್ತಿ ಹಿಡಿಯುವಲ್ಲಿ ಮುಂಬೈ ಇಂಡಿಯನ್ಸ್ ತಂಡ ಯಶಸ್ವಿಯಾಗಿತ್ತು. ಇದಾದ ಬಳಿಕ ಅವರು 2ನೇ ಬಾರಿ 2017 ರಲ್ಲಿ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದ್ದರು. ಆ ವರ್ಷ ಕೂಡ ಮುಂಬೈ ಇಂಡಿಯನ್ಸ್ ತಂಡವೇ ಚಾಂಪಿಯನ್ ಆಗಿ ಹೊರಹೊಮ್ಮಿತ್ತು.

ಇದಾದ ಬಳಿಕ ಕರುಣ್ ನಾಯರ್ 2020 ರಲ್ಲಿ ಡಕ್ ಔಟ್ ಆಗಿದ್ದರು. ಕಾಕತಾಳೀಯ ಎಂಬಂತೆ ಆ ವರ್ಷ ಕೂಡ ಮುಂಬೈ ಇಂಡಿಯನ್ಸ್ ತಂಡವೇ ಟ್ರೋಫಿಯನ್ನು ಎತ್ತಿ ಹಿಡಿದಿತ್ತು. ಇದೀಗ ಈ ಬಾರಿಯ ಟೂರ್ನಿಯಲ್ಲೂ ಕರುಣ್ ನಾಯರ್ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದ್ದಾರೆ. ಹೀಗಾಗಿ ಈ ಬಾರಿ ಕೂಡ ಮುಂಬೈ ಇಂಡಿಯನ್ಸ್ ತಂಡವೇ ಚಾಂಪಿಯನ್ ಪಟ್ಟ ಅಲಂಕರಿಸಲಿದೆ ಎಂಬ ವಿಶ್ವಾಸದಲ್ಲಿದ್ದಾರೆ ಮುಂಬೈ ಇಂಡಿಯನ್ಸ್ ಅಭಿಮಾನಿಗಳು.

ಅದರಂತೆ ಮೇ 25 ರಂದು ಕೊಲ್ಕತ್ತಾ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯಲಿರುವ ಐಪಿಎಲ್‌ನ ಫೈನಲ್ ಪಂದ್ಯಕ್ಕೆ ಮುಂಬೈ ಇಂಡಿಯನ್ಸ್ ಅರ್ಹತೆ ಪಡೆಯಲಿದೆಯಾ ಕರುಣ್ ನಾಯರ್ ಡಕ್ ಔಟ್ ಲೆಕ್ಕಾಚಾರದಂತೆ ಹಾರ್ದಿಕ್ ಪಾಂಡ್ಯ ಪಡೆ ಮತ್ತೊಮ್ಮೆ ಟ್ರೋಫಿ ಎತ್ತಿ ಹಿಡಿಯಲಿದೆಯಾ ಕಾದು ನೋಡಬೇಕಿದೆ.


**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**